ಸಂಪುಟ : 13 Volume | ಸಂಚಿಕೆ : 197 Issue | ಪುಟಗಳು : 08 Pages | ಗುರುವಾರ 18 ಸೆಪ್ಟೆಂಬರ್ 2025 | ₹2 | RNINO:KARKAN/2011/48371 | BDR/054/2026-20274 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

" ಪ್ರತಿಯೊಬ್ಬ ಮಾನವನಲ್ಲೂ ಸುಪ್ತವಾಗಿರುವ ದೈವೀ ಶಕ್ತಿಯನ್ನು ಪ್ರಕಟಗೊಳಿಸಿ ಪ್ರಕಾಶಿಸುವಂತೆ ಮಾಡುವುದೇ ನಿಜವಾದ ಧರ್ಮ "
- ಸ್ವಾಮಿ ವಿವೇಕಾನಂದ .

ತ್ಯಾಗ ಮನೋಭಾವ ಬೆಳೆಸಿಕೊಳ್ಳಬೇಕು 2
ನಿಜಾಮ ಆಳ್ವಿಕೆಯಿಂದ ಇಂದು ಮುಕ್ತಿ 4
ಇತಿಹಾಸ ಯುವ ಪೀಳಿಗೆಗೆ ಅರಿತುಕೊಳ್ಳಬೇಕು 8

# ಕಲ್ಯಾಣ ಕರ್ನಾಟಕ ಪ್ರತ್ಯೇಕ ಸಚಿವಾಲಯ ಮುಂದಿನ ವಾರ ಅಧಿಸೂಚನೆ:ಸಿ.ಎಂ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.17:ಕಲ್ಯಾಣಕರ್ನಾಟಕದಜಿಲ್ಲೆಗಳಿಗೆ ವಿಶೇಷ ಸ್ಥಾನಮಾನ ದೊರೆತರೂ ಇದುವರೆಗೆ ಇಲ್ಲಿ ಸಚಿವಾಲಯಸ್ಥಾಪನೆಯಾಗಿರಲಿಲ್ಲ.ಈಭಾಗದಜನರ ಬೇಡಿಕೆಯಂತೆ 371ಜೆ ಪರಿಣಾಮಕಾರಿ ಅನುಷ್ಠಾನ ಮತ್ತುಪ್ರದೇಶದಸಮಗ್ರಅಭಿವೃಧಿಗೆಮೇಲುಸ್ತುವಾರಿ ವಹಿಸಲು ಕಲ್ಯಾಣ ಕರ್ನಾಟಕ ಸಚಿವಾಲಯವನ್ನು ಸ್ಥಾಪಿಸಲು ನಿರ್ಧರಿಸಿದ್ದು, ಮುಂದಿನ ವಾರದೊಳಗೆ ಹುದ್ದೆಗಳ ಸಮೇತ ಅಧಿಸೂಚನೆ ಹೊರಡಿಸುತ್ತೇವೆ ಎಂದರು.

ಬುಧವಾರನಗರದಪೊಲೀಸ್‌ಪರೇಡ್‌ಮೈದಾನದಲ್ಲಿ ಕಲ್ಯಾಣಕರ್ನಾಟಕಉತ್ಸವದಿನಾಚರಣೆಅಂಗವಾಗಿ ರಾಷ್ಟ್ರಧ್ವಜಾರೋಹಣನೆರವೇರಿಸಿಮಾತನಾಡಿದಅವರು, ನೀರಾವರಿಗೆಮುಂದಿನ3ವರ್ಷಗಳಲ್ಲಿನಮ್ಮ ಸರ್ಕಾರವು 70,000 ಕೋಟಿ ರೂ. ಗಳಿಗೂ ಹೆಚ್ಚಿನ ಮೊತ್ತವನ್ನು ವಿನಿಯೋಗಿಸಲು ತೀರ್ಮಾನಿಸಿದೆ ಎಂದರು.

ಹೈದ್ರಾಬಾದಕನಾಟಕವಿಮೋಚಣೆಯಹೋರಾಟಗಾರರನ್ನು ಸ್ಮರಿಸಿದರು. ಕೆ.ಕೆ.ಆರ್.ಡಿ.ಬಿ. ಮಂಡಳಿಗೆ ಪ್ರಸಕ್ತ 2025-26ನೇ ಸಾಲಿಗೆ 5,000 ಕೋಟಿ ರೂಗಳನ್ನು ಒದಗಿಸಿದೆ.ಕಲ್ಯಾಣ ಕರ್ನಾಟಕ ಭಾಗದಲ್ಲಿ ಈ ವರ್ಷ ಹೆಚ್ಚಿನ ಮಳೆಯಾಗಿದ್ದರಿಂದ ಒಂದೆಡೆ ಅಣೆಕಟ್ಟುಗಳು ಭರ್ತಿಯಾದರೆಇನ್ನೊಂದೆಡೆಅತಿವೃಷ್ಟಿಯಿಂದಬೆಳೆಗಳಿಗೆ ಹಾನಿಯಾಗಿದೆ. ಜಂಟಿ ಸಮೀಕ್ಷೆ ಕಾರ್ಯವನ್ನು ಸಮರ್ಪಕವಾಗಿಮಾಡಿಬೆಳೆಪರಿಹಾರವನ್ನುಶೀಘ್ರವಾಗಿ ನೀಡಲುಕಂದಾಯ ಇಲಾಖೆಗೆಸೂಚನೆನೀಡಲಾಗಿದೆ ಎಂದರುಕೃಷಿಕ್ಷೇತ್ರದಲ್ಲಿತಂತ್ರಜ್ಞಾನದ ಏಕೀಕರಣದ ಅಗತ್ಯವಿರುವುದರಿಂದ ಕಲಬುರಗಿಯಲ್ಲಿ ಅಗ್ರಿ ಟೆಕ್ ವೇಗವರ್ಧಕ ಕೇಂದ್ರ ಸ್ಥಾಪಿಸಲಾಗುತ್ತದೆ ಎಂದರು.

ಅಕ್ಷರಆವಿಷ್ಕಾರದಲ್ಲಿ6,000ಕೋಟಿರೂ.ವೆಚ್ಚ:ಕಳೆದ ಎರಡು ವರ್ಷದಿಂದ ಅಕ್ಷರ ಆವಿಷ್ಕಾರ ಕಾರ್ಯಕ್ರಮ ರೂಪಿಸಿ ಇದೂವರೆಗೆ 6,000 ಕೋಟಿ ರೂ. ಗಳಿಗಿಂತ



ಹೆಚ್ಚಿನ ಅನುದಾನ ಖರ್ಚು ಮಾಡಲಾಗಿದೆ. ಕಲ್ಯಾಣ ಕರ್ನಾಟಕಜಿಲ್ಲೆಗಳಲ್ಲಿಒಟ್ಟು5,267ಶಿಕ್ಷಕರಹುದ್ದೆಗಳು ಖಾಲಿಯಿದ್ದು,ಇವುಗಳನ್ನುಭರ್ತಿಮಾಡಲುಈಗಾಗಲೇ ಸೂಚನೆ ನೀಡಲಾಗಿದೆ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿಒಟ್ಟು350ಕೆ.ಪಿ.ಎಸ್.ಶಾಲೆಗಳನ್ನುಮುಂದಿನ ಎರಡುವರ್ಷಗಳಲ್ಲಿನಿರ್ಮಿಸುವಗುರಿಹೊಂದಿದ್ದೇವೆ. ಈ ವರ್ಷದಿಂದ 10ನೇ ತರಗತಿಯ ಮಕ್ಕಳಿಗೆ ವಿಶೇಷ ತರಗತಿಗಳನ್ನುಪ್ರಾರಂಭಿಸುತ್ತಿದ್ದೇವೆಎಂದರು.ಆರೋಗ್ಯ ಆವಿಷ್ಕಾರಕ್ಕೆ1,767ಕೋಟಿರೂ.:ಕಲ್ಯಾಣಕರ್ನಾಟಕದ ಜಿಲ್ಲೆಗಳಜನರಆರೋಗ್ಯವ್ಯವಸ್ಥೆಯನ್ನುಸಮಗ್ರವಾಗಿ ಸುಧಾರಿಸುವಉದ್ದೇಶದಿಂದಕಳೆದಎರಡುವರ್ಷದಲ್ಲಿ 1,797ಕೋಟಿರೂ.ಅನುದಾನಒದಗಿಸುವಮೂಲಕ ಆರೋಗ್ಯ ಆವಿಷ್ಕಾರಎಂಬವಿಶೇಷಕಾರ್ಯಕ್ರಮವನ್ನು ರೂಪಿಸಿದ್ದೇವೆ.ಕಲಬುರಗಿಯಲ್ಲಿ163ಕೋಟಿರೂ.ವೆಚ್ಚದಲ್ಲಿ ಸೂಪರ್‌ಸ್ಪೆಷಾಲಿಟಿಆಸ್ಪತ್ರೆಯನ್ನುಪ್ರಾರಂಭಿಸಲಾಗಿದೆ. ಇದಲ್ಲದೆ ಕಲಬುರಗಿಯಲ್ಲಿನಿಮ್ಹಾನ್ಸ್ ಮಾದರಿಯ ಸಂಸ್ಥೆಯನ್ನುಸ್ಥಾಪಿಸಲು100ಕೋಟಿ,ಇಂದಿರಾಗಾಂಧಿ ಮಕ್ಕಳ ಆರೋಗ್ಯ ಘಟಕ ಸ್ಥಾಪನೆಗೆ221 ಕೋಟಿ ರೂ. ಒದಗಿಸಲಾಗಿದೆ ಎಂದರು.

ಪದ್ಮಶ್ರೀಗಳಿಗೆ ವಿಶೇಷ ಸನ್ಮಾನ: ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಡಾ.ವಿಜಯಲಕ್ಷ್ಮೀ ದೇಶಮಾನೆ ಮತ್ತು ಕೊಪ್ಪಳದ ಭೀಮವ್ವ ದೊಡ್ಡಬಾಳಪ್ಪ ಅವರಿಗೆ ಮುಖ್ಯಮಂತ್ರಿ ಸಇದ್ದರಾಮಯ್ಯ ಸೇರಿದಂತೆಗಣ್ಯರು ವಿಶೇಷಸನ್ಮಾನಮಾಡಿಸತ್ಕರಿಸಿದರು.ಇದೇಸಂದರ್ಭದಲ್ಲಿ ಕಲಾ ನೇಷನ್ ಸಂಸ್ಥೆಯ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಈ ಸಂದರ್ಭದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಸಚವಿ ಡಿ.ಎಸ್.ಸುಧಾಕರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ,ನಗರಾಭಿವೃದ್ಧಿಸಚಿವಭೈರತಿಸುರೇಶ,ಕೆ.ಕೆ.ಆರ್ .ಡಿ.ಬಿ.ಅಧ್ಯಕ್ಷಡಾ.ಅಜಯ್‌ಸಿಂಗ್,ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಕರ್ನಾಟಕ ರೇಷ್ಮೆ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷೆ ಕನೀಜ್ ಫಾತಿಮಾ, ಸಂಸದ ರಾಧಾಕೃಷ್ಣದೊಡ್ಡಮನಿ, ಶಾಸಕರಾದಅಲ್ಲಮಪ್ರಭುಪಾಟೀಲ್,ವಿಧಾನಪರಿಷತ್ ಶಾಸಕರಾದಶಶೀಲ್‌ನಮೋಶಿ,ಬಿ.ಜಿ.ಪಾಟೀಲ,ತಿಪ್ಪಣಪ್ಪ ಕಮಕನೂರು, ಜಗದೇವ ಗುತ್ತೇದಾರ, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವೆಂದ್ರಪ್ಪ ಮರತೂರು, ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ ಚಿಂಚನಸೂರು, ಕಲಬುರಗಿ ಮಹಾನಗರ ಪಾಲಿಕೆಯ ಮೇಯರ್‌ವರ್ಷಾಜಾನೆ,ನಗರಾಭಿವೃದ್ಧಿಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಂ ಖಾನ್, ಗ್ಯಾರಂಟಿ ಯೋಜನೆ ಅನುಷ್ಠಾನಗಳ ಜಿಲ್ಲಾಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ, ಸರ್ಕಾರದ ಹೆಚ್ಚುವರಿ ಅಪರ ಮುಖ್ಯ ಕಾರ್ಯದರ್ಶಿ ಉಮಾಮಹಾದೇವನ್,ಪ್ರಾದೇಶಿಕಆಯುಕ್ತೆಜಹೀರಾ ನಸ್ರೀಮ್,ಕೆ.ಕೆ.ಆರ್.ಡಿ.ಬಿ.ಕಾರ್ಯದರ್ಶಿನಲಿನ್ ಅತುಲ್, ಜೆಸ್ಕಾಂ ಎಂ.ಡಿ. ಕೃಷ್ಣ ಭಾಜಪೇಯಿ, ಡಿ.ಸಿ. ಬಿ.ಫೌಜಿಯಾತರನ್ನುಮ್,ಕಲಬುರಗಿನಗರಪೊಲೀಸ್ ಆಯುಕ್ತಡಾ.ಎಸ್.ಡಿ.ಶರಣಪ್ಪ,ಎಸ್.ಪಿ.ಅಡ್ಡೂರುಶ್ರೀನಿವಾಸಲು,ಕೆ.ಕೆ.ಆರ್.ಟಿ.ಸಿ.ಎಂ.ಡಿಡಾ.ಬಿ.ಸುಶೀಲಾ, ಶಾಲಾಶಿಕ್ಷಣ ಇಲಾಖೆಯ ಅಪರ ಆಯುಕ್ತ ರಾಹುಲ ತುಕಾರಾಮ ಪಾಂಡ್ವೆ, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್‌ಸಿಂಗ್‌ಮೀನಾ,ಮಹಾನಗರಪಾಲಿಕೆಆಯುಕ್ತ ಅವಿನಾಶಶಿಂಧೆಸೇರಿದಂತೆವಿವಿಧಇಲಾಖೆಯಹಿರಿಯ ಅಧಿಕಾರಿಗಳು,ಇತರೆಚುನಾಯಿತಜನಪ್ರತಿನಿಧಿಗಳು, ಸಾರ್ವಜನಿಕರು, ಶಾಲಾ ಮಕ್ಕಳು ಇದ್ದರು. ಬಿ.ಎಚ್ .ನಿರಗುಡಿ, ಸುಜಾತಾ ಪಾಟೀಲ ಹಾಗೂ ಬಾನುಮತಿ ನಿರೂಪಿಸಿದರು.

## ಸೆ.24 ರ ರೆಡ್ಡಿ ಜನ ಸಂಘದ ಶತಮಾನೋತ್ಸವ ಮುಂದೂಡಿಕೆ: ಶಂಕರರೆಡ್ಡಿ ಚಿಟ್ಟಾ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಸೆ.17: ಇದೆ ಸೆಪ್ಟೆಂಬರ್ 24 ರಂದು ರೆಡ್ಡಿ ಜನ ಸಂಘದ ಶತಮಾನೋತ್ಸವ ಕಾರ್ಯಕ್ರಮ ಬೆಂಗಳೂರಿನಲ್ಲಿ ಏರ್ಪಡಿಸಲಾಗಿತ್ತು. ಕೆಲ ಕಾರಣಾಂತರದಿಂದ ಸಭೆಯನ್ನು ಮುಂದೂಡಲಾಗಿದೆ. ಸಭೆಯ ಮುಂದಿನ ದಿನಾಂಕವನ್ನು ನಂತರ ತಿಳಿಸಲಾಗುತ್ತದೆ ಎಂದು ರೆಡ್ಡಿ ಸಮಾಜದ ಜಿಲ್ಲಾ ಅಧ್ಯಕ್ಷ ಶಂಕರರೆಡ್ಡಿ ಚಿಟ್ಟಾ ರವರು ಪತ್ರಿಕಾ ಪ್ರಕಟಣೆಯ ಮುಖಾಂತರ ತಿಳಿಸಿದ್ದಾರೆ.

## ಸ್ವಚ್ಛತೆಯೇ ಸೇವೆ-2025 ಅಭಿಯಾನಕ್ಕೆ ಸಚಿವ ಈಶ್ವರ ಬಿ.ಖಂಡ್ರೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಸೆ.17 : ಅರಣ್ಯ, ಜೀವಿಶಾಸ್ತ್ರಹಾಗೂಪರಿಸರಸಚಿವರುಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಅವರಿಂದು ಶ್ರೀಕ್ಷೇತ್ರ ನರಸಿಂಹಝರಣಿ ದೇವಾಲಯ ಆವರಣದಲ್ಲಿ ಕಸತೆಗೆಯುವ ಮೂಲಕ ಸ್ವಚ್ಛತೆಯೇ ಸೇವೆ - 2025 (ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 2ರವರೆಗೆ) ಅಭಿಯಾನಕ್ಕೆ ಚಾಲನೆ ನೀಡಿದರು.

ನಂತರಮಾತನಾಡಿಸ್ವಚ್ಛತೆಕೇವಲಅಭಿಯಾನವಲ್ಲ,ಇದುಪ್ರತಿಯೊಬ್ಬರ ದೈನಂದಿನಬದುಕಿನಸಂಸ್ಕಾರವಾಗಬೇಕು.ಮಹಾತ್ಮಗಾಂಧೀಜಿಕನಸಾದ ಸ್ವಚ್ಛ ಮತ್ತು ಆರೋಗ್ಯಕರ ಭಾರತ ನಿರ್ಮಾಣ ನಮ್ಮೆಲ್ಲರ ಜವಾಬ್ದಾರಿ. ಸಾರ್ವಜನಿಕ ಸ್ಥಳಗಳ ಶೌಚತೆ ಮಾತ್ರವಲ್ಲ, ನಮ್ಮ ಮನೆ, ಬೀದಿ ಮತ್ತು ಪರಿಸರವನ್ನು ಸ್ವಚ್ಛವಾಗಿಡುವಮೂಲಕನಾವುಗಾಂಧೀಜಿಯವರಕನಸನ್ನು ನಿಜ ಮಾಡಬಹುದು ಎಂದು ಹೇಳಿದರು.

ಈಸಂದರ್ಭದಲ್ಲಿನಗರಸಭೆಅಧ್ಯಕ್ಷರಾದಮೊಹಮ್ಮದಗೌಸ್,ಬೀದರಜಿಲ್ಲಾ ಗ್ಯಾರಂಟಿಅನುಷ್ಠಾನಸಮಿತಿಅಧ್ಯಕ್ಷಅಮೃತರಾವಚಿಮಕೋಡೆ,ಜಿಲ್ಲಾಧಿಕಾರಿ ಶಿಲ್ಪಾಶರ್ಮಾ,ಜಿಲ್ಲಾಪಂಚಾಯತಮುಖ್ಯಕಾರ್ಯನಿರ್ವಾಹಕಅಧಿಕಾರಿ ಡಾ.ಗಿರೀಶ್‌ಬದೋಲೆ,ಜಿಲ್ಲಾಪಂಚಾಯತಉಪಕಾರ್ಯದರ್ಶಿಮುಕ್ಕಣ್ಣ ಕರಿಗಾರ,ಬೀದರನಗರಾಭಿವೃದ್ಧಿಕೋಶದಎಇಇಅರುಣಕುಮಾರ,ಎಸ್. ಎಸ್.ಜಿ. ಮಹಿಳಾ ಸದಸ್ಯರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸಿದ ಸಿಎಂ ಕಾರ್ಯಾಲಯ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಸೆ.17:ಪಟ್ಟಣದಜನತಾನಗರಕಾಲೋನಿಯಲ್ಲಿಮಳೆನೀರು ನಿಂತಿರುವುದರಿಂದ ಓಣಿಯವರಿಗೆ ಓಡಾಡಲು ತೊಂದರೆ ಉಂಟಾಗಿದೆ ಎಂದು ಪ್ರಜ್ವಲ್ ಗುಪ್ತ ಎಂಬುವರು ಮುಖ್ಯಮಂತ್ರಿಯವರ ಕಚೇರಿಯ ಕುಂದುಕೊರತೆ ವಿಭಾಗಕ್ಕೆ ಇಮೇಲ್ ಮುಖಾಂತರ ದೂರು ಸಲ್ಲಿಸಿದ್ದರು. ಇದನ್ನು ಗಮನಿಸಿದ ವಿಶೇಷ ಕರ್ತವ್ಯಾಧಿಕಾರಿಗಳು ಪರಿಶೀಲಿಸಿ ವರದಿ ನೀಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜನತಾ ನಗರ ಕಾಲೋನಿಯಲ್ಲಿನಿಂತಿರುವಮಳೆನೀರನ್ನುತೆಗೆದುಹಾಕಿಸಾರ್ವಜನಿಕರಿಗೆ ಓಡಾಡುವಂತೆ ಅನುಕೂಲ ಮಾಡಿಕೊಡಲಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ ತಿಳಿಸಿದ್ದಾರೆ.

## ಮುಡಾ ಮಾಜಿ ಆಯುಕ್ತ ದಿನೇಶ್ ಕುಮಾರ್ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಸೆ.17:ಹಣವರ್ಗಾವಣೆ,ಅಕ್ರಮನಿವೇಶನಹಂಚಿಕೆಗೆಸಂಬಂಧಿಸಿದ ಪ್ರಕರಣದಲ್ಲಿಜಾರಿನಿರ್ದೇಶನಾಲಯ(ಇಡಿ)ಮುಡಾಮಾಜಿಆಯುಕ್ತ ದಿನೇಶ್‌ಕುಮಾರ್ ಅವರನ್ನು ಬಂಧನಕ್ಕೊಳಪಡಿಸಿದೆ.ಮುಡಾಕೇಸ್‌ನಲ್ಲಿ ವಿಚಾರಣೆಗೆಂದುಸೆಪ್ಟೆಂಬರ್16ರಂದುಬೆಂಗಳೂರಿನಶಾಂತಿನಗರದಲ್ಲಿಇಡಿ ಕಚೇರಿಗೆದಿನೇಶ್‌ಕುಮಾರ್ ಆಗಮಿಸಿದ್ದರು.ಈವೇಳೆಇಡಿಅಧಿಕಾರಿಗಳು ವಿಚಾರಣೆ ಮಾಡಿ, ದಿನೇಶ್ ಅವರನ್ನ ಬಂಧನಕ್ಕೊಳಪಡಿಸಿದ್ದಾರೆ.

## ಮುಖ್ಯಮಂತ್ರಿಗಳಿಂದ ಬೆಳೆ ಹಾನಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.17:ಕಲ್ಯಾಣಕರ್ನಾಟಕಉತ್ಸವದಲ್ಲಿ ಭಾಗಿಯಾಗಲುಕಲಬುರಗಿಗೆಆಗಮಿಸಿರುವಮುಖ್ಯಮಂತ್ರಿ ಸಿದ್ದರಾಮಯ್ಯ ಅವರುಬುಧವಾರಕಲಬುರಗಿತಾಲೂಕಿನ ಫರಹತಾಬಾದಗ್ರಾಮದಲ್ಲಿಇತ್ತೀಚಿನಮಳೆಯಿಂದಾದ ಬೆಳೆ ಹಾನಿ ಪ್ರದೇಶ ವೀಕ್ಷಣೆ ಮಾಡಿದರು.

ರೈತ ಚೆನ್ನಬಸಪ್ಪ ಮತ್ತು ಸೂರ್ಯಕಾಂತ ಅವರ ಜಂಟಿ ಹೆಸರಿನಲ್ಲಿರುವ ಸರ್ವೆ ನಂ.50ರ 27 ಎಕರೆ 23ಗುಂಟೆಯಲ್ಲಿಬೆಳೆಯಲಾದತೊಗರಿಮಳೆಯಿಂದ ಸಂಪೂರ್ಣ ಬೆಳೆ ಕೊಚ್ಚಿ ಹೋಗಿದ್ದನ್ನು ವೀಕ್ಷಿಸಿದರು. ಮಳೆಯಿಂದಮೂರನೇಬಾರಿಗೆಬಿತ್ತಿದತೊಗರಿಸಂಪೂರ್ಣ ಹಾಳಾಗಿದೆ.ಬೆಳೆಚೆನ್ನಾಗಿದ್ದರೆಎಕರೆಗೆ 5-6 ಚೀಲ ತೊಗರಿ ಬೆಳೆತಿತ್ತು ಎಂದು ರೈತ ಸಿ.ಎಂ. ಅವರಲ್ಲಿ ಅವಲತ್ತುಕೊಂಡನು.ಇನ್ನು ಜಂಟಿ ಕೃಷಿನಿರ್ದೇಶಕಸಮದ್‌ಪಟೇಲ್ ಅವರುಬೆಳೆಹಾನಿಕುರಿತುಸಿ.ಎಂ. ಅವರಿಗೆ ಮಾಹಿತಿ ನೀಡಿದರು.ಈ ಸಂದರ್ಭದಲ್ಲಿಸುದ್ದಿಗಾರರೊಂದಿಗೆ ಮಾತನಾಡಿದ ಸಿ.ಎಂ. ಅವರು, ಜಂಟಿ ಸಮೀಕ್ಷೆಯ ವರದಿ ಬಳಿಕ ಬೆಳೆಪರಿಹಾರನೀಡಲಾಗುವುದು. ವರದಿಗೆಕಾಯುತ್ತಿರುವೆಎಂದರು.ಜಿಲ್ಲಾಕೃಷಿಕಸಮಾಜದ ಅಧ್ಯಕ್ಷ ಸಿದ್ರಾಮಪ್ಪ ಧಂಗಾಪೂರ ಮಾತನಾಡಿ, ಬೆಳೆ ವಿಮೆ ಹೊರತಾಗಿ ಎನ್.ಡಿ.ಆರ್.ಎಫ್ ಪರಿಹಾರದ ಜೊತೆಗೆ ರಾಜ್ಯ ಸರ್ಕಾರ ಹೆಚ್ಚುವರಿಯಾಗಿ ಪರಿಹಾರ ಘೋಷಿಸಬೇಕು. ಹಿಂಗಾರು ಬೆಳೆ ಬಿತ್ತನೆಗೆ ಸಬ್ಸಿಡಿ ರೂಪದಲ್ಲಿ ಒದಗಿಸಬೇಕು ಎಂದು ಸಿ.ಎಂ. ಬಳಿ ರೈತ ನಿಯೋಗದೊಂದಿಗೆ ಮನವಿ ಮಾಡಿಕೊಂಡರು.

ಈಸಂದರ್ಭದಲ್ಲಿಸಚಿವ ಪ್ರಿಯಾಂಕ್ ಖರ್ಗೆ, ಕೆ.ಕೆ. ಆರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್, ಶಾಸಕ ಅಲ್ಲಮಪ್ರಭುಪಾಟೀಲ,ಡಿಸಿ.ಬಿ.ಫೌಜಿಯಾತರನ್ನುಮ್, ನಗರಪೊಲೀಸ್‌ಅಯುಕ್ತಡಾ.ಎಸ್.ಡಿ.ಶರಣಪ್ಪಇದ್ದರು.

## ಹೈ.ಕ.ವಿಮೋಚನೆಯ ಹರಿಕಾರನಿಗೆ ಸಿ.ಎಂ. ಗೌರವ ನಮನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.17:ಕಲ್ಯಾಣಕರ್ನಾಟಕ ಉತ್ಸವಹಿನ್ನೆಲೆಯಲ್ಲಿಬುಧವಾರಕಲಬುರಗಿ ನಗರದ ಎಸ್.ವಿ.ಪಿ. ವೃತ್ತದಲ್ಲಿರುವ ಸರ್ದಾರ್‌ವಲ್ಲಭಭಾಯ್‌ಪಟೇಲ್‌ರವರ ಪ್ರತಿಮೆಗೆರಾಜ್ಯದಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಮಾಲಾರ್ಪಣೆಮಾಡಿ ಹೈದ್ರಾಬಾದಕರ್ನಾಟಕವಿಮೋಚನೆಯ ಹರಿಕಾರನಿಗೆ ಗೌರವ ಸಲ್ಲಿಸಿದರು.ಈ ಸಂದರ್ಭದಲ್ಲಿಸಚಿವರಾದ ಡಿ.ಎಸ್. ಸುಧಾಕರ್, ಪ್ರಿಯಾಂಕ್‌ಖರ್ಗೆ, ಭೈರತಿ ಸುರೇಶ, ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್, ಶಾಸಕರಾದ ಅಲ್ಲಮಪ್ರಭುಪಾಟೀಲ್,ವಿಧಾನಪರಿಷತ್ ಶಾಸಕರಾದಶಶೀಲ್‌ನಮೋಶಿ,ತಿಪ್ಪಣಪ್ಪಕಮಕನೂರು, ಜಗದೇವ ಗುತ್ತೇದಾರ, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿನಿಗಮದಅಧ್ಯಕ್ಷದೇವೆಂದ್ರಪ್ಪಮರತೂರು ಸೇರಿದಂತೆಅನೇಕಜನಪ್ರತಿನಿಧಿಗಳುಹಾಗೂಹಿರಿಯ ಅಧಿಕಾರಿಗಳು ಸಾಕ್ಷಿಯಾದರು.ಇದೇ ಸಂದರ್ಭದಲ್ಲಿ ಲಕ್ಷ್ಮಣ ದಸ್ತಿ ನೇತೃತ್ವದ ಕಲ್ಯಾಣ ಕರ್ನಾಟಕ ಭಾಗದ ಹೋರಾಟಗಾರರುಕಲ್ಯಾಣಕರ್ನಾಟಕಪ್ರದೇಶಾಭಿವೃದ್ಧಿಗೆ ಪ್ರತ್ಯೇಕಇಲಾಖೆಸೃಜಿಸಿಸರ್ಕಾರಿಆದೇಶಹೊರಡಿಸಿದಕ್ಕೆ ಸಿ.ಎಂ. ಅವರಿಗೆ ಅಭಿನಂದನೆ ಪತ್ರ ಸಲ್ಲಿಸಿದರು

## ಇವಿಎಂಗಳಲ್ಲಿ ಅಭ್ಯರ್ಥಿಗಳ ಕಲರ್ ಫೋಟೋ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಸೆ.17: ಬಿಹಾರ ವಿಧಾನಸಭಾ ಚುನಾವಣೆಯಿಂದ ಪ್ರಾರಂಭಿಸಿ,ಇನ್ನುಮುಂದೆಎಲೆಕ್ಟ್ರಾನಿಕ್ ಮತಯಂತ್ರಗಳು(ಇವಿಎಂ) ಅಭ್ಯರ್ಥಿಗಳಬಣ್ಣದಫೋಟೋಗಳನ್ನು ಹೊಂದಿರುತ್ತವೆ ಎಂದು ಕೇಂದ್ರ ಚುನಾವಣಾ ಆಯೋಗಬುಧವಾರ ತಿಳಿಸಿದೆ.

2015ರಿಂದ,ಇವಿಎಂಮತಪತ್ರಗಳಲ್ಲಿ ಅಭ್ಯರ್ಥಿಗಳ ಕಪ್ಪು ಮತ್ತು ಬಿಳಿ ಫೋಟೋಗಳನ್ನುಅಂಟಿಸಲಾಗುತ್ತಿದೆ. ಇದನ್ನು ಗುರುತಿಸಲು ಹಲವು ಮತದಾರರಿಗೆ ಕಷ್ಟವಾಗುತ್ತಿದೆ. ಹೀಗಾಗಿಚುನಾವಣಾಆಯೋಗಇದೇ ಮೊದಲ ಬಾರಿಗೆ ಮತಪತ್ರಗಳಲ್ಲಿ ಬದಲಾವಣೆತರಲುಮುಂದಾಗಿದ್ದು, ಸುಲಭವಾಗಿಓದಲುಮತ್ತುಮತದಾರ ಸ್ನೇಹಿ ಮತಪತ್ರಗಳ ಬಿಡುಗಡೆಗೆ ಕ್ರಮಕೈಗೊಂಡಿದೆ.ಇದುಬಿಹಾರ ವಿಧಾನಸಭೆಚುನಾವಣೆಯಿಂದಲೇ ಅನ್ವಯವಾಗಲಿದೆ.

ಸರಣಿಸಂಖ್ಯೆಯನ್ನುಯಂತ್ರಗಳಲ್ಲಿ ಹೆಚ್ಚುಪ್ರಮುಖವಾಗಿಪ್ರದರ್ಶಿಸಲಾಗುತ್ತದೆ ಎಂದುಭಾರತಚುನಾವಣಾಆಯೋಗ ಬುಧವಾರ ತಿಳಿಸಿದೆ.

ಇವಿಎಂ ಮತಪತ್ರಗಳ ವಿನ್ಯಾಸ ಮತ್ತು ಮುದ್ರಣದ ಸ್ಪಷ್ಟತೆ ಮತ್ತು ಓದುವಿಕೆಯನ್ನುಹೆಚ್ಚಿಸಲು1961ರ ಚುನಾವಣಾನೀತಿನಿಯಮಗಳು,ಸೆಕ್ಷನ್ 49ಬಿಅಡಿಯಲ್ಲಿಅಸ್ತಿತ್ವದಲ್ಲಿರುವ ಮಾರ್ಗಸೂಚಿಗಳನ್ನುಪರಿಷ್ಕರಿಸಲಾಗಿದೆ

## ಕೊತಲಾಪೂರ ಯಲ್ಲಮ್ಮ ದೇವಸ್ಥಾನ ಕಳವು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ; ಸೆ.17:ಜಿಲ್ಲೆಯ ಚಿತ್ತಾಪುರಪಟ್ಟಣದಬಾಹರಪೇಟ್ ಸಮೀಪದಕೊತಲಾಪೂರಯಲ್ಲಮ್ಮ ದೇವಸ್ಥಾನದ ಬಾಗಿಲಿನ ಕೀಲಿ ಕೈ ಮುರಿದು ಒಳಗಡೆಯ ದೇವಿಯ ಬೆಳ್ಳಿಮೂರ್ತಿಯಎರಡುಕೈಗಳನ್ನು ಕಟ್‌ಮಾಡಿಕಳ್ಳರುತೆಗೆದುಕೊಂಡು ಹೋಗಿರುವ ಘಟನೆ ಜರುಗಿದೆ.

ನವರಾತ್ರಿ ನಿಮಿತ್ತ ದೇವಸ್ಥಾನಕ್ಕೆ ಸುಣ್ಣ ಬಣ್ಣ ಮಾಡಿ ಅಲಂಕಾರ ಕಾರ್ಯನಡೆಯುತ್ತಿದೆಅದರಂತೆ ಮಂಗಳವಾರ ಕೊನೆ ಹಂತಕ್ಕೆ ತಲುಪಿತ್ತು. ಉಳಿದ ಕಾರ್ಯ ನಾಳೆ ಮಾಡಿದರಾಯಿತು ಎಂದು ದೇವಸ್ಥಾನದಗೇಟ್‌ಮುಚ್ಚಿಕೀಲಿಕೈ ಹಾಕಿಹೋಗಲಾಗಿತ್ತು.ಎಂದಿನಂತೆ ಬುಧವಾರಬೆಳಗ್ಗೆದೇವಿಯಪೂಜೆ ಕಾರ್ಯಕ್ಕೆಅರ್ಚಕಮಂಜುನಾಥ ಜೀರ್ ಆಗಮಿಸಿದಾಗ ದೇವಸ್ಥಾನ ಗೇಟ್‌ಗೆಹಾಕಿದಕೀಲಿಕೈಮುರಿದು ಒಳಗಡೆ ಇರುವ ದೇವಿಯ ಬೆಳ್ಳಿ ಮೂರ್ತಿಯ ಎರಡು ಕೈಗಳನ್ನು ಕಟ್‌ಮಾಡಿಕಳ್ಳತನಆಗಿರುವುದು ಕಂಡುಬಂದಿದೆ

## 500 ನಂದಿನಿ ಮಾರಾಟ ಮಳಿಗೆ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.17ಹಾಲುಉತ್ಪಾದನೆ ಮತ್ತು ಮಾರಾಟಕ್ಕೆ ರಾಜ್ಯದಲ್ಲಿ ಪೂರಕವಾದವಾತಾವರಣವಿದ್ದು, ರಾಜ್ಯಸರ್ಕಾರದಸಹಕಾರದೊಂದಿಗೆ ದೇಶದಲ್ಲಿಯೇಹಾಲುಉತ್ಪಾದನೆ ಮತ್ತುಮಾರಾಟದಲ್ಲಿನಂದಿನಿಬ್ರ್ಯಾಂಡ್ ನಂಬರ್-1 ಮಾಡುವ ನಿಟ್ಟಿನಲ್ಲಿ ಕೆ.ಎಂ.ಎಫ್. ಮುಂದಾಗಬೇಕು ಎಂದುಮುಖ್ಯಮಂತ್ರಿಸಿದ್ದರಾಮಯ್ಯ ಹೇಳಿದರು.

ಬುಧವಾರಕಲಬುರಗಿನಗರದ ಬಸ್ ನಿಲ್ದಾಣ ಬಳಿ ಕೆ.ಎಂ.ಎಫ್. ಅಧೀನದರಾಜ್ಯದಾದ್ಯಂತ 500 ನಂದಿನಿಮಾರಾಟಮಳಿಗೆಉದ್ಘಾಟಿಸಿ ಮಾತನಡಿದಅವರು, ಗುಜರಾತಿನ ಅಮುಲ್‌ಕಂಪನಿದೇಶದಲ್ಲಿಯೇ ಹಾಲುಉತ್ಪಾದನೆಯಲಿಮೊದಲನೇ ಸ್ಥಾನದಲ್ಲಿದ್ದು,

ನಂತರದ ಸ್ಥಾನ ನಂದಿನಿಗಿದೆ. ರಾಜ್ಯದಲ್ಲಿಹಾಲುಉತ್ಪಾದಕರಿಗೆಪ್ರತಿ ಲೀಟರಿಗೆ5ರೂ.ಪ್ರೋತ್ಸಾಹಧನ ನೀಡಲಾಗುತ್ತಿದ್ದು,ಇದರಪ್ರಯೋಜನೆ ಪಡೆದುಹಾಲುಉತ್ಪನ್ನಹೆಚ್ಚಿಸಿಕೊಂಡು ಮುಂದಿನ ದಿನದಲ್ಲಿ ನಂಬರ್ 1 ಸ್ಥಾನಕ್ಕೆ ಬರಬೇಕು ಎಂದರು.

ಹಿಂದೆ2013-18ರನಮ್ಮ ಸರ್ಕಾರ ಅವಧಿಯಲ್ಲಿ ಹಾಲು ಉತ್ಪಾದನೆ ಹೆಚ್ಚಿದೆ, ಮಾರಾಟ ಇಲ್ಲ ಎಂದು ಕೆ.ಎಂ.ಎಫ್.ಒಕ್ಕೂಟದವರುನನ್ನ ಬಳಿ ಬಂದಿದ್ದರು.

ನಂ.1 ಬೌಲರ್ :ಭಾರತದ ಸ್ಪಿನ್ನರ್ ವರುಣ್ ಚಕ್ರವರ್ತಿ ತಮ್ಮ ಸ್ಥಿರ ಫಾರ್ಮ್‌ಗಾಗಿ ನಂ.1 ಬೌಲರ್ ಐಸಿಸಿ ರ್ಯಾಂಕ್ ಗಳಿಸಿದ್ದಾರೆ.



ಬೀದರ: ಕಲ್ಯಾಣ ಕರ್ನಾಟಕ ಧ್ವಜಾರೋಹಣ ದಿನಾಚರಣೆ ಅಂಗವಾಗಿ ಬೀದರ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯಲ್ಲಿ ಸಂಸ್ಥೆಯ ಕಾರ್ಯದರ್ಶಿಗಳಾದ ಡಾ. ವಿರೇಂದ್ರ ಶಾಸ್ತ್ರಿ ಧ್ವಜಾರೋಹಣ ನೆರವೇರಿಸಿದರು. ಆಡಳಿತ ಮಂಡಳಿ ಸದಸ್ಯರು ವೀರಕುಮಾರ ಮಜಗೆ, ಪ್ರಕಾಶ ಪಾಟೀಲ. ವೈಜಿನಾಥ ಪಾಟೀಲ, ಹಾಗೂ ಬಸವರಾಜ ಬೇಲೂರೆ ಹಾಜರಿದ್ದರು.



ಭಾಲ್ಕಿ: ಪಟ್ಟಣದ ಸರ್ದಾರ ವಲ್ಲಭಭಾಯಿ ಪಟೇಲರ ವೃತ್ತದಲ್ಲಿ ನಡೆದ ಧ್ವಜಾರೋಹಣ ಕಾರ್ಯಕ್ರಮವನ್ನು ದೆಹಲಿಯ ವೈಜಿನಾಥ ಬಿರಾದಾರ ನೆರವೇರಿಸಿದರು. ಸರ್ದಾರ ವಲ್ಲಭಭಾಯಿ ಪಟೇಲ ಸಮನ್ವಯ ಸಮಿತಿಯ ಅಧ್ಯಕ್ಷ ಓಂಪ್ರಕಾಶ ರೊಟ್ಟೆ, ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೆರೆ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ, ಐಜಿಕ್ ಬಂಗಾರೆ, ಪುರಸಭೆ ಅಧ್ಯಕ್ಷ ಶಶಿಕಲಾ ಸಿಂಧನಕೆರೆ ಇದ್ದರು.



ಕಮಲನಗರ:ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದ ನಿಮಿತ್ಯ ಕಮಲನಗರ ತಾಲೂಕಿನ ಮುಧೋಳ (ಬಿ) ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾದ ಗುರುನಾಥ್ ವಟಗೆ ಅವರು ಧ್ವಜಾರೋಹಣವನ್ನು ಮಾಡಿದರು. ಈ ಸಂದರ್ಭದಲ್ಲಿ ಪಿ. ಕೆ. ಪಿ.ಎಸ್. ಕಾರ್ಯದರ್ಶಿಗಳಾದ ಬಸವರಾಜ ಸ್ವಾಮಿ ನಿರ್ದೇಶಕರು ಬಾಬುರಾವ್ ರಕ್ಷಾಳೆ, ರಾಜೇಂದ್ರ ಜಾಧವ್, ಶಿವಾಜಿ ಬಿರಾದಾರ್ ಪಂಡರಿ ಶೇರಿಕಾರ, ಸಂಗೀತಾ ಗುಡ್ಡ, ಸುನಿತಾ ಬಸವರಾಜ್ ಹಳಕಾಯಿ, ಕಲಿಮೋದ್ದಿನ ಶೇಖ,ನಾಗಯ್ಯ ಸ್ವಾಮಿ, ರಾಜಕುಮಾರ ಬಿಚ್ಚುಂದೆ, ವಿಶ್ವನಾಥ ಹಲ್ಯಾಳೆ ವಿಠಲರಾವ ಬೂರಗಾಂವೆ ಸೇರಿದಂತೆ ಇನ್ನಿತರ ಇದ್ದರು.



ಕಮಲನಗರ:ತಾಲೂಕಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಡಿಗ್ಗಿಯಲ್ಲಿ, ಕಲ್ಯಾಣ ಕರ್ನಾಟಕ ಉತ್ಸವ ಮತ್ತು ವಿಶ್ವಕರ್ಮ ಜಯಂತಿ ಕಾರ್ಯಕ್ರಮ ಅದ್ದೂರಿಯಾಗಿ ಆಚರಣೆ ಮಾಡಲಾಯಿತು.ಮುಖ್ಯ ಅತಿಥಿ ದೇವೇಂದ್ರ ಪಾಟೀಲ ಮತ್ತು ಮಡಿವಾಳಪ್ಪ ಮುರ್ಕೆ ಪೂಜೆ ಸಲ್ಲಿಸಿ ಮಾತನಾಡಿದರು. ಎಸ್. ಡಿ. ಎಂ.ಸಿ ಅಧ್ಯಕ್ಷ ಸಂತೋಷ ಬನವಾಸೆ ಧ್ವಜಾರೋಹಣ ಮಾಡಿದರು, ಈ ಸಂದರ್ಭದಲ್ಲಿ ಮುಖ್ಯ ಗುರು ಸಂತೋಷ ಬಿರಾದಾರ ಸೇರಿದಂತೆ ಸಿಬ್ಬಂದಿ ಮತ್ತು ಬಾಬುರಾವ ಹರಪಾಳೆ, ಪರಮೇಶ ರಾಂಪುರೆ ಅಂಗನವಾಡಿ ಕಾರ್ಯಕರ್ತೆ ಸವಿತಾ ರಾಂಪುರೆ, ಸುವರ್ಣ ಹಾಗೂ ಅಡುಗೆ ಸಿಬ್ಬಂದಿ ಮತ್ತು ಮಕ್ಕಳು ಇದ್ದರು.

# ನಾಳೆ ಪಟ್ಟದ್ದೇವರ ಬ್ಯಾಂಕ್‌ನ ವಾರ್ಷಿಕ ಮಹಾಸಭೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.17:ಪಟ್ಟಣದಚನ್ನಬಸವಾಶ್ರಮ ಪರಿಸರದಲ್ಲಿ ಶುಕ್ರವಾರ ಮಧ್ಯಾಹ್ನ 12.30 ಗಂಟೆಗೆ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಗುರುಬಸವಪಟ್ಟದ್ದೇವರಸಾನ್ನಿಧ್ಯದಲ್ಲಿ ಡಾ.ಚನ್ನಬಸವ ಪಟ್ಟದ್ದೇವರು ಪತ್ತಿನ ಸಹಕಾರ ಸಂಘದ 22ನೆಯ ವಾರ್ಷಿಕ ಮಹಾಸಭೆ ಜರುಗಲಿದೆ. ಸಂಘದ



ಅಧ್ಯಕ್ಷಡಿ.ಕೆ.ಸಿದ್ರಾಮ ಅವರು ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಘದ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಣಪತಿ ಬಾವುಗೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ವಿದ್ಯಾರ್ಥಿಗಳು ದೇಶಪ್ರೇಮ, ತ್ಯಾಗ ಮನೋಭಾವ ಬೆಳೆಸಿಕೊಳ್ಳಬೇಕು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.17: ವಿದ್ಯಾರ್ಥಿಗಳು ಚಿಕ್ಕಂದಿನಿಂದಲೇ ದೇಶಪ್ರೇಮ, ತ್ಯಾಗ, ಸೇವಾ ಮನೋಭಾವ ಸೇರಿದಂತೆ ಉದಾತ್ತ ಗುಣಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಹಿರೇಮಠ ಸಂಸ್ಥಾನದ ಮಹಾಲಿಂಗ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಮುಚ್ಚಯದಲ್ಲಿ ಹಮ್ಮಿಕೊಂಡಿದ್ದ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕ ಭಾಗವನ್ನು ನಿಜಾಮನದಬ್ಬಾಳಿಕೆ,ದುರಾಡಳಿತದಿಂದ ಮುಕ್ತಗೊಳಿಸಲು ಶ್ರಮಿಸಿದ ಎಲ್ಲ ಮಹನೀಯರನ್ನು ನಾವು




ಆದರ್ಶವಾಗಿರಿಸಿಕೊಳ್ಳಬೇಕು. ಅವರ ತ್ಯಾಗ, ಬಲಿದಾನವನ್ನು ನೆನೆಯುತ್ತಾ ಸದೃಢ ಸಮಾಜ, ರಾಷ್ಟ್ರ ಕಟ್ಟಲು ಶ್ರಮಿಸಬೇಕು ಎಂದು ತಿಳಿಸಿದರು.

ವಿದ್ಯಾರ್ಥಿನಿಸಂಸ್ಕೃತಿ,ಆಡಳಿತಾಧಿಕಾರಿ ಮೋಹನ ರೆಡ್ಡಿ

ಮಾತನಾಡಿದರು.

ವಿವಿಧ ವಿಭಾಗಗಳ ಪ್ರಮುಖರಾದ ಮಹೇಶ ಮಹಾರಾಜ್, ಮಹೇಶ ಕುಲಕರ್ಣಿ, ಪ್ರವೀಣ ಖಂಡಾಳೆ, ಕಿರಣ ಸಜ್ಜನಶೆಟ್ಟಿ, ಸುಧಾಕರ

ಬಿರಾದರ, ರಾಜು, ಪ್ರಶಾಂತ ರೆಡ್ಡಿ, ಶಶಿಕುಮಾರ, ಅನಿಲ್ ಕುಮಾರ ಪಾಟೀಲ ಸೇರಿದಂತೆ ಅನೇಕರು ಇದ್ದರು.ಪಿಯು ಕಾಲೇಜಿನ ಉಪ ಪ್ರಾಚಾರ್ಯ ಸಿದ್ರಾಮ ಗೊಗ್ಗಾ ಸ್ವಾಗತಿಸಿದರು.ಮದನ್ ಗಾಂವ್ಕರ್ ನಿರೂಪಿಸಿದರು.ರಾಜಕುಮಾರ ಮೋರ್ಗೆ ವಂದಿಸಿದರು.

# ಕ.ಕ.ವಿಮೋಚನೆಗಾಗಿ ಹೋರಾಡಿದವರನ್ನು ಸ್ಮರಿಸುವ ಕಾರ್ಯವಾಗಲಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಸೆ.17:ಕಲ್ಯಾಣ ಕರ್ನಾಟಕ ವಿಮೋಚನೆಗಾಗಿ ಹೋರಾಡಿದ ಮಹನೀಯರನ್ನು ಸ್ಮರಿಸುವ ಕಾರ್ಯವಾಗಬೇಕು ಎಂದು ಬಿಕೆಐಟಿ ಉಪನ್ಯಾಸಕ ಪ್ರೊ। ಬಸವರಾಜ ಕಾವಡಿ ಹೇಳಿದರು.

ಪಟ್ಟಣದ ಪುರಭವನದಲ್ಲಿ ಬುಧವಾರ ನಡೆದ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ಮಂಡಿಸಿದ ಅವರು, ಭಾರತದೇಶ ಸ್ವಾತಂತ್ರದ ಸವಿಯಲ್ಲಿದ್ದರೂ ಕಲ್ಯಾಣ ಕರ್ನಾಟಕ ಭಾಗ ನಿಜಾಮನ ಆಡಳಿತದ ಕಪಿಮುಷ್ಠಿಯಲ್ಲಿ ನಲುಗುತ್ತಿತ್ತು. ಇಂತಹ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನೆಗಾಗಿ ಹೋರಾಡಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಮಹನೀಯರನ್ನು ಸ್ಮರಿಸುವ ಅಗತ್ಯತೆ ಇದೆ. ಅಂದಿನ ಕೇಂದ್ರ ಗೃಹ ಮಂತ್ರಿ ಸರ್ದಾರ ವಲ್ಲಭಭಾಯಿ ಪಟೇಲರು ಈ ಭಾಗದ ದೇವಮಾನವರು. ಅವರ ಕಾರ್ಯಾಚರಣೆಯಿಂದಲೇ ನಾವೆಲ್ಲರೂ ಸ್ವತಂತ್ರ ಭಾರತದಲ್ಲಿ




ಸುಂದರ ಬದುಕು ಕಟ್ಟಿಕೊಂಡಿರುವುದು ಎಂದು ಹೇಳಿದರು.

ತಹಸೀಲ್ದಾರಮಲ್ಲಿಕಾರ್ಜುನವಡ್ಡನಕೇರೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇವೇಳೆ ವಿಶ್ವಕರ್ಮ ದಿನಾಚರಣೆ ಆಚರಿಸಿ,ವಿಶ್ವಕರ್ಮ ಮಹನೀಯರಬಗ್ಗೆ ತಿಳುವಳಿಕೆಮೂಡಿಸಲಾಯಿತು.ಅಲ್ಲದೇ ಕ.ಕ.ವಿಮೋಚನೆಗಾಗಿ ಹೋರಾಡಿದ ಸ್ವಾತಂತ್ರ್ಯೋಧರ ಕುಟುಂಬಸ್ಥರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ, ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ ಸಿಂದನಕೆರೆ,ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಉಪ ತಹಸೀಲ್ದಾರ ಪಲ್ಲವಿ ಬೆಳಕೆರೆ, ಸಿಪಿಐ ಬಿ.ಅಮರೇಶ, ಪುರಸಭೆ ಮುಖ್ಯಾಧಿಕಾರಿ ಸಂಗಮೇಶ ಕಾರಬಾರಿ, ಎ.ಪಿ.ಎಮ್.ಸಿ ಅಧಿಕಾರಿ ರವೀಂದ್ರನಾಥ.ಎಮ್, ಕಸಾಪ ಅಧ್ಯಕ್ಷ ನಾಗಭೂಷಣ ಮಾಮಡಿ, ಸರ್ದಾರ ಪಟೇಲ ಸಮನ್ವಯ ಸಮಿತಿ ಅಧ್ಯಕ್ಷ ಓಂಪ್ರಕಾಶ ರೊಟ್ಟೆ, ಕೃಷಿ ಅಧಿಕಾರಿ

ಮಲ್ಲಿಕಾರ್ಜುನ.ಪಿ, ಮಲ್ಲಿನಾಥ ಸಜ್ಜನ್, ಮಲ್ಲಿಕಾರ್ಜುನ ಕನಾಳೆ, ತೋಟಗಾರಿಗೆ ಅಧಿಕಾರಿ ಮಾರುತಿ ಜಬನೂರ, ಸೋಮನಾಥಪ್ಪ ಅಸ್ಟೂರೆ, ಕಾಶಿನಾಥ ಲದ್ದೆ, ಕಾಶಿನಾಥ ಭೂರೆ, ಗುಂಡಪ್ಪ ಸಂಗಮಕರ, ಸುಭಾಷ ಹುಲಸೂರೆ, ಪ್ರಕಾಶ ಭಾವಿಕಟ್ಟಿ ಉಪಸ್ಥಿತರಿದ್ದರು.ಮಲ್ಲಿಕಾರ್ಜುನ ವಡ್ಡನಕೆರೆ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಚನ್ನಪ್ಪ.ಜಿ.ಹಳ್ಳದ್ ವಂದಿಸಿದರು.

# ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ಮನೆಗೆ ಭೇಟಿ ನೀಡಿದ ಸಚಿವ ಈಶ್ವರ ಬಿ.ಖಂಡ್ರೆ

ಬೀದರ,ಸೆ.17:ಬೀದರತಾಲೂಕಿನ ಖಾಶೆಂಪೂರ ಪಾನ್ ಗ್ರಾಮದಲ್ಲಿ ಇತ್ತೀಚೆಗೆ ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ಗಂಗಮ್ಮ ಶಂಕರ ಮಚಕುರಿ ಮನೆಗೆ ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಭೇಟಿ ನೀಡಿ ಸಾಂತ್ವನ ಹೇಳಿದರು.

ಸಮಸ್ಯೆಗಳಿಗೆ ಆತ್ಮಹತ್ಯೆ ಪರಿಹಾರವಲ್ಲ, ಕಷ್ಟಗಳನ್ನು ಎದುರಿಸಿ ಜೀವನದಲ್ಲಿ ಮುನ್ನುಗ್ಗಬೇಕು. ಜಿಲ್ಲಾಡಳಿತದಿಂದ 5 ಲಕ್ಷ ರೂಪಾಯಿ ಪರಿಹಾರ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಂತ್ರಸ್ತರಿಗೆ ಮನೆ ನೀಡಲು ಪರಿಶೀಲಿಸುವಂತೆ ಸ್ಥಳೀಯ ಗ್ರಾಪಂ ಪಿಡಿಓ ಗೆ ಸೂಚಿಸಿದರು. ನಂತರ ಖಾಶಂಪೂರ ಗ್ರಾಮದಲ್ಲಿ ಅತಿವೃಷ್ಠಿಯಿಂದ ಹಾಳಾದ



ಜಮೀನುಗಳಿಗೆ ಸಚಿವರು ಭೇಟಿ ನೀಡಿ ಬೆಳೆ ಹಾನಿ ವೀಕ್ಷಿಸಿದರು. ಬುಧೇರಾ ಗ್ರಾಮದ ಸೇತುವೆ ಕೆಳಮಟ್ಟದಲ್ಲಿರುವುದರಿಂದ ರಸ್ತೆಮುಳುಗಿ ಸಂಚಾರಕ್ಕೆ ತಡೆಯಾದದ್ದನ್ನು ವೀಕ್ಷಿಸಿದ ಸಚಿವರು ಕೆಕೆಆರ್‌ಡಿ ಅಡಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ, ಬೀದರ ನಗರಸಭೆ ಅಧ್ಯಕ್ಷರಾದ ಎಂ.ಡಿ.ಗೌಸ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಇಓ ಮಾಣಿಕರಾವ ಪಾಟೀಲ, ತಹಸೀಲ್ದಾರ ರವೀಂದ್ರ ದಾಮಾ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರರಾದ ಶಿವಶಂಕರ ಕಾಮಶೆಟ್ಟಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ದೇವಿಕಾ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

# ಹೈದ್ರಾಬಾದ ಕರ್ನಾಟಕದ ವಿಮೋಚನಾ ರುವಾರಿ ಸರ್ದಾರ ವಲಭಭಾಯಿ ಪಟೇಲ್ :ಡಾ. ರಜನೀಶ್ ಎಸ್. ವಾಲಿ

ಬೀದರ:ಸೆ.17:ನಗರದಬಿ.ವಿ.ಭೂಮರಡ್ಡಿ ಪದವಿ ಮಹಾವಿದ್ಯಾಲಯದಲ್ಲಿ ಹೈದ್ರಾಬಾದ ಕರ್ನಾಟಕ ವಿಮೋಚನಾ ದಿನಾಚರಣೆಯನ್ನು ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಡಳಿತ ಮಂಡಳಿ ಸದಸ್ಯರು ಹಾಗೂ ಬಿ.ವಿ.ಬಿ. ಮಹಾವಿದ್ಯಾಲಯದ ಆವರಣದ ಶಾಲಾ ಕಾಲೇಜುಗಳ ಸಂಚಾಲಕರಾದ ಡಾ. ರಜನೀಶ್ ಎಸ್.ವಾಲಿಯವರು ಅಮೃತ ಹಸ್ತದಿಂದ ಧ್ವಜಾರೋಹಣ ನಡೆಸಿಕೊಟ್ಟು ಮಾತನಾಡುತ್ತಾ ನಮ್ಮ ಭಾರತ ದೇಶ ಸ್ವತಂತ್ರ್ಯವಾದರು ಕಲ್ಯಾಣ ಕರ್ನಾಟಕದ ಜಿಲ್ಲೆಗಳಾದ ಬೀದರ, ಕಲಬುರಗಿ, ರಾಯಚೂರು, ಬಳ್ಳಾರಿ, ಕೊಪ್ಪಳ, ಯಾದಗಿರಿ, ವಿಜಯನಗರ, ಈ ಎಲ್ಲಾ ಭಾಗ ನಿಜಾಮನ ಕಪಿಮುಷ್ಠಿಯಲ್ಲಿತ್ತು ಭಾರತದಲ್ಲಿ ಸುಮಾರು 562 ಸಂಸ್ಥಾನಗಳಿದ್ದವು ಅದರಲ್ಲಿ ಕಾಶ್ಮೀರ, ಜುನಾಗಡ ಹಾಗೂ ಹೈದ್ರಾಬಾದ ಭಾಗಗಳು ಭಾರತದ ಆಡಳಿತದಲ್ಲಿ ಸೇರ್ಪಡೆಯಾಗಲಿಲ್ಲ ಭಾರತದ ಉಕ್ಕಿನ ಮನುಷ್ಯ ಎಂದೇ ಖ್ಯಾತಿ ಪಡೆದ ಭಾರತದ ಪ್ರಥಮ ಗೃಹ ಮಂತ್ರಿಯಾದ ಶ್ರೀ ಸರ್ದಾರ ವಲ್ಲಭಬಾಯಿ ಪಟೇಲ ಅವರ ದಿಟ್ಟ ನಿರ್ಧಾರದಿಂದ ಹೈದ್ರಾಬಾದ ನಿಜಾಮನ ಮೇಲೆ ಪೋಲಿಸ




ಕಾರ್ಯಚರಣೆ ಮಾಡಲಾಯಿತು ಈ ಒಂದು ಭಾರತದ ಸೈನ್ಯಕ್ಕೆ ಹೆದರಿ ಹೈದ್ರಾಬಾದ ನಿಜಾಮನು ಭಾರತದ ಸಂಸ್ಥಾನಕ್ಕೆ ಸೆಪ್ಟೆಂಬರ್ 17ರಂದು ಶರಣಾಗತನಾದನು. ಆದುದರಿಂದ ಇಂದಿನ ದಿನ ಹೆಮ್ಮೆಯ ದಿನ ಈ ಸ್ವತಂತ್ರ್ಯ ಹೋರಾಟಗಾರರ ನೆನಪನ್ನು ನಾವು ಸದಾ ನಮ್ಮ ಮನಸ್ಸಿನಲ್ಲಿ ಚಿರಸ್ಥಾಯಿಯಾಗಿ ನೆನೆಯಬೇಕೆಂದು ನುಡಿದರು.

ಮಹಾವಿದ್ಯಾಲಯಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ಮಾತನಾಡುತ್ತಾ ಹೈದ್ರಾಬಾದಿನ ಏಳನೇಯ ನಿಜಾಮನಾದ ನಿಜಾಮ–ಉಲ್–ಮುಲ್ಕ–ಆಸಫ್ ಝಾ ಈತನು ಭಾರತದ ಮೋಡಗಳು ನಮ್ಮ ಸಂಸ್ಥಾನದ ಮೇಲೆ ಬಂದರೆ ಇಲ್ಲಿನ ಹಿಂದುಗಳ ರುಂಡವನ್ನು ಚೆಂಡಾಡುವೇ ಎಂದು ಇಲ್ಲಿನ ಜನರಿಗೆ ಭಯಪಡಿಸಿದನು ಶೇಕಡಾ 80ರಷ್ಟು ಹಿಂದುಗಳು ಆತನ ದುರಾಡಳಿತಕ್ಕೆ ಬೇಸತ್ತು ಹೋಗಿದ್ದರು ಇಲ್ಲಿನ ಗೋರ್ಟಾ ಗ್ರಾಮ ದಕ್ಷಿಣ ಭಾರತದ ಜಲಿಯನ್ ವಾಲಾಬಾಗ ಎಂದು ಹೆಸರು ಪಡೆದಿದೆ ಗ್ರಾಮದ ಜನ ರಜಾಕಾರರ ವಿರುದ್ಧ ಹೋರಾಡಿದ ಕಥೆಗಳು ನಮ್ಮ ಕಣ್ಣಮುಂದೆ ಬರುವಂತೆ ಹೇಳುತ್ತಾರೆ ಅಂದಿನ ಮಹಾನ ಹೋರಾಟಗಾರರ ಶ್ರಮ ಇಂದು ನಾವು ಸ್ವತಂತ್ರ್ಯವಾಗಿ ಉಸಿರಾಡಲು ಸಾಧ್ಯವಾಗಿದೆ ಎಂದು ಮಾರ್ಮಿಕವಾಗಿ ನುಡಿದರು.

ಈ ಕಾರ್ಯಕ್ರಮದ ವೇದಿಕೆಯ ಮೇಲೆ ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯದಪ್ರಾಂಶುಪಾಲರಾದ ಡಾ. ಮಲ್ಲಿಕಾರ್ಜುನ ಕನಕಟ್ಟೆ, ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ದೀಪಾ ರಾಗ, ಸೈನಿಕ ಶಾಲೆ ಹಾಗೂ ಇಂಗ್ಲೀಷ ಮಾಧ್ಯಮದ ಶಾಲೆ ಪ್ರಾಂಶುಪಾಲರಾದ ಶ್ರೀಮತಿ ಶ್ರೀಲತಾ ಹಾಗೂ ಶ್ರೀ ಶರಣಬಸವೇಶ್ವರ ಅಭ್ಯಾಸಾರ್ಥ ಪ್ರೌಢ ಶಾಲೆಯ ಮುಖ್ಯ ಗುರುಗಳಾದ ಶ್ರೀಮತಿ ಶೀಲಾ. ಎನ್.ಸಿ.ಸಿ., ಎನ್.ಎಸ್.ಎಸ್. ವಿದ್ಯಾರ್ಥಿಗಳು, ವಿದ್ಯಾರ್ಥಿನಿಯರು ಮಹಾವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಸಾವಿನಲ್ಲೂ ಮಾನವೀಯತೆ ಮೆರೆದು ಪ್ರಯಾಣಿಕರ ಜೀವ ಉಳಿಸಿದ ಕೆಎಸ್‌ಆರ್‌ಟಿಸಿ ಚಾಲಕ ರಾಜೀವ್ ಬೀರಸಾಲ




**ಮಲ್ಲಮ್ಮ ನುಡಿ ವಾರ್ತೆ**

ಬೆಂಗಳೂರು: ಮಾನವೀಯತೆಯ ಅದ್ಭುತ ಮಾದರಿ ಮೂಡಿಸಿ, ಸಾವಿನಲ್ಲಿಯೂ ಪ್ರಯಾಣಿಕರ ಜೀವ ಉಳಿಸಿದ ಕೆಎಸ್‌ಆರ್‌ಟಿಸಿ ಚಾಲಕ ರಾಜೀವ್ ಬೀರಸಾಲ ಅವರ ದುಃಖದ ನಿಧನಕ್ಕೆ ಸಾರಿಗೆ ಮತ್ತು ಮುಜರಾಯಿ ಸಚಿವರು ರಾಮಲಿಂಗಾ ರೆಡ್ಡಿ ಅವರು ಶ್ರದ್ಧಾಂಜಲಿ ಅರ್ಪಿಸಿದ್ದಾರೆ. ಇಂದು ಸಚಿವರು ರಾಜೀವ್ ಬೀರಸಾಲ ಅವರ ಆತ್ಮಕ್ಕೆ ಶಾಂತಿ ಕೋರಿ, ಮೃತ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ರಾಜೀವ್ ಬೀರಸಾಲ (ವಯಸ್ಸು: 56), ಹರಿಹರ ಘಟಕದ ಅನುಸೂಚಿ ಸಂಖ್ಯೆ 47೩೦ (ರಾಜಹಂಸ), ಬಸ್ಸು ನಂ. 2469 ಚಾಲಕರಾಗಿದ್ದರು. ಅವರು 23 ಫೆಬ್ರವರಿ 2005ರಿಂದ ಸೇವೆಯಲ್ಲಿ ನಿರತರಾಗಿದ್ದರು. ಕಳೆದ ದಿನ ಬೆಂಗಳೂರಿನಿಂದ ದಾವಣಗೆರೆ ಮಾರ್ಗದಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ನೆಲಮಂಗಲ ಟೋಲ್ ಹತ್ತಿರ ಹೃದಯಾಘಾತದಿಂದ ತೀವ್ರಸ್ಥಿತಿಗೆ ಒಳಗಾಗಿದರು. ಆದರೆ, ತಮ್ಮ ಶ್ರೇಷ್ಠ ಧೈರ್ಯದಿಂದ, ಬಸ್ಸನ್ನು ಹೆದ್ದಾರಿಯ ಬದಿಯಲ್ಲಿ ಸುರಕ್ಷಿತವಾಗಿ ನಿಲ್ಲಿಸಿ, ಪ್ರಯಾಣಿಕರ ಜೀವ ರಕ್ಷಿಸಿದ್ದರು. ನಂತರ ಚಿಕಿತ್ಸೆ ಫಲಕಾರಿಯಾಗದೆ ನೆಲಮಂಗಲ ಆಸ್ಪತ್ರೆಯಲ್ಲಿ ಅವರು ನಿಧನರಾದರು.

ಮೃತ ಚಾಲಕನ ಕುಟುಂಬಕ್ಕೆ ತಾತ್ಕಾಲಿಕ ಆರ್ಥಿಕ ನೆರವು ನೀಡಲು, ಹಾಗೂ ಅವರ ಅವಲಂಬಿತರಿಗೆ ನೌಕರಿ ಒದಗಿಸುವಂತೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರು ಆದೇಶ ಹೊರಡಿಸಿದ್ದಾರೆ.

## ರೋಗಿಗಳಿಗೆ ಒಳ್ಳೆಯ ರೀತಿಯಿಂದ ಸ್ಪಂದನೆ ನೀಡಲು ಸಿಬ್ಬಂದಿಗಳಿಗೆ ಡಾ.ನಾಗನಾಥ ಹುಲಸೂರೆ ಕರೆ





**ಮಲ್ಲಮ್ಮ ನುಡಿ ವಾರ್ತೆ**

ಹುಮನಾಬಾದ: ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಬಲಿದಾನದ ಫಲವಾಗಿ ನಾವು ಸ್ವಾತಂತ್ರ್ಯ ಗಳಿಸಿದ್ದು, ಅತ್ಯಮೂಲ್ಯವಾದ ಈ ಸ್ವಾತಂತ್ರ್ಯವನ್ನು ರಕ್ಷಿಸುವ ಸಂಕಲ್ಪದ ಜೊತೆಗೆ ಸ್ವಾತಂತ್ರ್ಯ ಹೋರಾಟಗಾರರನ್ನೂ ಈ ಶುಭ ಸಂದರ್ಭದಲ್ಲಿ ಸ್ಮರಿಸೋಣ ಎಂದು ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ನಿಮಿತ್ತ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಡಾ. ನಾಗನಾಥ ಹುಲಸೂರೆರವರು ಆಡಳಿತ ವೈದ್ಯಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡು ಸಿಬ್ಬಂದಿ ವರ್ಗದವರ ಉದ್ದೇಶಿಸಿ ಮಾತನಾಡುತ್ತಾನುಡಿದರು. ಅನೇಕ ದೇಶ ಭಕ್ತರ, ಹೋರಾಟಗಾರರ ತ್ಯಾಗ, ಬಲಿದಾನಗಳ ಮೂಲಕ ದೇಶಕ್ಕೆ ಸ್ವಾತಂತ್ರ್ಯ ದೊರಕಿಸಿ ಕೊಟ್ಟಿದ್ದು, ಅವರು ಕಂಡ ಭವ್ಯ ಭಾರತದ ಕನಸನ್ನು ಸಾಕಾರಗೊಳಿಸುವುದು ಎಲ್ಲರ ಕರ್ತವ್ಯ ಮತ್ತು ಸ್ವಾತಂತ್ರ್ಯ ಯೋಧರ ಸ್ಮರಣೆ ಅಗತ್ಯ ಎಂದು ಹೇಳಿದರು. ರೋಗಿಗಳು ದೇವರ ಮೇಲೆ ಭಾರ ಹಾಕಿ, ವೈದ್ಯರ ಮೇಲೆ ವಿಶ್ವಾಸವಿಟ್ಟುತಮಗಿರುವಕಾಯಿಲೆಯನ್ನು ಆಸ್ಪತ್ರೆಯಲ್ಲೆಬಿಟ್ಟು ನೆಮ್ಮದಿಯಿಂದ ಮನೆಗೆ ಹೋಗುವಂತಹ ಗುಣಮಟ್ಟದ ಚಿಕಿತ್ಸೆ ಸಿಗಬೇಕು ಎಂದರು. ವಿಶ್ವಕರ್ಮ ಸಮಾಜದವರು ನಿರ್ಮಿಸಿದ ಶಿಲ್ಪಕಲೆಗಳು ಈಗಲೂ ಕಣ್ಮನ ಸೆಳೆಯುತ್ತವೆ. ಶಿಲ್ಪ ಕಲೆ ಮಾತ್ರ ಅಲ್ಲ, ಬಂಗಾರದ ಕುಸುರಿ, ಕಬ್ಬಿಣದ ಕೆಲಸಕ್ಕೂ ಇವರು ಎತ್ತಿದ ಕೈ. ಕೆಲಸದಲ್ಲಿ ಇವರಿಗೆ ಇರುವ ತನ್ಮಯತೆ ಸೂಕ್ಷ್ಮತೆ ಬೇರೆ ಯಾರಿಗೂ ಸಿದ್ಧಿಸದು. ಮೂರ್ತಿ ಕೆತ್ತುವಾಗ ತಲ್ಲೀನತೆ ಬಹಳ ಮುಖ್ಯ. ಸ್ವಲ್ಪ ಎಚ್ಚರ ತಪ್ಪಿದರೂ ಕಲಾಕೃತಿ ಓರೆ ಕೋರೆ ಆದೀತು. ಈ ಕಲಾವಂತಿಕೆಯು ವಿಶ್ವಕರ್ಮರಿಗೆ ದೊರೆತ ದೇವರ ಕೊಡುಗೆಯಾಗಿದೆ ಎಂದರು. ಇವರ ಆದರ್ಶಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಂಡು ಮುಂದೆ ಬರಬೇಕೆಂದರು. ಕಳೆದ ಎರಡು ತಿಂಗಳಿಂದ ಆನಾರೋಗ್ಯದಿಂದ ನಾನು ಬಳಲುತ್ತಿದ್ದಾಗ ಮಕ್ಕಳ ತಜ್ಞ ಬಾಕರ್‌ಜಾನಿ ಆಸ್ಪತ್ರೆಯನ್ನು ಮುನ್ನಡೆಸಿಕೊಂಡು ಬಂದಿದ್ದಾರೆ. ಮತ್ತೆ ಎಂದಿನಂತೆ ರೋಗಿಗಳಿಗೆ ಯಾವುದೇ ರೀತಿಯ ತೊಂದರೆ–ಯಾಗದಂತೆ ಗುಣಮಟ್ಟದ ಚಿಕಿತ್ಸೆ ನೀಡಲು ಸಿಬ್ಬಂದಿ ವರ್ಗದವರಿಗೆ ಡಾ. ನಾಗನಾಥ ಹುಲಸೂರೆ ಕರೆ ನೀಡಿದರು. ಹುಮನಾಬಾದ ತಾಲ್ಲೂಕಾ ಆಸ್ಪತ್ರೆ ಕೇಂದ್ರವಾಗಿದ್ದು, ಆಸ್ಪತ್ರೆಗೆ ಗ್ರಾಮೀಣ ಭಾಗಗಳಿಂದ ಚಿಕಿತ್ಸೆ ಪಡೆಯಲು ರೋಗಿಗಳು ಆಸ್ಪತ್ರೆಗೆ ಬಂದಾಗ ಸಿಬ್ಬಂದಿಗಳು ಸ್ಪಂದಿಸಿ ಚಿಕಿತ್ಸೆ ನೀಡಬೇಕು. ಯಾರೇ ರೋಗಿಗಳು ತಮ್ಮಗೆ ಎದುರಾಗಿ ಮಾತನಾಡಿದರೆ ತಾವುಗಳು ತಾಳ್ಮೆಯಿಂದ ಇದ್ದು ಚಿಕಿತ್ಸೆ ನೀಡಿ ಕಳುಹಿಸಬೇಕು. ತುರ್ತು ಚಿಕಿತ್ಸೆ ಸಂದರ್ಭದಲ್ಲಿ ಎಲ್ಲರೂ ಒಗ್ಗೂಡಿ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ರವಾನಿಸಬೇಕೆಂದು ತಿಳಿಸಿದರು. ಡಾ.ಮುಸ್ತಾಫ್, ಡಾ.ವಿಶ್ವ ಸೈನಿರ್, ಡಾ. ಸುಭಾನ, ಡಾ.ರೋಹಿತ್ ರಘೋಜಿ, ಡಾ.ಪ್ರವೀಣ, ಡಾ.ಮಲ್ಲಶೆಟ್ಟಿ, ಡಾ.ಸಂಗೀತಾ ಹುಲಸೂರೆ ಹಾಗೂ ಸಿಬ್ಬಂದಿ ವರ್ಗದವರಿದ್ದರು.

## ರಾಂಪೂರ ಕೆರೆ ಅಭಿವೃದ್ಧಿ ಕಾಮಗಾರಿಗೆ ಸಚಿವರಿಂದ ಚಾಲನೆ



**ಮಲ್ಲಮ್ಮ ನುಡಿ ವಾರ್ತೆ**

ರಾಯಚೂರು ಸೆಪ್ಟೆಂಬರ್ 17– ಸಣ್ಣ ನೀರಾವರಿ ಇಲಾಖೆಯಿಂದ ಸುಮಾರು 500 ಲಕ್ಷ ರೂ. ಗಳ ವೆಚ್ಚದಲ್ಲಿ ರಾಯಚೂರು ತಾಲೂಕಿನ ರಾಂಪೂರು ಕೆರೆ ಅಭಿವೃದ್ಧಿ ಕಾಮಗಾರಿಗೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆಮತ್ತುಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಸೆ.17ರಂದು ಜಂಟಿಯಾಗಿ ಚಾಲನೆ ನೀಡಿದರು.

ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮದ ಬಳಿಕ ನೇರವಾಗಿ ಕೆರೆ ಪ್ರದೇಶಕ್ಕೆ ತೆರಳಿದ ಸಚಿವರು, ಪೂಜಾ ಕಾರ್ಯಕ್ರಮದ ನಂತರ ಭೂಮಿ ಪೂಜೆ ನೆರವೇರಿಸಿದರು.

ಸಣ್ಣ ನೀರಾವರಿ ಇಲಾಖೆಯ ಅನುದಾನದಲ್ಲಿ ರಾಂಪೂರು ಕೆರೆ ಅಭಿವೃದ್ಧಿ ನಡೆಯುತ್ತಿದ್ದು, ಕೆರೆ ಅಭಿವೃದ್ಧಿಗೊಂಡಲ್ಲಿ ಅಂತರ್ಜಲ ವೃದ್ಧಿ ಮತ್ತು ರಾಯಚೂರ ಜನತೆಗೆ ಕುಡಿಯುವ ನೀರು ಪೂರೈಕೆಗೆ ಸಹಕಾರಿಯಾಗಲಿ. ಕಾಮಗಾರಿಯು ಗುಣಮಟ್ಟದಿಂದ ನಡೆಯಬೇಕು ಎಂದು ಇದೆ ವೇಳೆ ಸಚಿವರು ಸಂಬಂಧಿಸಿದ ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಪಾಲಿಕೆಯ ಸದಸ್ಯರಾರ ಜಯಣ್ಣ, ಜಿಂದಪ್ಪ ಹಾಗೂ ಮುಖಂಡರಾದ ಕೆ.ಶಾಂತಪ್ಪ, ನರಸಿಂಹಲು ಮಾಡಗಿರಿ ಸೇರಿದಂತೆ ಪಾಲಿಕೆಯ ವಿವಿಧ ವಿಭಾಗದ ಅಧಿಕಾರಿಗಳು, ಸಿಬ್ಬಂದಿ ಇದ್ದರು.

## ಮೂರು ಸರ್ಕಾರಿ ಶಾಲೆ ಮಕ್ಕಳಿಗೆ ಬ್ಯಾಗ್ ನೋಟ್ ಬುಕ್ ವಿತರಣೆ

**ಮಲ್ಲಮ್ಮ ನುಡಿ ವಾರ್ತೆ**



ಕೊಪ್ಪಳ : ಜಿಲ್ಲೆ ಕುಕನೂರು ತಾಲೂಕಿನ ಯರೇಹಂಚಿನಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜನೆ ಮಾಡಲಾದ ಕಾರ್ಯಕ್ರಮದಲ್ಲಿ ಒಂದು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಎರಡು ಕಿರಿಯ ಪ್ರಾಥಮಿಕ ಶಾಲೆ ಮೂರು ಪ್ರಾಥಮಿಕ ಶಾಲೆ ಮಕ್ಕಳಿಗೆ ರಕ್ಷಣಾ ವೇದಿಕೆ ರಾಜ್ಯ ಪ್ರದಾನ ಕಾರ್ಯದರ್ಶಿ ಭರತ ರಾಮೇಗೌಡ ಇವರ ಅಧ್ಯಕ್ಷತೆಯಲ್ಲಿ ಉಚಿತವಾಗಿ ಬ್ಯಾಗ್ ನೋಟ್ ಬುಕ್ ವಿತರಿಸಿದರು.

ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರಾದ ವಿರುಪಾಕ್ಷಪ್ಪ ಅಸೂಟಿ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದರು ಇನ್ನುಳಿದ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರಾದ ಅಜ್ಜಪ್ಪ ಗಂಗೊಜಿ. ಹಾಗೂ ಎಸ್‌ಡಿಎಂಸಿ ಅಧ್ಯಕ್ಷರಾದ ದುರ್ಗಪ್ಪ ಗಾಂಜಿ ಅಧ್ಯಕ್ಷತೆಯಲ್ಲಿ ಭಾಗಿಯಾಗಿದ್ದರು.

ಈ ವೇಳೆಯಲ್ಲಿ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಬಸವರಾಜ ಹಳ್ಳಿ. ತಾಲೂಕು ಅಧ್ಯಕ್ಷ ಮರಿಯಪ್ಪ ಕನಗೇರಿ. ಜಿಲ್ಲಾ ಕಾರ್ಯದರ್ಶಿ ಪ್ರಕಾಶ ಕಮತರ. ರಾಜ್ಯ ರೈತ ಸಂಘದ ಉಪಾಧ್ಯಕ್ಷ ಅಂದಪ್ಪ ರುದ್ರಪ್ಪ ಕೋಳೂರ. ರವಿ ಮಹಾಂತೇಶ್ ಯಲ್ಲಪ್ಪ. ನಿವೃತ್ತಿ ಪೋಸ್ಟ್ ಮಾಸ್ಟರ್ ಶಿವಣ್ಣ ಯಾಳಿಗಿ. ಗಣ್ಯ ವ್ಯಕ್ತಿಗಳು ಸೇರಿದಂತೆ ಊರಿನ ಹಿರಿಯರು ಯುವಕರು ಮೂರು ಶಾಲೆಯ ಮುಖ್ಯೋಪಾಧ್ಯಾಯರು. ಶಿಕ್ಷಕರು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ವೈಭವದಿಂದ ಜರುಗಿದ ಪರಿಸರೋತ್ಸವ,, ಓಝೋನ್ ದಿನಾಚರಣೆ

## ಪರಿಸರೋತ್ಸವ ಪರಿಸರ ಸಂರಕ್ಷಣೆಗೆ ಸಹಾಯ: ಶಿವಲಿಂಗೇಶ್ವರ ಸ್ವಾಮಿಗಳು





**ಮಲ್ಲಮ್ಮ ನುಡಿ ವಾರ್ತೆ**

ಚಿಟಗುಪ್ಪ:– ಅರಣ್ಯನಾಶ ಪರಿಸರ ಅಸಮತೋಲನದಿಂದ ಮಾನವ ನಾಶವಾಗುವ ದಿನಗಳು ಬಂದಿವೆ ಪ್ರತಿಯೊಬ್ಬರೂ ಕಡ್ಡಾಯವಾಗಿ ಪರಿಸರ ಸಂರಕ್ಷಣೆಗೆ ವಿಶೇಷ ಕಾಳಜಿ ವಹಿಸಬೇಕೆಂದು ಖೇಳಗಿ ಶಿವಲಿಂಗೇಶ್ವರ ಸಂಸ್ಥಾನ ಮಠದ ಶ್ರೀ ಶಿವಲಿಂಗೇಶ್ವರ ಸ್ವಾಮಿಗಳು ಬೀದರ್ ತಾಲೂಕಿನ ಮರಕುಂದಾ ಗ್ರಾಮದ ಚಾಲುಕ್ಯ ಶಿಕ್ಷಣ ಸಂಸ್ಥೆ ಹಾಗೂ ಪರಿಸರ ವಾಹಿನಿ ಬೀದರ್ ಹಮ್ಮಿಕೊಂಡಿದ್ದ ಲಿಂಗೈಕ್ಯ ವೇ. ಗದಗಯ್ಯಾ ಕಾವಡಿಮಠ ಇವರ 12ನೇ ಪುಣ್ಯಸ್ಮರಣೆ ಅಂಗವಾಗಿ ವಿಶ್ವ ಓಝೋನ್ ದಿನಾಚರಣೆ ಹಾಗೂ ಪರಿಸರೋತ್ಸವ ಕಾರ್ಯಕ್ರಮ ದಿವ್ಯ ಸಾನಿಧ್ಯ ವಹಿಸಿ ಮಾತನಾಡುತ್ತ ಕಳವಳ ವ್ಯಕ್ತಪಡಿಸಿದರು. ಲಿಂಗೈಕ್ಯ ವೇ. ಗದಗಯ್ಯಾ ಕಾವಡಿಮಠ ಇವರು ಪರಿಸರ ಸಂರಕ್ಷಣೆಗೆ ಅಪಾರ ಕೊಡುಗೆ ನೀಡಿದ್ದಾರೆ. ಹಾಗೂ ರೈತರಿಗೆ ಕೃಷಿಯ ಹೊಸ ಹೊಸ ತಳಿಗಳು ಹಾಗೂ ತೋಟಗಾರಿಕೆ ಬೆಳೆಗಳನ್ನು ರೈತರಿಗೆ ಪರಿಚಯಿಸಿದ ಶ್ರೇಯಸ್ಸು ಇವರಿಗೆ ಸಲ್ಲುತ್ತದೆ. ಮನೆ ಅಂಗಳದಲ್ಲಿ ಕೈ ತೋಟ ನಿರ್ಮಿಸಿ ವಿದ್ಯಾರ್ಥಿಗಳಲ್ಲಿ ಮರ ಗಿಡಗಳ ಬಗ್ಗೆ ಪ್ರೀತಿ ಹುಟ್ಟಿಸಿದ್ದಾರೆ. ಇವರ ಪುಣ್ಯಸ್ಮರಣೆ ಪ್ರತಿ ವರ್ಷ ಪರಿಸರೋತ್ಸವನ್ನಾಗಿ ಆಚರಿಸಿ ಸಮಾಜದಲ್ಲಿ ಪರಿಸರ ಸಂರಕ್ಷಣೆ ಜಾಗೃತಿಗೆ ಸಹಾಯವಾಗಿದೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಪರಿಸರೋತ್ಸವ ಪ್ರಶಸ್ತಿ ನೀಡುತ್ತಿರುವ ಕಾರ್ಯ ಮೆಚ್ಚುವಂತದಾಗಿದೆ ಎಂದರು. ಗ್ಯಾರಂಟಿ ಯೋಜನೆಯ ಜಿಲ್ಲಾಧ್ಯಕ್ಷ ಅಮೃತರಾವ ಚಿಮ್ಮಕೊಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅತ್ಯಧಿಕ ಆಮ್ಲಜನಕ ಬಿಡುಗಡೆ ಮಾಡುವ ಅರಳಿ, ಬೇವಿನ ಗಿಡಗಳು ರೈತರು ಹಾಗೂ ಸಾರ್ವಜನಿಕರು ಅತ್ಯಧಿಕ ಪ್ರಮಾಣದಲ್ಲಿ ಬೆಳೆಸಬೇಕೆಂದು ತಿಳಿಸಿದರು. ಪರಿಸರ ವಾಹಿನಿ ಜಿಲ್ಲಾಧ್ಯಕ್ಷ ಶೈಲೇಂದ್ರ ಕಾವಡಿ ಅವರು 12 ವರ್ಷಗಳಿಂದ ನಿರಂತರವಾಗಿ ಪರಿಸರೋತ್ಸವ ಕಾರ್ಯಕ್ರಮ ಹಮ್ಮಿಕೊಂಡು ಪರಿಸರ ಜಾಗೃತಿ ಹಾಗೂ ಸಾಧಕರಿಗೆ ಗುರುತಿಸುವ ಕಾರ್ಯ ಶ್ಲಾಘನೀಯವಾಗಿದೆ ಎಂದರು. ಪರಿಸರ ವಾಹಿನಿ ಶೈಲೇಂದ್ರ ಹಮ್ಮಿಕೊಂಡಿರುವ ಕೋಟಿ ವೃಕ್ಷ ಆಂದೋಲನ ಯಶಸ್ವಿಯಾಗಲೆಂದು ಶುಭ ಹಾರೈಸಿದರು. ಗ್ಯಾರೆಂಟಿ ಯೋಜನೆಗಳು ಬಡ ಜನರಿಗೆ ವರದಾನವಾಗಿವೆ ಇದರ ಸದುಪಯೋಗ ಪಡೆದುಕೊಳ್ಳಲು ಕರೆ ನೀಡಿದರು. ಪರಿಸರವಾದಿ ಶೈಲೇಂದ್ರ ಕಾವಡಿ ಪ್ರಾಸ್ತಾವಿಕವಾಗಿ ಮಾತನಾಡಿ, ಪೃಥ್ವಿಯ ಜೀವಿಗಳ ರಕ್ಷಣೆ ಮಾಡುವ ಒಂದು ರಕ್ಷಾಕವಚ ಅಗಸದಲ್ಲಿದೆ, ಭೂಮಿಯ ಮೇಲಿನ ಬಿರುಗಾಳಿ, ಸುನಾಮಿ, ಮೋಡ, ಮಳೆ, ಭೂ ಉಷ್ಣತೆ ಮತ್ತು ಹವಾಮಾನವನ್ನು ನಿರ್ಮಿಸುತ್ತದೆ. ಇದರ ಮೇಲೆ ಸುಮಾರು 16ರಿಂದ 50 ಕಿಲೋ ಮೀಟರ್ ಎತ್ತರದ ವರೆಗೆ ಇರುವುದು ಸ್ತರಗೋಲ ಇದನ್ನು ಓಝೋನ್ ಪದರು ಎಂದು ಕರೆಯುತ್ತಾರೆ ಎಂದರು. ಸೂರ್ಯನಿಂದ ಭೂಮಿಗೆ ಹಾಯುವ ಅತಿ ಆಘಾತಕಾರಕ ಅತಿ ನೇರಳೆ ಕಿರಣಗಳನ್ನು ತಡೆದು ಭೂಮಿಯನ್ನು ರಕ್ಷಿಸುತ್ತದೆ. ಅದಕ್ಕಾಗಿ ಇದಕ್ಕೆ ಜೀವಿಗಳ ರಕ್ಷಾಕವಚ ಎನ್ನುತ್ತಾರೆ ಎಂದು ಕಾವಡಿ ತಿಳಿಸಿದರು. ಪರಿಸರ ಅಸಮತೋಲನ ಮಾಲಿನ್ಯದಿಂದ ಭೂಮಿಯ ರಕ್ಷಾಕವಚಕ್ಕೆ ರಂಧ್ರ ಬೀಳುತ್ತಿದೆ, ಓಝೋನ್ ಪದರು ರಕ್ಷಣೆ ಮಾಡಿದರೆ ನಮಗೆ ಉಳಿಗಾಲ ಇದೆ ಎಂದರು. 2025ನೇ ಸಾಲಿನ ಪರಿಸರೋತ್ಸವ ಪ್ರಶಸ್ತಿ ಪುರಸ್ಕೃತರು. ಚಿಟಗುಪ್ಪ ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕರ್ (ಅತ್ಯುತ್ತಮ ಜನ ಪ್ರತಿನಿಧಿ), ಬೀದರ್ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ್ (ಜನಸ್ನೇಹಿ ಇಓ), ಚಿಟಗುಪ್ಪ ಪುರಸಭೆ ಉಪಾಧ್ಯಕ್ಷ ನಸೀರ್ ಖಾನ (ನಾಟಿ ವೈದ್ಯ), ಚಿಟಗುಪ್ಪ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ (ಪರಿಸರ ಸಂರಕ್ಷಣೆ), ಹುಮನಾಬಾದ ಹಳೆ ಅಡತ ಬಜಾರ್ ಗಣೇಶ್ ಸಮಿತಿ (ಪರಿಸರ ಸ್ನೇಹಿ), ಸಂಜೀವನ ಭೋಸ್ಲೆ ಚಿಟಗುಪ್ಪ ( ಉತ್ತಮ ಹಿಂದಿ ಶಿಕ್ಷಕ), ಬೀದರ್ ಗೆಳೆಯರ ಬಳಗ (ವನ್ಯ ಪ್ರಾಣಿ ಸಂರಕ್ಷಣೆ), ರಾಜಕುಮಾರ ಆರ್. ಹಡಪದ ಚಿಟಗುಪ್ಪ (ಜನಸ್ನೇಹಿ ಪತ್ರಕರ್ತರು), ಹುಮನಾಬಾದ ಪದವಿ ಕಾಲೇಜಿನ ಪ್ರಾಚಾರ್ಯ ವೀರಣ್ಣ ತುಪ್ಪದ (ಉತ್ತಮ ಪ್ರಾಚಾರ್ಯ), ಶರಣಮ್ಮ ಉದಯಕುಮಾರ್ ವಾರದ (ಆದರ್ಶ ದಂಪತಿಗಳು), ಶಂಕರ ಕಾಮಗಾರ (ಉತ್ತಮ ಸೇವಾ ದಳ ಶಿಕ್ಷಕ), ಕರಬಸಯ್ಯಾ ಸ್ವಾಮಿ (ಸಾವಯವ ಕೃಷಿ), ಹುಮನಾಬಾದ ವಿವೇಕಾನಂದ ಶಿಕ್ಷಣ ಸಂಸ್ಥೆ (ಹಸಿರು ಶಿಕ್ಷಣ ಸಂಸ್ಥೆ), ಧುಮ್ಮನಸೂರ್ ಗ್ರಾ.ಪಂ. ಅಧ್ಯಕ್ಷ ವೀರಪ್ಪ ಭುತ್ತಾಳೆ (ಉತ್ತಮ ಅಧ್ಯಕ್ಷ), ಬಸಯ್ಯ ಸ್ವಾಮಿ ಡಿಗ್ರಿ (ಸಾಧನೆ), ಉಪ ವಲಯ ಅರಣ್ಯಾಧಿಕಾರಿ ಹಾವಪ್ಪ ಬೀದರ್ (ಉತ್ತಮ ವಲಯ ಅರಣ್ಯಾಧಿಕಾರಿ), ಬಲಭೀಮಯ್ಯಾ ಸ್ವಾಮಿ ಭಾಲ್ಕಿ (ಉತ್ತಮ ಹಿರಿಯ ನಾಗರಿಕರು) ಇವರುಗಳಿಗೆ ಪೂಜ್ಯ ಶಿವಲಿಂಗೇಶ್ವರ ಮಹಾಸ್ವಾಮಿಗಳು ಖೇಳಗಿ ಇವರ ಪ್ರಶಸ್ತಿ ನೀಡಿ ಸನ್ಮಾನಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಪ್ರೋ. ಸಂಗಯ್ಯಾ ಕಲ್ಮಠ, ವೀರಭದ್ರಪ್ಪ ಉಪ್ಪಿನ, ಗ್ರಾಮ ಪಂಚಾಯತ್ ಅಧ್ಯಕ್ಷ ಬಾಬುರಾವ ಹೊಸಮನಿ, ಪತ್ರಕರ್ತ ಗಂಧರ್ವ ಸೇನಾ, ಉದ್ಯಮಿ ಅಣೆಪ್ಪ ವರನಾಳ ಚಿಟಗುಪ್ಪ, ಚಿಟಗುಪ್ಪ ಪುರಸಭೆ ಸದಸ್ಯ ಬಾಬಾ ಆರ್.ಸಿ.ಸಿ. ಚಿಟಗುಪ್ಪ, ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಚಿಟಗುಪ್ಪ, ಗುರುನಾಥ ಕಲ್ಲೂರ್, ಸದಾಶಿವಯ್ಯಾ ವಿಭೂತಿ, ಗ್ರಾಮ ಪಂಚಾಯತ್ ಸದಸ್ಯರುಗಳಾದ ಸಂತೋಷ್ ನಾಗವಾರ್, ನರೇಂದ್ರ ಶೇರಿಕಾರ್, ಬೀರಪ್ಪ, ಸುಭಾಷ ಸಾವಳಗಿ, ಶಂಕರ್ ಚಾಮಾ, ಕೃಷ್ಣ ಕುಲಕರ್ಣಿ, ಪಿಡಿಓ ಕುಮುದಾ ನೀಲಾ ಉಪಸ್ಥಿತರಿದ್ದರು. ಚಾಲುಕ್ಯ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶಾಮರಾವ ಹುಡೆದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಓಝೋನ್ ದಿನಾಚರಣೆ ಅಂಗವಾಗಿ ಸಸಿ ನೆಡಸಲಾಯಿತ್ತು.

## ಪರಿಸರ ಸಂರಕ್ಷಣೆಗೆ ಶ್ರಮಿಸುತ್ತಿರುವ ಹುಸಾಮುದ್ದೀನ್ ಬಾಬಾಗೆ ಪರಿಸರೋತ್ಸವ ಪ್ರಶಸ್ತಿ



**ಮಲ್ಲಮ್ಮ ನುಡಿ ವಾರ್ತೆ**

ಚಿಟಗುಪ್ಪ:– ಪಟ್ಟಣ ಹಸಿರು ಸ್ವಚ್ಛ ಪಟ್ಟಣ ಮಾಡಲು ಹಗಲಿರುಳು ಶ್ರಮಿಸುತ್ತಿರುವ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ ಇವರಿಗೆ ಬೀದರ್ ತಾಲೂಕಿನ ಮರಕುಂದಾ ಗ್ರಾಮದಲ್ಲಿ ಸೆಪ್ಟೆಂಬರ್ 16ರಂದು ಜರುಗಿದ ಪರಿಸರೋತ್ಸವ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಇವರಿಗೆ ಪರಿಸರ ಸಂರಕ್ಷಣೆ ಕ್ಷೇತ್ರದಲ್ಲಿ ಸಾಧನೆ ಮಾಡಿದಕ್ಕೆ ಪರಿಸರೋತ್ಸವ ಪ್ರಶಸ್ತಿ ದೊರಕಿದಕ್ಕೆ ಬೆಳಕೇರಾ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಮಾಣಿಕ ಹಿಪರ್ಗಿ ಹರ್ಷ ವ್ಯಕ್ತಪಸಿ ಸನ್ಮಾನಿಸಿದ್ದಾರೆ. ಇದೇ ಸಂದರ್ಭದಲ್ಲಿ ಇಂಜಿನಿಯರ್ ದಿನಾಚರಣೆ ಅಂಗವಾಗಿ ಹಿರಿಯ ಅಭಿಯಂತರರು ಆದ ಖಾಜಾಮಿಯಾ ಇವರಿಗೆ ಬಿಜೆಪಿ ಯುವ ಮುಖಂಡ ಶಾಮರಾವ ಭುತ್ತಾಳೆ ಮತ್ತು ರಾಜಕುಮರ್ ಆರ್. ಹಡಪದ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಪಿಕೆಪಿಎಸ್ ಮಾಜಿ ಅಧ್ಯಕ್ಷರು ಹಾಗೂ ಪುರಸಭೆ ಮಾಜಿ ಸದಸ್ಯ ಮನೋಜಕುಮಾರ್ ಶರ್ಮಾ, ಶಿಕ್ಷಕ ಚಂದ್ರಕಾಂತ ಮಠಪತಿ, ಮಹ್ಮದ್ ಅಲಿ ಪಟೇಲ್, ವಿಜಯಕುಮಾರ್ ಕಲ್ಲೂರ್, ಅಖಿಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪ್ರಧಾನ ಮಂತ್ರಿ ಮೋದಿಯವರ ಜನ್ಮದಿನಚರಣೆ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ



**ಮಲ್ಲಮ್ಮ ನುಡಿ ವಾರ್ತೆ**

ಚಿಟಗುಪ್ಪ:– ದೇಶದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ 75ನೇಯ ಜನ್ಮದಿನಚರಣೆ ಅಂಗವಾಗಿ ಬಿಜೆಪಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರ–ಕ್ಕೆ ಭೇಟಿ ನೀಡಿ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿದರು. ಈ ಸಂದರ್ಭದಲ್ಲಿ ಎಪಿಎಂಸಿ ಮಾಜಿ ಅಧ್ಯಕ್ಷರು ಹಾಗೂ ಬಿಜೆಪಿ ಯುವ ಮುಖಂಡ ಡಾ. ಭದ್ರೇಶ ಪಾಟೀಲ್, ಅಮೀತ ತೊಗಲೂರ್, ರೇವಣ್ಣಪ್ಪ ಹುಗಾರ್, ಸುಭಾಷ ಕುಂಬಾರ್, ಅನೀಲ ಜೋಶಿ, ಚಿನ್ನು ಗುತ್ತೆದಾರ್, ಶಾಮರಾವ ಭುತ್ತಾಳೆ, ಸಾಯಿ ಸಿರ್ಕೆ, ರಾಜಗೋಪಾಲ್ ಐನಾಪುರ್, ನೂರಇಸ್ಲಾಂ, ಸಂಜು ಪಟ್ಟಣಕರ್, ಅಸದ್ ಪಟೇಲ್, ಹುಸೇನ್, ನಟವರ್ ಪವಾರ್, ಇಸ್ಮಾಯಿಲ್ ಲಾಥೋಡಿ, ಸಚಿನ ಮಠಪತಿ, ರವಿ ಪವಾರ್, ಶ್ರೀಕಾಂತ ಫುಲೇ, ಖಾಜಾ, ಕಿರಣ ಭೋವಿ, ಸಿದ್ದು ಪಾಟೀಲ್, ದತ್ತು ಕೋಳಾರಕರ್, ಅಮೀತ, ಆನಂದ್ ತಾಲಮಡಗಿ, ಸಂಜು ದರ್ವೇಶ್, ಸಚಿನ ಉಪ್ಪಾರ, ವಿನೋದ್ ಸಿಂಗಿನ್, ರೋಹನ್ ಸಿರ್ಕೆ, ಮಹಾಂತೇಶ್ ರೆಡ್ಡಿ, ಪವನ ಕಟ್ಟಿಮನಿ, ಕಿರಣ ಮದರಗಾಂವ, ಮಲ್ಲು ಬೆನಕಿಪಳ್ಳಿ, ಚಂದ್ರಕಲಾ ಚಿಲ್ಲರಗಿ, ಶಾಂತ ಆಡಳಿತ ವೈದ್ಯಾಧಿಕಾರಿ ಡಾ. ವಿಜಯ ಹಿರಸ್ಕರ್, ಸಿಬ್ಬಂದಿ ಪ್ರಭು ಮುದನ್ನಾಳಕರ್, ದೇವಿಂದ್ರ ನಾಗನಕೇರಾ ಇದ್ದರು.

## ಯರನಳ್ಳಿ – ಅಲಿಯಂಬರ್ ಮಾರ್ಗವಾಗಿ ಒಂದು ಹೊಸ ಬಸ್ಸುಗಳ ಸೌಲಭ್ಯವನ್ನು ಕಲ್ಪಿಸುವ ಬಗ್ಗೆ ಮನವಿ



**ಮಲ್ಲಮ್ಮ ನುಡಿ ವಾರ್ತೆ**

ಬೀದರ. ಸೆ. 17:– ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಈ ಮೂಲಕ ತಮಗೆ ಒತ್ತಾಯಿಸುವುದೇನೆಂದರೆ, ಕರ್ನಾಟಕ ಮಾನವ ಹಕ್ಕುಗಳ ಮತ್ತು ಭ್ರಷ್ಟಾಚಾರ ನಿಗ್ರಹ ಸಮಿತಿ (ರಿ) ವತಿಯಿಂದ ತಮಗೆ ತಿಳಿಯ ಪಡಿಸುವುದೇನೆಂದರೆ, ಯರನಳ್ಳಿ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಇರುವುದರಿಂದ ಅಲಿಯಂಬರ್, ಮಮದಾಪೂರ, ಜನರು ಬಸ್ಸಿನ ವ್ಯವಸ್ಥೆ ಇಲ್ಲದೆ ಇರುವುದು ಮತ್ತು ಬಸ್ಸು ಉಚಿತವಾಗುರುವುದರಿಂದ ಎಲ್ಲಾ ಬಸ್ಸುಗಳಲ್ಲಿ ಮಹಿಳೆಯರು ಹೆಚ್ಚಿನ ಬಸಂಖ್ಯೆಯಲ್ಲಿ ಇರುವುದರಿಂದ ವಿದ್ಯಾರ್ಥಿಗಳಿಗೆ ತುಂಬಾನೇ ತೊಂದರೆಯನ್ನು ಆಗುತ್ತಿದೆ. ಮತ್ತು ಅಲಿಯಂಬರ್–ಯರನಳ್ಳಿಗೆ ಬಸ್ಸಿನ ವ್ಯವಸ್ಥೆ ಇಲ್ಲದೆ ಇರುವುದರಿಂದ ಸಂಪರ್ಕ ಕಡಿತವಾಗಿರುತ್ತದೆ.

ಆದ್ದರಿಂದ ತಾವುಗಳು ದಯಮಾಡಿ, ಸಾರ್ವಜನಿಕರ ಹಾಗೂ ಮಕ್ಕಳ ವಿದ್ಯಾಭ್ಯಾಸದ ಹಿತ ದೃಷ್ಟಿಯಿಂದ ಒಂದು ಹೊಸ ಬಸ್ ಅನ್ನು ಜನವಾಡ ಮಾರ್ಗವಾಗಿ ಅಲಿಯಂಬರ್ ದಿಂದ ಯರನಳ್ಳಿ ಹೊರಗೆ ಮುಂಜಾನೆ 11 ಗಂಟೆಗೆ ಬೀದರ ದಿಂದ ಬಿಟ್ಟು ಯರನಳ್ಳಿ ಗ್ರಾಮ ದಿಂದ 12 ಗಂಟೆಗೆ ಬೀದರಿಗೆ ಬಂದು. 12:30 ಗಂಟೆಗೆ ಮತ್ತೆ ಸಾಯಂಕಾಲ 4 ಗಂಟೆಗೆ ಬಿಟ್ಟು 5 ಗಂಟೆಗೆ ಯರನಳ್ಳಿಗೆ ತಲುಪುವುದು ಈ ರೀತಿಯಾಗಿ ಮಾನ್ಯರು ಬಸ್ಸು ಓಡಿಸಬೇಕೆಂದು ಕಳಕಳಿಯ ಮನವಿ ವಿಶಾಲ ದೊಡ್ಡಿ ಜಿಲ್ಲಾಧ್ಯಕ್ಷರು, ಸಂಗಮೇಶ್ ಬಾವಿದೊಡ್ಡಿ, ದತ್ತು ವಿ ಬಾವಗೆ, ಜಗನ್ನಾಥ್ ಸಿಂಧೆ, ಪ್ರಶಾಂತ್ ಸಾದುರೆ, ಅತಿ ಶೀಘ್ರವಾಗಿ ಬಸ್ಸು ಓಡಿಸಬೇಕು ಮತ್ತು ಇಲ್ಲವಾದರೆ ಹೋರಾಟ ಮಾಡುವದು ಅನಿವಾರ್ಯವಾಗಿರುತ್ತದೆ.

## ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ




**ಮಲ್ಲಮ್ಮ ನುಡಿ ವಾರ್ತೆ**

ಬೀದರ, ಸೆಪ್ಟೆಂಬರ್.17–:– ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನದ ಫಲವಾಗಿ ಭಾರತದೇಶಕ್ಕೆ 1947 ಅಗಸ್ಟ್ 15ರಂದು ಸುಮಾರು 250 ಕ್ಕೂ ಹೆಚ್ಚು ವರ್ಷಗಳ ಕಾಲದಿಂದ ಬ್ರಿಟಿಷರ್ ದಾಸ್ಯದಲ್ಲಿದ್ದ ಭಾರತದೇಶಕ್ಕೆ ಸ್ವಾತಂತ್ರ್ಯ ಲಭಿಸಿದರೆ, ಹೈದರಾಬಾದ್ ಪ್ರಾಂತ್ಯಕ್ಕೆ ಸೇರಿದ ಬೀದರ್, ಕಲಬುರಗಿ (ಗುಲಬರ್ಗಾ), ಯಾದಗಿರ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ವಿಜಯ ನಗರ 7 ಜಿಲ್ಲೆಗಳನ್ನೊಳಗೊಂಡ ಆಗಿನ ಹೈದರಾಬಾದ್ ಕರ್ನಾಟಕ ಈಗಿನ ಕಲ್ಯಾಣ ಕರ್ನಾಟಕ ಮಾತ್ರ ಸ್ವತಂತ್ರವಾಗಿರಲಿಲ, ಒಂದು ವರ್ಷ ತಡವಾಗಿ, ಅಂದರೆ 1948 ಸೆಪ್ಟೆಂಬರ್ 17 ರಂದು ಪಟೇಲರ ರಾಜಕೀಯ ಮುತ್ಸದ್ದಿತನ ಮತ್ತು ಚಾಣಾಕ್ಷತನದಿಂದ ಬಹು ಜನರ ಆಶಯದಂತೆ ಈ ಪ್ರಾಂತ್ಯವನ್ನು ಭಾರತದಲ್ಲಿ ವಿಲೀನಗೊಳಿಸಲು ಕಾರ್ಯತಂತ್ರ ರೂಪಿಸಿದ ಪ್ರಯುಕ್ತ ನಿಝಾಮನನ್ನು ಶರಣಾಗುವಂತೆ ಮಾಡಿ ಹೈದರಾಬಾದ್ ಪ್ರಾಂತ್ಯವನ್ನು ವಿಮೋಚನೆಯಾಗುವಂತೆ ಕಾರ್ಯತಂತ್ರವನ್ನು ರೂಪಿಸಿದರು ಎಂದು ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ.ಎಸ್.ವಿ.ಪಾಟೀಲ ಹೇಳಿದರು. ಅವರು ಬುಧವಾರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆಯುಡಿಯುಲ್ಲಿ ಬರುವ ತೋಟಗಾರಿಕೆ ಮಹಾವಿದ್ಯಾಲಯ ಬೀದರನಲ್ಲಿ 77 ನೇ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಲ್ಯಾಣಕರ್ನಾಟಕದ ಮೊದಲಿನ ಸ್ಥಿತಿಗತಿಯ ಬಗ್ಗೆ ಹಾಗೂ ಇನ್ನು ಹೆಚ್ಚು ಅಭಿವೃದ್ಧಿ ಹೊಂದಲು ಕೈಗೊಳ್ಳಬಹುದಾದ ಯೋಜನೆಗಳ ಬಗ್ಗೆ ವಿಸ್ತೃತವಾಗಿ ವಿವರಿಸಿ, ಎಲ್ಲ ಮಹನೀಯರು ಗಳಿಸಿಕೊಟ್ಟ ಸ್ವಾತಂತ್ರ್ಯ ವನ್ನು ಉಳಿಸಿಕೊಂಡು ಹೋಗುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿರುತ್ತದೆ. ಸ್ವಾತಂತ್ರ್ಯ ದಿನವೆಂಬುದು ಪ್ರತಿಯೊಬ್ಬ ಭಾರತೀಯರ ಹೃದಯಲ್ಲಿ ಚಿರಸ್ಥಾಯಿಯಾಗಿರಬೇಕೆಂದು, ನಮ್ಮದೇಶವು ಶ್ರೀಮಂತ ಸಂಸ್ಕೃತಿ, ವೈವಿಧ್ಯತೆಯಲ್ಲಿ ಏಕತೆ ಮತ್ತು ಎಲ್ಲಾ ಧರ್ಮದವರು ಸೌಹಾರ್ದತೆಯಿಂದ ಇದ್ದು, ಸಮಸ್ತ ನಾಡಿನ ಶ್ರೇಯೋಭಿವೃದ್ಧಿಗೆ ಪ್ರಾಮಾಣಿಕ ಮತ್ತು ನಿಸ್ವಾರ್ಥದಿಂದ ಕೈ ಜೋಡಿಸೋಣವೆಂದರು.

ಈ ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕ ಡಾ. ಮುಹಮ್ಮದ ಫಾರೂಖ, ಸಹಾಯಕ ಪ್ರಾಧ್ಯಾಪಕ ಡಾ. ವಿಜಯಮಹಾಂತೇಶ, ರಾಷ್ಟ್ರೀಯ ಸೇವಾ ಯೋಜನಾ ಅಧಿಕಾರಿ ಡಾ. ವಿರೇಂದ್ರಪ್ರತಾಪಸಿಂಹ, ಸಹಾಯಕ ಪ್ರಾಧ್ಯಾಪಕರು, ಮಹಾವಿದ್ಯಾಲಯದ ಇನ್ನಿತರ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗದವರು ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಂವಿಧಾನದ ಕಲಂ 371(ಜೆ) ಕಾಯಿದೆಯು ಕಲ್ಯಾಣ

## ಕರ್ನಾಟಕ ಭಾಗದ ಜನತೆಗೆ ಶ್ರೀರಕ್ಷೆ: ಡಾ.ಶರಣ ಪ್ರಕಾಶ್ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆ 17 : ಜಿಲ್ಲಾಡಳಿತದಿಂದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ–2025ರ ರಾಷ್ಟ್ರ ಧ್ವಜಾರೋಹಣ ಕಾರ್ಯಕ್ರಮವು ಸೆ.17ರಂದು ನಗರದ ಮಹಾತ್ಮಾ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಿತು.




ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ 371(ಜೆ) ಸ್ಥಾನಮಾನ ಸಿಕ್ಕ ಬಳಿಕ ಈ ಭಾಗದ ಮಕ್ಕಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ವಿಶೇಷ ಮೀಸಲು ದೊರೆಯಲು ಸಾಧ್ಯವಾಗಿದೆ. ವೃತ್ತಿಪರ ಕೋರ್ಸಗಳಲ್ಲಿ ಮೀಸಲು ದೊ–ರೆತು ಸಾವಿರಾರು ಸಂಖ್ಯೆಯಲ್ಲಿ ಮಕ್ಕಳು ಡಾಕ್ಟರ್, ಎಂಜಿನಿಯರ್ ಆಗಲು ಸಾಧ್ಯವಾಗಿದೆ. ಕಳೆದ 10 ವರ್ಷದಲ್ಲಿ 80 ಸಾವಿರ ಸರ್ಕಾರಿ ನೌಕರಿಗಿಟ್ಟಿಸಲಾಗಿದೆ. ಈ ಭಾಗಕ್ಕೆ 18,000 ಕೋಟಿ ರೂ. ಮಂಜೂರಾಗಿ 371 ಜೆ ಕಾನೂನಿನಿಂದ ಪ್ರತಿ ಮಗುವಿಗು ಸಹಾಯವಾಗಿದ್ದು, ಈ ಭಾಗದ ಜನರಿಗೆ ಕಾಯಕಲ್ಪ, ಕಾಮಧೇನುವಾಗಿ ಶ್ರೀರಕ್ಷೆಯಾಗಿದೆ. ಸಂವಿಧಾನ ಇರುವವರೆಗೆ 371(ಜೆ) ಕಾಯಿದೆ ಇರಲಿದೆ ಎಂದು ತಿಳಿಸಿದರು.

ಅಖಂಡ ಭಾರತ ನಿರ್ಮಾಣದ ಪ್ರಯತ್ನ, ಹೋರಾಟಗಾಥೆ ಸಾಮಾನ್ಯವಾದ ಸಂಗತಿಯಲ್ಲ. ಅಹಿಂಸಾ ಮಾರ್ಗದಲ್ಲಿ ಪ್ರೀತಿಯಿಂದ ದೇಶಕ್ಕೆ ಸ್ವಾತಂತ್ರ್ಯ ಲಭಿಸಿದ್ದು ಇಡೀ ಜಗತ್ತಿಗೆ ಮಾದರಿಯಾಗಿದೆ. ಸಂವಿಧಾನದ ಭದ್ರಬುನಾದಿಯ ಮೇಲೆ ದೇಶ ನಡೆಯುತ್ತಿದೆ. ಸಾಮಾಜಿಕ ಕಳಕಳಿ ಹೊಂದಿದ ಹಿರಿಯರಾದ ಮಲ್ಲಿಕಾರ್ಜುನ ಖರ್ಗೆ ಅವರಂತಹ ಮಹನಿಯರ ಸತತ ಪ್ರಯತ್ನದಿಂದ 2012ರಲ್ಲಿ ಸಂಸತ್ತನಲ್ಲಿ ಪಾಸಾಗಿ 371(ಜೆ) ಕಾಯಿದೆಯಿಂದಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಭಿವೃದ್ಧಿಯ ಹೊಸ ಪರ್ವ ಆರಂಭವಾಯಿತು ಎಂದು ತಿಳಿಸಿದರು.

ನಮ್ಮ ದೇಶಕ್ಕೆ 1947ರಂದು ಸ್ವಾತಂತ್ರ್ಯ ದೊರೆತರೂ ಕಲ್ಯಾಣ ಕರ್ನಾಟಕ ಭಾಗವು ಸ್ವಾತಂತ್ರ್ಯದಿಂದ ದೂರ ಉಳಿಯಿತು. ಇದಕ್ಕಾಗಿ ಅವಿರತ ಹೋರಾಟ ನಡೆಯಿತು. ಈ ಪ್ರದೇಶವನ್ನು ಭಾರತದ ಒಕ್ಕೂಟದೊಂದಿಗೆ ವಿಲೀನಗೊಳಿಸಲು ಸ್ಥಳೀಯ ಜನರು ನಿಜಾಮರ ದೌರ್ಜನ್ಯದ ವಿರುದ್ಧ ಕೆಚ್ಚೆದೆಯಿಂದ ಹೋರಾಡಿದರು. ನಿಜಾಮರ ಖಾಸಗಿ ಸೇನಾಪಡೆಯಾದ ರಜಾಕರರು ಇಲ್ಲಿನ ಜನರ ಮೇಲೆ ದೌರ್ಜನ್ಯ ಎಸಗಿ, ಹೈದ್ರಾಬಾದನಲ್ಲಿ ಆಗಿನ ನಿಜಾಮರ ಆಡಳಿತವನ್ನು ಸಮರ್ಥಿಸಿಕೊಂಡಿದ್ದರು.

ಇದರಿಂದಾಗಿ, ಭಾರತಕ್ಕೆ ಸ್ವಾತಂತ್ರ್ಯ ಬಂದ ನಂತರವೂ ಹೈದ್ರಾಬಾದ್ ಪ್ರಾಂತ್ಯಕ್ಕೆ ಒಳಪಟ್ಟಿದ್ದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಗಳು ಸ್ವತಂತ್ರಗೊಳ್ಳದೇ 13 ತಿಂಗಳ ಕಾಲ ನಿಜಾಮರ ಆಳ್ವಿಕೆಯಲ್ಲಿದ್ದವು. 'ಆಪರೇಷನ್ ಪೋಲೋ' ಎಂಬ ಪೊಲೀಸ್ ಕ್ರಮದ ನಂತರ ಈ ಪ್ರದೇಶವನ್ನು ಸೆಪ್ಟೆಂಬರ್ 17, 1948ರಂದು ನಿಜಾಮರ ಆಳ್ವಿಕೆಯಿಂದ ಮುಕ್ತಗೊಳಿಸಲಾಯಿತು.

ಸೆಪ್ಟೆಂಬರ್ 17, 1948ರಂದು ಆಗಿನ ಗೃಹ ಸಚಿವರಾದ ಸರ್ದಾರ್ ವಲ್ಲಭ ಭಾಯಿ ಪಟೇಲ್ ರವರು ಪ್ರಾರಂಭಿಸಿದ ಮಿಲಿಟರಿ ಕಾರ್ಯಾಚರಣೆಯ ನಂತರ ನಿಜಾಮರ ಆಳ್ವಿಕೆಯಲ್ಲಿದ್ದ ಅಂದಿನ ಹೈದ್ರಾಬಾದ್ ರಾಜ್ಯವನ್ನು ಭಾರತ ಒಕ್ಕೂಟಕ್ಕೆ ಸೇರಿಸಲಾಯಿತು. ಇದರಿಂದ ಹೈದ್ರಾಬಾದ ನಿಜಾಮನ ವಶದಲ್ಲಿದ್ದ ಕರ್ನಾಟಕ ಪ್ರಾಂತದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಬಳ್ಳಾರಿ ಹಾಗೂ ಕೊಪ್ಪಳ ಜಿಲ್ಲೆಗಳನ್ನು ನಿಜಾಮರ ಆಳ್ವಿಕೆಯಿಂದ ವಿಮುಕ್ತಗೊಳಿಸಲಾಯಿತು. ಹೈದ್ರಾಬಾದನ್ನು ವಿಮೋಚನೆಗಳಿಸಿದ ಹುತಾತ್ಮರನ್ನು ಸ್ಮರಿಸಲು ಮತ್ತು ಯುವಕರಲ್ಲಿ ದೇಶ ಪ್ರೇಮವನ್ನು ತುಂಬಲು ಸೆಪ್ಟೆಂಬರ್ 17ನ್ನು "ಕಲ್ಯಾಣ ಕರ್ನಾಟಕ ಉತ್ಸವ ದಿನ"ವನ್ನಾಗಿ ಆಚರಿಸಲಾಗುತ್ತದೆ ಎಂದು ಅವರು ತಿಳಿಸಿದರು.

ರಾಜ್ಯ ಸರ್ಕಾರವು 371(ಜೆ) ಅನುಷ್ಠಾನಕ್ಕೆ ವಿಶೇಷ ಆದ್ಯತೆ ನೀಡಿದೆ. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ಪ್ರತ್ಯೇಕ ಸಚಿವಾಲಯದ ಮಂಜೂರಾತಿಗೆ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯಿಸಲಾಗಿದೆ. 371 (ಜೆ) ಕಾಯಿದೆಯಿಂದಾಗಿ ಈ ಭಾಗದ ಮಕ್ಕಳಿಗೆ ಉತ್ತಮ ಭವಿಷ್ಯವಿದೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ರಾಜ್ಯ ಸರ್ಕಾರವು ಬದ್ಧವಾಗಿದೆ. ರಾಯಚೂರ ಜಿಲ್ಲೆಯಲ್ಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ ಮಾಡಲಾಗುತ್ತಿದೆ. ವಿಮಾನ ನಿಲ್ದಾಣ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ಅಭಿವೃದ್ಧಿಯ ವಿಷಯದಲ್ಲಿ ಪಕ್ಷಬೇಧ ಮರೆತು ಎಲ್ಲರೂ ಸೇರಿ ಕಾರ್ಯ ಪ್ರವೃತ್ತರಾಗಬೇಕಿದೆ. ಅಧಿಕಾರಿಗಳು ಮತ್ತು ಸಿಬ್ಬಂದಿ ದಕ್ಷತೆಯಿಂದ ಕೆಲಸ ಮಾಡಬೇಕು. ರಾಯಚೂರ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಎಲ್ಲರೂ ಕಂಕಣಬದ್ಧರಾಗಿ ದುಡಿಯೋಣ ಎಂದು ಸಚಿವರು ಸಲಹೆ ಮಾಡಿದರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸಿದ್ದರು.

ಸಮಾರಂಭದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು, ಮಹರ್ಷಿ ವಾಲ್ಮೀಕಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ, 2ನೇ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ತಹಸೀಲ್ದಾರ ಸುರೇಶ ವರ್ಮಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ಸಂಘ ಸಂಸ್ಥೆಗಳ ಪ್ರಮುಖರು, ಗಣ್ಯರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಇದ್ದರು.

# ನಿಜಾಮ ಆಳ್ವಿಕೆಯಿಂದ ಇಂದು ಮುಕ್ತಿ ಪಡೆದ ಸಂಭ್ರಮ ದಿನ:ಪಿ.ಡಿ.ಓ ವೆಂಕಟೇಶ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಸೆ.17:ಇಡಿದೇಶ ಸ್ವಾತಂತ್ರ ಹೊಂದಿದರು ಹೈದ್ರಾಬಾದ ಪ್ರಾಂತ್ಯ ಮಾತ್ರ ನಿಜಾಮರ ದಬ್ಬಾಳಿಕೆಯಲ್ಲಿ ಇತ್ತು, ಸೆಪ್ಟೆಂಬರ್ 17, 1948 ರಂದು ನಿಜಾಮ ಆಳ್ವಿಕೆಯಿಂದ ಇಂದು ಮುಕ್ತಿ ಪಡೆದ ಸಂಭ್ರಮ ದಿನ ಎಂದು ಪಿ.ಡಿ.ಓ ವೆಂಕಟೇಶ ದೇಶಪಾಂಡೆ ಹೇಳಿದರು.

ತಾಲೂಕಿನ ಡಿಗ್ಗಿ ಗ್ರಾಮ ಪಂಚಾಯತದಲ್ಲಿ ಬುಧವಾರ ನಡೆದ ಕಲ್ಯಾಣ ಕರ್ನಾಟಕ ಉತ್ಸವ ಮತ್ತು ವಿಶ್ವ ಕರ್ಮ ದಿನಾಚರಣೆ ನಿಮಿತ್ಯ ಪೂಜೆ ಸಲ್ಲಿಸಿ, ಧ್ವಜಾರೋಹಣ ಮಾಡಿ ಅವರು ಮಾತನಾಡಿದರು,

ಅಂದಿನ ಗ್ರಹಮಂತ್ರಿ ಸರದಾರ ವಲ್ಲಭಾಯಿ ಪಟೇಲ ಅವರ ಪುಲೋ ದಾಳಿಗೆ ನಿಜಾಮ್ ರಾಜ ತನ್ನ ಕಪಿಮುಷಟ್ಟಿಯಲ್ಲಿ ಇದ್ದ ಹೈದ್ರಾಬಾದ ಪ್ರಾಂತ್ಯ ಭಾರತದಲ್ಲಿ ವಿಲೀನ ಮಾಡಲು ಶರಣಾದನು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಕಾರ್ಯದರ್ಶಿ ಬಂಡಯ್ಯ ಸ್ವಾಮಿ, ಕರಾವಸೂಲಿಗಾರದ ಭೀಮರಾವ ದಭಾಲೆ, ಲಕ್ಷ್ಮಿ ಶ್ರೀಗಿರೆ, ಗ್ರಂಥಪಾಲಕ ವಿಜಯಕುಮಾರ ಬನವಾಸೆ, ಪತ್ರಕರ್ತ ಪರಮೇಶ ರಾಂಪುರೆ, ಸುಭಾಶ ಚಂದ್ರ ಬೊಸ ಸಂಘದ ಅಧ್ಯಕ್ಷ ಸಂಗಮನಾಥ ಬಿರಾದಾರ, ಸಿಬ್ಬಂದಿಗಳಾದ ಸೂರ್ಯಕಾಂತ ಖರಾಬೆ, ರಮೇಶ, ಅನಿಲ ಸೇರಿದಂತೆ ಇನ್ನಿತರು ಇದ್ದರು.

# ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಜನ್ಮ ದಿನಾಚರಣೆ ಅಂಗವಾಗಿ ರಕ್ತದಾನ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 17 : ಕೆ.ಇ.ಬಿ ರಸ್ತೆಯಲ್ಲಿರುವ ಮೈ ಡೆಂಟಿಸ್ಟ್ ಅಡ್ವಾನ್ಸ್ ಡೆಂಟಲ್ ಆಸ್ಪತ್ರೆಯಲ್ಲಿ ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿಯವರ 75ನೇ ಹುಟ್ಟು ಹಬ್ಬದ ಅಂಗವಾಗಿ ಬೀದರ ಉತ್ತರ ಕ್ಷೇತ್ರದ ಬಿಜೆಪಿ ಯುವ ಮೋರ್ಚಾ ವತಿಯಿಂದ ರಕ್ತ ದಾನ ಶಿಬಿರ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಈ ರಕ್ತದಾನ ಶಿಬಿರದಲ್ಲಿ 75 ಯುವಕರು ತಮ್ಮ ರಕ್ತ ದಾನ ಮಾಡಿದರು. ಈ ಸಂದರ್ಭದಲ್ಲಿ ಡಾ.ಪಿ. ಸುಧಾಕರ ರೆಡ್ಡಿ, ಬಿಜೆಪಿ ನ್ಯಾಶನಲ್ ಕೋ ಇಂಚಾರ್ಜ ಕರ್ನಾಟಕ ಮತ್ತು ತಮಿಳುನಾಡು, ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ, ರಾಜ್ಯ ಕಾರ್ಯದರ್ಶಿ ಹಾಗೂ ಶಾಸಕರಾದ ಶೈಲೇಂದ್ರ ಬೆಲ್ದಾಳೆ, ವಿಧಾನ ಪರಿಷತ್ತಿನ ಮಾಜಿ ಸಭಾಪತಿ ರಘುನಾಥರಾವ ಮಲ್ಕಾಪೂರೆ, ಬುಡಾ ಮಾಜಿ ಅಧ್ಯಕ್ಷ ಬಾಬುವಾಲಿ, ಬೀದರ ಕ್ಷೇತ್ರದ ನಾಯಕರಾದ ಈಶ್ವರ ಸಿಂಗ್ ಠಾಕೂರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಕಿರಣ ಪಾಟೀಲ ಹಕ್ಯಾಳ, ಬೀದರ ನಗರ ಘಟಕದ ಅಧ್ಯಕ್ಷ ಹಾಗೂ ನಗರ ಸಭೆ ಸದಸ್ಯರಾದ ಶಶಿ ಹೊಸಳ್ಳಿ, ಶ್ರೀಮತಿ ಲುಂಬಿಣಿ ಗೌತಮ, ವೀರು ದಿಗ್ವಾಲ ವಿಜಯಲಕ್ಷ್ಮಿ ಕೋಡಗೆ, ಸರಸ್ವತಿ, ಜಯಶ್ರೀ, ರೋಷನ ವರ್ಮಾ, ನಿತನ ನವಲಕೇಲೆ, ನರೇಶ ಗೌಳಿ, ಗಣೇಶ ಭೋಸ್ಲೆ, ಸುನೀಲ ಗೌಳಿ, ಸಂಗಮೇಶ ಗುಮ್ಮಾ, ಗೋಪಾಲ ಕಕಡಾಲ, ಸಂತೋಷ ರೆಡ್ಡಿ , ವಿರೇಶ ಸ್ವಾಮಿ, ಉಪೇಂದ್ರ ದೇಶಪಾಂಡೆ, ನಿತಿನ ಕರ್ಪೂರ್, ಗುರುನಾಥ ರಾಜಗೀರಾ, ಸಂದೀಪ ಪಾಟೀಲ, ಬಸವ ಮೂಲಗೆ, ಪುಷ್ಪಕ ಜಾಧವ, ಸಂತೋಷ ಬಿರಾದಾರ, ಮುಕೇಶ ಜಾಧವ, ರೋಹಿತ್ ಮಂಗಲಗಿ, ಅಕಾಶ , ಬಾಲಾಜಿ ಪಾಟೀಲ ನೌದಗೇರಿ, ಮಹೇಶ ಬಾವಗೆ, ಶ್ರೀಪ್ರಸಾದ ಚಲವಾ, ಸಚೀನ ಗಾದಗೆ ಸೇರಿ ಹಲವಾರು ನಾಯಕರು ಉಪಸ್ಥಿತರಿದ್ದರೆಂದು ಬೀದರ ಜಿಲ್ಲಾ ಭಾರತೀಯ ಜನತಾ ಪಾರ್ಟಿಯ ಜಿಲ್ಲಾ ಮಾಧ್ಯಮ ಸಂಚಾಲಕರಾದ ಶ್ರೀನಿವಾಸ ಚೌದ್ರಿ ಯವರು ಉಪಸ್ಥಿತಿದ್ದರು.

# ಅದ್ಧೂರಿ ವೀರಭದ್ರೇಶ್ವರ ಜಯಂತಿ, ಕೇದಾರ ಶ್ರೀ ಅಡ್ಡ ಪಲ್ಲಕ್ಕಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 17 : ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ವೀರಶೈವ ಲಿಂಗಾಯತ ಸಂಘಟನಾ ವೇದಿಕೆ ವತಿಯಿಂದ ವೀರಭದ್ರೇಶ್ವರ ಜಯಂತಿ ಹಾಗೂ ಕೇದಾರ ಜಗದ್ಗುರು ಭೀಮಾಶಂಕರಲಿಂಗ ಶಿವಾಚಾರ್ಯ ಭಗವತ್ಪಾದರ ಅಡ್ಡ ಪಲ್ಲಕ್ಕಿ ಉತ್ಸವ ಮಂಗಳವಾರ ಅದ್ಧೂರಿಯಾಗಿ ನಡೆಯಿತು.



ಪಂಚಮುಖಿ ಶಿವಾಲಯ–ಬಿರ್ಲಾ ಮಂದಿರದಲ್ಲಿ ಶಿವಲಿಂಗಕ್ಕೆ ರುದ್ರಾಭಿಷೇಕ ಹಾಗೂ ಅರ್ಚನೆ ಮಾಡುವುದರೊಂದಿಗೆ ಅಡ್ಡಪಲ್ಲಕ್ಕಿಗೆ ಚಾಲನೆ ನೀಡಲಾಯಿತು.

ಅಡ್ಡಪಲ್ಲಕ್ಕಿಯು ಅಲ್ಲಿಂದ 3 ಕಿ.ಮೀ. ಅಂತರದ ಪುರಾತನ ವಾಲ್ಮೀಕಿ ಮಂದಿರವನ್ನು ತಲುಪಿ ಸಮಾರೋಪಗೊಂಡಿತು.

ಮೆರವಣಿಗೆಯಲ್ಲಿ ಮಹಿಳೆಯರು ಕುಂಭ ಕಳಶ ಹೊತ್ತು ಸಾಗಿದರು. ವೀರಗಾಸೆ, ಡೊಳ್ಳು ಕುಣಿತ, ನಗಾರಿ ಮತ್ತಿತರ ಕಲಾ ತಂಡಗಳ ಪ್ರದರ್ಶನ ಗಮನ ಸೆಳೆಯಿತು. ಜಗದ್ಗುರುಗಳಿಗೆ ಜೈಕಾರದ ಘೋಷಣೆಗಳು ಮೊಳಗಿದವು.

ಮೆರವಣಿಗೆ ವಾಲ್ಮೀಕಿ ಮಂದಿರಕ್ಕೆ ಬಂದ ನಂತರ ಜಗದ್ಗುರುಗಳು ವಾಲ್ಮೀಕಿ ಅವರ ಮೂರ್ತಿಗೆ ಪುಷ್ಪಾರ್ಚನೆ ಮಾಡಿದರು. ಮಹಾ ಮಂಡಲೇಶ್ವರ ಕೃಷ್ಣಸಾ ವಿದ್ಯಾರ್ಥಿ ಅವರನ್ನು ಆಶೀರ್ವದಿಸಿದರು.

ವೀರಶೈವ ಲಿಂಗಾಯತ ಸಂಘಟನಾ ವೇದಿಕೆಯ ರಾಷ್ಟ್ರೀಯ ಅಧ್ಯಕ್ಷ ಪ್ರದೀಪ್ ಕಂಕನವಾಡಿ, ಮಾಜಿ ಶಾಸಕರೂ ಆದ ಉಪಾಧ್ಯಕ್ಷ ಮಲ್ಲಿಕಾರ್ಜುನ ಖೂಬಾ, ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿ ಸದಸ್ಯ ಶಿವಯ್ಯ ಸ್ವಾಮಿ, ಮುಖಂಡ ಸತೀಶ್ ಹಿಂಭಾವಿಮಠ, ರಾಜ್ಯ ಅಧ್ಯಕ್ಷ ರವಿ ಬಿರಾದಾರ, ವೀರಶೈವ ಸಮಾಜದ ಹರಿಯಾಣ ಅಧ್ಯಕ್ಷ ಸೋಮವೀರ ಬೇನಿವಾಲ್, ಅಂತರರಾಷ್ಟ್ರೀಯ ಹಿಂದೂ ಸಂಘಟನೆಯ ಅಧ್ಯಕ್ಷ ಅರುಣ್ ಉಪಾಧ್ಯಾಯ, ನಾಂದೇಡನ ಮಾಜಿ ಮಹಾ ಪೌರ ಕಿಶೋರ ಸ್ವಾಮಿ, ಪ್ರಮುಖರಾದ ದಿವ್ಯ ಹಾಗರಗಿ, ಅಲ್ಕಾ ಚೌಧರಿ, ಚಂದ್ರಶೇಖರ ಶಾಸ್ತ್ರಿ, ಬೀರೂರು ಶಿವಸ್ವಾಮಿ, ದ್ವಾರಕನಾಥ ಶಾಸ್ತ್ರಿ, ಪರಮೇಶ ಚಿಕ್ಕಮಠ, ಶಿವಶರಣ ಸಿ.ಎಂ., ವಿದ್ಯಾ ಗುಬ್ಬಿತೋಟದಪ್ಪ ಮತ್ತಿತರ ಮುಖಂಡರು ಹಾಗೂ ವಿವಿಧೆಡೆಯ ಅಪಾರ ಭಕ್ತರು ಮೆರವಣಿಗೆಯಲ್ಲಿ ಪಾಲ್ಗೊಂಡರು.

ಅಡ್ಡ ಪಲ್ಲಕ್ಕಿ ನಂತರ ನಡೆದ ವೀರಭದ್ರೇಶ್ವರ ಜಯಂತಿ ಕಾರ್ಯಕ್ರಮವನ್ನು ಕೇಂದ್ರದ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಉದ್ಘಾಟಿಸಿದರು.

ವೀರಶೈವ ಲಿಂಗಾಯತ ಸಂಘಟನಾ ವೇದಿಕೆ ವತಿಯಿಂದ ವೀರಭದ್ರೇಶ್ವರ ಜಯಂತಿ ಹಾಗೂ ಜಗದ್ಗುರುಗಳ

ಅಡ್ಡಪಲ್ಲಕ್ಕಿ ಉತ್ಸವ ಹಮ್ಮಿಕೊಂಡಿರುವುದು ಸಂತಸದ ಸಂಗತಿ, ಇದು ಸನಾತನ ವೀರಶೈವ ಸಂಘಟನೆಗೆ ಪೂರಕವಾಗಲಿದೆ ಎಂದು ತಿಳಿಸಿದರು.

ಶಿವ ಭೋಲಾಶಂಕರ. ವೀರಭದ್ರನಿಗೆ ಜನ್ಮನೀಡಿ ದುಷ್ಟರನ್ನು ಸಂಹರಿಸಿದ್ದರು. ವೀರಭದ್ರ ಶಿವನ ಪ್ರತಿರೂಪ ಎಂದು ಹೇಳಿದರು.

ರಾಜ್ಯಸಭಾ ಸದಸ್ಯರೂ ಆದ ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಅಶೋಕ್ ಚೌಹಾಣ್ ಅವರಿಗೆ ಕೇದಾರ ಜಗದ್ಗುರುಗಳು ಶ್ರೀ ವೀರಭದ್ರೇಶ್ವರ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಮಾಡಿದರು.

ದೇಶದ ವಿವಿಧೆಡೆಯ ಶಿವಾಚಾರ್ಯರು,

ಸಂತರು, ಗುರು ವಿರಕ್ತರು ಸಮ್ಮುಖ ವಹಿಸಿದ್ದರು.

ರಾಜ್ಯಸಭಾ ಸದಸ್ಯ ಡಾ. ಅಜಿತ್ ಮಾಧವರಾವ್ ಗೋಪಚಡೆ ಮತ್ತಿತರರು ಇದ್ದರು.

# ಸಮಿಕ್ಷೆಯಲ್ಲಿ ಮರಾಠಾ ಎಂದು ಕಡ್ಡಾಯವಾಗಿ ನಮುದಿಸಿ: ಪದ್ಮಾಕರ್ ಪಾಟೀಲ

ಬೀದರ. ಸೆ. 17 : ರಾಜ್ಯ ಸರ್ಕಾರ ಈ ತಿಂಗಳ 22ರಿಂದ ಆಕ್ಟೊಬರ್ 7ರ ವರೆಗೆ ನಡೆಸಲು ಉದ್ದೇಶಿಸಿರುವ ಸಾಮಾಜಿಕ ಹಾಗೂ ಶೈಕ್ಷಣಿಕ ಸಮಿಕ್ಷೆಯಲ್ಲಿ ಧರ್ಮದ ಕಾಲಂನಲ್ಲಿ ಹಿಂದು ಎಂದು, ಜಾತಿ ಕಾಲಂನಲ್ಲಿ ಮರಾಠಾ ಎಂಬುದಾಗಿ, ಉಪಜಾತಿ ಕಾಲಂನಲ್ಲಿ ಕುನಬಿ, ಮಾತೃಭಾಷೆ ಕಾಲಂನಲ್ಲಿ ಮರಾಠಿ ಎಂಬುದಾಗಿ ಕಡ್ಡಾಯವಾಗಿ ನಮುದಿಸುವಂತೆ ಸಕಲ ಮರಾಠಾ ಸಮಾಜದ ಅಧ್ಯಕ್ಷರು ಹಾಗೂ ಮಾಜಿ ಜಿಲ್ಲಾ ಪಂಚಾಯತ ಅಧ್ಯಕ್ಷ ಪದ್ಮಾಕರ್ ಪಾಟೀಲ ಕರೆ ನೀಡಿದರು.



ಬುಧವಾರ ನೌಬಾದ್‌ನಲ್ಲಿರುವ ಮರಾಠಾ ಸಮುದಾಯ ಭವನದಲ್ಲಿ ಕರೆದ ಜಿಲ್ಲೆಯ ಸಮಾಜದ ಮುಖಂಡರ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಸಮಿಕ್ಷೆ ನಡೆಸುವ ಪ್ರತಿಯೊಬ್ಬ ಅಧಿಕಾರಿ ಅಥವಾ ಶಿಕ್ಷಕರು ತಮ್ಮ ಮನೆಗಳಿಗೆ ಬಂದಾಗ ಇದ್ದ ಸತ್ಯವನ್ನು ಬಿಚ್ಚಿಡತಕ್ಕದ್ದು. ಸಮಿಕ್ಷೆಯಲ್ಲಿ 60 ಪ್ರಶ್ನೆಗಳು ಕೇಳಲಾಗಿ ಎಲ್ಲ ಪ್ರಶ್ನೆಗಳಿಗೆ ಸಮರ್ಪಕ ಉತ್ತರ ನೀಡುವಂತೆ ಅವರು ತಿಳಿಸಿದರು.

ಹಿಂದೆ ನಮ್ಮ .ಸಮಾಜದ ಹಿತದೃಷ್ಟಿಯಿಂದ ಎನ್ ಶಂಕ್ರೆಪ್ಪ ಹಾಗೂ ಕಾಂತರಾಜ ಆಯೋಗದ ವರದಿಯಲ್ಲಿ ಮರಾಠಾ ಸಮಾಜದ ಸೆನ್ಸಸ್ ಸರಿಯಾಗಿ ನೀಡಿದ್ದರು. ಸದ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾದ ಮಧುಸುದನ್ ನಾಯಕ ಅವರು ಸಹ ಸಮಾಜದ ಪರವಾಗಿ ಒಳ್ಳೆಯ ನಿರ್ಧಾರ ಕೈಗೊಳ್ಳಲಿದ್ದಾರೆ ಎಂಬ ವಿಶ್ವಾಸವಿದೆ. ನಮ್ಮ ಸಮಾಜದ ಕಾರ್ಯಕರ್ತರು ಇಡೀ ಜಿಲ್ಲೆಯಲ್ಲಿ ಸಂಚರಿಸಿ ನಮ್ಮ ಸಮಾಜದವರಿಗೆ ಜಾಗೃತಿ ಮೂಡಿಸಿ ಸಮಿಕ್ಷಾಧಿಕಾರಿಗಳಿಗೆ ಸರಿಯಾದ ದಾಖಲೆ ಹಾಗೂ ಮಾಹಿತಿ ಸಲ್ಲಿಸಲು ಪ್ರೇರೆಪಿಸಬೇಕೆಂದು ತಿಳಿಸಿದರು.

ಈ ತಿಂಗಳ 22ರಿಂದ ಆಕ್ಟೊಬರ್ 7ರ ವರೆಗೆ ನಡೆಯಲಿರುವ ಈ ಸಮಿಕ್ಷಾ ಸಂದರ್ಭದಲ್ಲಿ ನಮ್ಮ ಸಮುದಾಯದವರು ಮನೆಯಲ್ಲಿಯೆ ಹಾಜರಿತಕ್ಕದ್ದು. ಹೊರ ದೇಶ, ಹೊರ ರಾಜ್ಯ, ಹೊರ ಜಿಲೆಗಳಲ್ಲಿ ಕೆಲಸದಲ್ಲಿರುವ ಸಮಾಜ ಬಾಂಧವರು ಆ ಸಂದರ್ಭದಲ್ಲಿ ಸ್ಥಳಿಯವಾಗಿ ಲಭ್ಯವಿರಬೇಕೆಂದು ಪಾಟೀಲ ಮನವಿ ಮಾಡಿದರು.

ಮರಾಠಾ ಕ್ರಾಂತಿ ಮೋರ್ಚಾ ಸಂಯೋಜಕರಾದ ವೆಂಕಟ ಮೆಯಿಂದೆ ಮಾತನಾಡಿ, ರಾಜ್ಯದಲ್ಲಿ ನಮ್ಮ ಸಮಾಜ ಬಾಂಧವರು 40 ಲಕ್ಷ ಇದ್ದು, ರಾಜ್ಯ ಸರ್ಕಾರವು ಕೇವಲ 16 ಲಕ್ಷ ಮಾತ್ರ ಎಂಬುದಾಗಿ ತಿಳಿಸಿದೆ. ಬೀದರ್ ಜಿಲ್ಲೆಯಲ್ಲಿ ನಮ್ಮ ಸಮಾಜ ಬಾಂಧವರು 3 ವರೆ ಲಕ್ಷ ಜನರಿದ್ದು, ಸತ್ಯ ಸಂಗತಿ ಹೊರಬರಬೇಕಾದರೆ ನಮ್ಮ ಸಮಾಜದವರು ಸಮಿಕ್ಷೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ನಿಜ ಸಂಗತಿ ವಿವರಿಸಬೇಕಿದೆ ಎಂದರು.

ಸರ್ಕಾರದ ಯೋಜನೆಗಳು ದೊರೆಯುವಂತಾಗಲು ಜನಗಣತಿ ಆಧಾರದ ಮೇಲೆ ನಿಂತಿದೆ. ಹಾಗಾಗಿ ಯಾರು ಸಹ ಇದರಿಂದ ದೂರ ಸರಿಯದೆ ಸಮಿಕ್ಷೆಯಲ್ಲಿ ಪಾಲ್ಗೊಳ್ಳಬೇಕೆಂದು ಕರೆ ಕೊಟ್ಟರು.

ಜಿಲ್ಲಾ ಕ್ಷೇತ್ರಿಯ ಮರಾಠಾ ಪರಿಷತ್ ಅಧ್ಯಕ್ಷ ಡಿಗಂಬರರಾವ ಮಾನಕಾರಿ ಮಾತನಾಡಿ, 18ರಂದು ಹುಮನಾಬಾದ್, 19ರಂದು ಔರಾದ್, 20ರಂದು ಭಾಲ್ಕಿ, 21ರಂದು ಬಸವಕಲ್ಯಾಣದಲ್ಲಿ ನಮ್ಮ ಸಮಾಜದ ಬಾಂಧವರ ಸಭೆ ಕರೆಯಲಾಗಿದ್ದು, ಸಭೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ನಮ್ಮ ಕಾರ್ಯಕರ್ತರು ನೀಡುವ ಸಲಹೆ, ಸೂಚನೆಗಳನ್ನು ಪಾಲಿಸತಕ್ಕದ್ದೆಂದು ತಿಳಿಸಿದರು.

ಸಭೆಯಲ್ಲಿ ಡಿ.ಸಿ.ಸಿ ಬ್ಯಾಂಕ್ ನಿರ್ದೇಶಕ ಅಶೋಕ ಸೊಂಜೆ, ಮಾಜಿ ಜಿ.ಪಂ ಉಪಾಧ್ಯಕ್ಷ ಪ್ರಕಾಶ ಪಾಟೀಲ, ಜಿ.ಪಂ ಮಾಜಿ ಅಧ್ಯಕ್ಷ ಅನಿಲ ಭುಸಾರೆ, ಸಕಲ ಮರಾಠಾ ಸಮಾಜದ ಮುಖಂಡರಾದ ಜನಾರ್ಧನ ಬಿರಾದಾರ, ವಿಜಯಕುಮಾರ ಪಾಟೀಲ ಕಣಜಿಕರ್, ಸತೀಶ ಮುಳೆ, ಕಿಸಾನ ಶಿಕ್ಷಣ ಪ್ರಸಾರಕ ಮಂಡಳಿ ಅಧ್ಯಕ್ಷ ಅನಿಲ ಶಿಂಧೆ, ಡಾ.ದಿನಕರ್ ಮೋರೆ, ರಾಮರಾವ ವರವಟ್ಟಿಕರ್, ಕಿಶಾನರಾವ ಪಾಟೀಲ ಇಂಚುರಕರ್, ತಾತ್ಯಾರಾವ ಪಾಟೀಲ, ಅನಿಲ ಕಾಳೆ, ಪಂಚಶಿಲ ಪಾಟೀಲ, ಶಿವಾಜಿರಾವ ಪಾಟೀಲ ಮುಂಗನಾಳ, ಡಿ.ಜಿ ಜಗತಾಪ, ಮಾಧವರಾವ ಕಾದೆಪುರಕರ್ ಸತೀಶ ವಾಸರೆ ಹಾಗೂ ಇತರರು ಉಪಸ್ಥಿತರಿದ್ದರು.

# ನಾಳೆ ಎಬಿವಿಪಿಯಿಂದ ರಥಯಾತ್ರೆ : ಸಚಿನ್ ಕುಳಗೇರಿ




ಬೀದರ. ಸೆ. 17 :ವೀರ ವನಿತೆ ಕಿತ್ತೂರು ರಾಣಿ ಚೆನ್ನಮ್ಮ ಅವರು ಬ್ರಿಟಿಷರ ವಿರುದ್ಧ ವಿಜಯ ಸಾಧಿಸಿ 200 ವರ್ಷಗಳು ತುಂಬಿರುವ ಹಿನ್ನೆಲೆಯಲ್ಲಿ ಹಾಗೂ ಭಾರತದ ಮೊದಲ ಮಹಿಳಾ ಸ್ವತಂತ್ರ ಹೋರಾಟಗಾರ್ತಿ, ವೀರರಾಣಿ ಅಬ್ಬಕ್ಕ ಅವರ 500 ನೇ ಜಯಂತೋತ್ಸವ ಅಂಗವಾಗಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಕರ್ನಾಟಕ ಉತ್ತರ ಪ್ರಾಂತದ ವತಿಯಿಂದ ರಥಯಾತ್ರೆಯನ್ನ ಸಪ್ಟೆಂಬರ್ 19 ರಿಂದ 25 ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಎಬಿವಿಪಿಯ ರಾಜ್ಯ ಕಾರ್ಯದರ್ಶಿ ಸಚಿನ ಕುಳಗೇರಿ ತಿಳಿಸಿದರು. ನಗರದ ಪತ್ರಿಕಾ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಭಾರತದ ಇತಿಹಾಸದಲ್ಲಿ 200 ವರ್ಷಗಳ ಹಿಂದೆ ಮಹಿಳೆಯೋರ್ವಳು ದಕ್ಷ ಆಡಳಿತ ನಡೆಸಿ ಬ್ರಿಟಿಷರ ಈಸ್ಟ್ ಇಂಡಿಯಾ ಕಂಪನಿಯ ವಿರುದ್ಧ ಕತ್ತಿ ಹಿಡಿದು ಧೈರ್ಯದಿಂದ ಯುದ್ಧ ಮಾಡಿ ಮೊದಲ ಯುದ್ಧದಲ್ಲಿ ಅವರನ್ನು ಸೋಲಿಸಿ, ಕಿತ್ತೂರಿನ ಸ್ವತಂತ್ರವನ್ನ ರಕ್ಷಿಸಲು ಯತ್ನಿಸಿದ ಧೀಮಂತ ಮಹಿಳೆ ವೀರರಾಣಿ ಕಿತ್ತೂರು ಚೆನ್ನಮ್ಮ ಬ್ರಿಟಿಷರ ವಸಾಹತುಶಾಹಿ ವಿರುದ್ಧ ಹೋರಾಡಿದ ಮೊದಲ ಮಹಿಳಾ ಆಡಳಿತಗಾರ್ತಿಯಾಗಿ ಭಾರತೀಯ ಸ್ವತಂತ್ರ ಚಳುವಳಿಯ ಪ್ರಮುಖ ಸಂಕೇತವಾಗಿ ಅವರಿಂದು ಸ್ಮರಿಸಲ್ಪಡುತ್ತಾರೆ. 16ನೇ ಶತಮಾನದಲ್ಲಿ ಕರಾವಳಿ ಕರ್ನಾಟಕದ ಉಲ್ಲಾಳವನ್ನು ಆಳಿದ ಚೌಟ ರಾಜವಂಶದ ಪ್ರಥಮ ತೌಲವ ರಾಣಿಯಾಗಿದ್ದಳು ರಾಣಿ ಅಬ್ಬಕ್ಕ ತನ್ನ ಹೋರಾಟದ ಮೂಲಕ ಪೋರ್ಚುಗೀಸರ ಪಾಲಿಗೆ ಸಿಂಹ ಸ್ವಪ್ನವಾಗಿದ್ದಳು ಈ ಇಬ್ಬರು ಕನ್ನಡ ನಾಡಿನ ಹೋರಾಟಗಾರರ ಕುರಿತು ರಾಜ್ಯದ ವಿದ್ಯಾರ್ಥಿ ಸಮುದಾಯಕ್ಕೆ ಮತ್ತು ಸಾರ್ವಜನಿಕರಿಗೆ ತಿಳಿಸುವ ದೃಷ್ಟಿಯಿಂದ ಈ ರಥಯಾತ್ರೆಯನ್ನ ಹಮ್ಮಿಕೊಳ್ಳಲಾಗಿದೆ ಎಂದರು.

ಐದು ಸಾವಿರ ಜನ ಪಾಲ್ಗೊಳ್ಳುವ ನೀರಿಕ್ಷೆ : ಸ್ವಾಗತ ಸಮಿತಿ ಅಧ್ಯಕ್ಷ ಡಾ.ರಜನೀಶ ವಾಲಿ

ರಥಯಾತ್ರೆಯ ಸ್ವಾಗತ ಸಮಿತಿ ಅಧ್ಯಕ್ಷರಾದ ಡಾ.ರಜನೀಶ ವಾಲಿ ಅವರು ಮಾತನಾಡಿ ರಾಜ್ಯಾದ್ಯಂತ ಎರಡು ರಥಯಾತ್ರೆಗಳಿಂದ ಸುಮಾರು 50 ಕ್ಕೂ ಅಧಿಕ ಕಾರ್ಯಕ್ರಮಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ವಿದ್ಯಾರ್ಥಿ ಪರಿಷತ್ ವತಿಯಿಂದ ಹಮ್ಮಿಕೊಂಡಿರುವುದು ಶ್ಲಾಘನೀಯವಾಗಿದೆ ಎಂದರು.

ರಥಯಾತ್ರೆಯು ಸಪ್ಟಂಬರ 19 ರಂದು ಬೆಳಿಗ್ಗೆ ಬೀದರ ನಗರದ ಸಿದ್ದಾರೂಢ ಮಠದ ಆವರಣದಲ್ಲಿ ಬೆಳಿಗ್ಗೆ 9:30 ಕ್ಕೆ ಚಿದಂಬರಾಶ್ರಮದ ಡಾ.ಶಿವಕುಮಾರ ಸ್ವಾಮಿಜಿ ಅವರು ಚಾಲನೆ ನೀಡಲಿದ್ದು ಬಳಿಕ ರಾಣಿ ಕಿತ್ತುರು ಚೆನ್ನಮ್ಮ ವೃತ್ತ (ಮೈಲುರ ಕ್ರಾಸ್)ದ ಬಳಿ 10:30 ಕ್ಕೆ ಸಾರ್ವಜನಿಕ ಸಭೆ ನಡೆಯಲಿದ್ದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಎಬಿವಿಪಿ ರಾಷ್ಟ್ರೀಯ ಕಾರ್ಯದರ್ಶಿ ಶಾಲಿನಿ ವರ್ಮಾ ಅವರು ಮಾತನಾಡಲಿದ್ದಾರೆ, ಸೂಮಾರು

ಐದು ಸಾವಿರ ಜನ ಸೇರುವ ನೀರಿಕ್ಷೆಯಿದ್ದು ಅರ್ಥಪೂರ್ಣ ಕಾರ್ಯಕ್ರಮ ಮಾಡಲು ಎಲ್ಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

ಸ್ವಾಗತ ಸಮಿತಿ ಪ್ರಧಾನ ಕಾರ್ಯದರ್ಶಿ ಶಶಿ ಹೋಸಳ್ಳಿ ಮಾತನಾಡಿ

ಸಾರ್ವಜನಿಕ ಸಭೆಯ ಬಳಿಕ ರಥವು ಬೀದರ ನಗರದ ಪ್ರಮುಖ ವೃತ್ತಗಳ ಮೂಲಕ ಹಾದು ನೌಬಾದ ಮಾರ್ಗವಾಗಿ ಹುಮನಾಬಾದ ತಲುಪಲಿದ್ದು ಮದ್ಯಾಹ್ನ 1 ಗಂಟೆಗೆ ಅಲ್ಲಿಯು ಕೂಡ ಸಾರ್ವಜನಿಕ ಸಭೆ ನಡೆಯಲಿದೆ ಎಂದು ತಿಳಿಸಿದರು.

ಈ ಸಂಧರ್ಭದಲ್ಲಿ

ಸ್ವಾಗತ ಸಮಿತಿ ಉಪಾಧ್ಯಕ್ಷರಾದ ರೇವಣಸಿದ್ದಪ್ಪಾ ಜಲಾದೆ, ಸಂಚಾಲಕ ಗುರುನಾಥ ರಾಜಗೀರಾ, ಸಹ ಸಂಚಾಲಕ ವಿರೇಶ ಸ್ವಾಮಿ, ಎಬಿವಿಪಿ ವಿಭಾಗ ಸಂಘಟನಾ ಕಾರ್ಯದರ್ಶಿ ಹೇಮಂತ, ಜಿಲ್ಲಾ ಪ್ರಮುಖ ಸಂತೋಷ ಹಂಗರಗಿ, ಜಿಲ್ಲಾ ಸಂಚಾಲಕ ನಾಗರಾಜ, ವಿದ್ಯಾರ್ಥಿನಿ ಪ್ರಮುಖ ಸ್ನೇಹಾ, ಪ್ರಾರ್ಥನಾ ಉಪಸ್ಥಿತರಿದ್ದರು.

## ಚಿರತೆ ಹೆಜ್ಜೆ ಗುರುತು ಪರಿಶೀಲನೆ ಮಾಡಿದ ಅರಣ್ಯಾಧಿಕಾರಿಗಳ ತಂಡ





(ಜಗದೀಶ್ ಕುಮಾರ್ ಭೂಮಾ)

**ಮಲ್ಲಮ್ಮ ನುಡಿ ವಾರ್ತೆ**

ಗುರುಮಠಕಲ್: ಸೆ.17 –ತಾಲ್ಲೂಕಿನ ಕಾಕಲವರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಎಂ.ಟಿ.ಪಲ್ಲಿ ಗ್ರಾಮಕ್ಕೆ ಬುಧವಾರ ಆರ್.ಎಫ್.ಒ.ಬುರಾನುದ್ದೀನ್, ಆರ್.ಎಫ್.ಒ ಸಂಗಮೇಶ ಸೇರಿದಂತೆ ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಯ ತಂಡ ಭೇಟಿ ನೀಡಿ, ಹೆಜ್ಜೆ ಗುರುತುಗಳನ್ನು ಪರಿಶೀಲನೆ ಮಾಡಿ ಚಿರತೆ ಇರುವದು ಖಚಿತ ಪಡಿಸಿದ್ದಾರೆ, ಹುಲಿಯ ಹೆಜ್ಜೆ ಗುರುತು ಕಂಡು ಬಂದಿಲ್ಲ, ಗ್ರಾಮಸ್ಥರಿಗೆ ಚಿರತೆ ಸೆರೆ ಹಿಡಿಯುವವರೆಗೂ ಜಾಗ್ರತೆ ವಹಿಸಲು ಸೂಚನೆ ನೀಡಿದರು.

ಇದೇ ತಿಂಗಳ 7ನೇಯ ತಾರೀಖು ಮೊದಲ ಬಾರಿ ಚಿರತೆ ಕಂಡಿದ್ದು, ಕಳೆದ ಮೂರು ನಾಲ್ಕು ದಿನಗಳಲ್ಲಿ ಅಲ್ಲಲ್ಲಿ ಚಿರತೆ ಇರುವುದು ಕಂಡ ಗ್ರಾಮಸ್ಥರು ಭೀತಿಯಲ್ಲೇ ಕೃಷಿ ಕಾಯಕ ಮುಂದುವರೆಸಿಕೊಂಡು ಬರುತ್ತಿದ್ದು, ಎರಡು ದಿನಗಳ ಕೆಳಗೆ ಜಾನುವಾರುಗಳ ಮೇಲೆ ಚಿರತೆ ದಾಳಿ ಮಾಡಿರುವದನ್ನು ಅರಣ್ಯ ಇಲಾಖೆ ಅಧಿಕಾರಿಗಳ ಗಮನಕ್ಕೆ ನಿನ್ನೆ ತರಲಾಗಿತ್ತು, ಇಂದು ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆ ಅಧಿಕಾರಿಗಳ ತಂಡ ಚಿರತೆಯ ಹೆಜ್ಜೆ ಗುರುತು ಸಂಗ್ರಹಿಸಿ, ಚಿರತೆ ಇರುವದನ್ನು ಖಚಿತ ಪಡಿಸಿ ಮುಂದಿನ ಕಾರ್ಯಾಚರಣೆ ಕೈಗೊಂಡು ಶೀಘ್ರದಲ್ಲಿಯೇ ಚಿರತೆ ಸೆರೆ ಹಿಡಿಯುವದಾಗಿ ಮಾಹಿತಿ ನೀಡಿದ್ದಾರೆ. ಚಿರತೆ ಕಂಡು ಬಂದಲ್ಲಿ ಸಾರ್ವಜನಿಕರು ಈ ಸಹಾಯವಾಣಿಗೆ ಸಂಪರ್ಕಿಸಲು ಸೂಚಿಸಲಾಗಿದೆ. 9481993303

ಅರಣ್ಯ ಇಲಾಖೆ ವತಿಯಿಂದ ಸಾರ್ವಜನಿಕರಿಗೆ ಈ ಕೆಳಕಂಡ ಸೂಚನೆ ಪಾಲನೆಗೆ ಸಲಹೆ ನೀಡಿದ್ದಾರೆ.

**ಚಿರತೆಯ ಬಗ್ಗೆ ಮುನ್ನೆಚ್ಚರಿಕೆಯ ಸೂಚನೆಗಳು ಪಾಲಿಸಿ;**

ಚಿರತೆಗಳು ಕಂಡುಬಂದಲ್ಲಿ ಸಹಾಯವಾಣಿ ಕರೆ ಮಾಡುವುದು. ಈ ನಂಬರಿನಲ್ಲಿ ವಾಟ್ಸ್ ಆಫ್ (Whatsapp ಚಾಲನೆಯಲ್ಲಿದ್ದು ಚಿರತೆ ಕಾಣಿಸಕೊಂಡ ಸ್ಥಳದ ಲೊಕೋಷನ್ (GPS location) ಕಳುಹಿಸಬಹುದಾಗಿದೆ.

ಚಿರತೆ ಕಾಣಿಸಿಕೊಂಡಿರುವ ಹಳ್ಳಿಗಳಲ್ಲಿ ಬೆಳಗ್ಗೆ ನಸುಕಿನ ವೇಳೆ ಹಾಗೂ ರಾತ್ರಿ ಕತ್ತಲ ವೇಳೆಯಲ್ಲಿ ಎಚ್ಚರಿಕೆಯಿಂದ ಸಂಚರಿಸುವುದು

ವಾಸದ ಮನೆಗಳು ಮತ್ತು ಜನನಿಬಿಡ ಪ್ರದೇಶಗಳ ಸುತ್ತಮುತ್ತ ಬೆಳೆದಿರುವ ಗಿಡಗಂಟೆಗಳು ಮತ್ತು ಪೊದೆಗಳನ್ನು ತೆರವುಗೊಳಿಸುವುದು. ಸಂಜೆ 6.00 ಘಂಟೆಯ ನಂತರ ಸಾಕುಪ್ರಾಣಿಯನ್ನು ಮನೆಯೊಳಗೆ ಹಾಗೂ ದನ–ಕರು ಜಾನವಾರುಗಳನ್ನು ಕೊಟ್ಟಿಗೆಯ ಒಳಗೆ ಕಟ್ಟಿಹಾಕಬೇಕು.

ರಾತ್ರಿ ವೇಳೆಯಲ್ಲಿ ರೈತರು ಜಮೀನುಗಳಲ್ಲಿ ಸಂಚರಿಸುವಾಗ ಕೈಯಲ್ಲಿ ಕುಡುಗೋಲು ಅಥವಾ ದೊಣ್ಣೆ ಹಿಡಿದು ಸಂಚರಿಸುವುದು.

ಸಾರ್ವಜನಿಕರು ಚಿರತೆಯನ್ನು ನೋಡಿದಾಗ ಆದಷ್ಟು ಜಾಗ್ರತೆಯಿಂದ ದೂರವಿರಬೇಕು ಹಾಗೂ ಸುರಕ್ಷಿತ ಸ್ಥಳಗಳಿಗೆ ಹೋಗಬೇಕು.

ಚಿರತೆ ಕಾರ್ಯಾಚರಣೆ ಸಮಯದಲ್ಲಿ ಅರಣ್ಯ ಇಲಾಖೆಯ ಸಿಬ್ಬಂದಿಯೊಂದಿಗೆ ಶಾಂತಿಯುತವಾಗಿ ಹಾಗೂ ಸಂಯಮದಿಂದ ವರ್ತಿಸಿ, ಸಿಬ್ಬಂದಿಗಳಿಗೆ ಸಂಪೂರ್ಣ ಸಹಕಾರ ನೀಡುವುದು. ಚಿರತೆ ಕಾಣಿಸಕೊಂಡಿರುವ ಹಳ್ಳಿಗಳಲ್ಲಿ ಮಕ್ಕಳು ಒಬ್ಬಂಟಿಯಾಗಿ ಒಡಾಡಲು ಬಿಡಬಾರದು ಯಾವುದೇ ಕಾರಣಕ್ಕೂ ಬಯಲು ಬಹಿರ್ದೆಸೆಗೆ ಹೋಗಬಾರದು. ರೈತರು ಹೊಲಕ್ಕೆ ಅಥವಾ ದನ–ಕರು ಜಾನುವಾರುಗಳನ್ನು ಮೇಯಿಸಲು ಹೋದಾಗ ಬಯಲು ಪ್ರದೇಶಗಲ್ಲಿ ನಿಲ್ಲುವುದು. ಪೋದೆಗಳ ಬಳಿ ಒಂಟಿಯಾಗಿ ಕೂರಬಾರದು, ವಾಸದ ಮನೆಗಳು ಮತ್ತು ಜನನಿಬಿಡ ಪ್ರದೇಶಗಳ ಸುತ್ತಮುತ್ತ ಕುರಿ, ಕೋಳಿ ಇನ್ನಿತರೆ ಮಾಂಸದ ತ್ಯಾಜ್ಯ ವಸ್ತುಗಳನ್ನು ಬಿಸಾಡಬಾರದು. ಆಕಸ್ಮಿಕವಾಗಿ ಚಿರತೆಗಳು ಕಂಡುಬಂದ ಸಂದರ್ಭದಲ್ಲಿ ವಿನಾಕಾರಣ ಮೊಬೈಲ್ನಲ್ಲಿ ವಿಡಿಯೋ ಮಾಡುವುದು, ಫೋಟೋ ಕ್ಲಿಕ್ಕಿಸುವುದು, ಸೆಲ್ಫಿ ತಗೆದುಕೊಳ್ಳುವುದು ಹಾಗೂ ಗಲಾಟೆ ಮಾಡಬಾರದು, ದನ–ಕರು ಜಾನುವಾರುಗಳನ್ನು ಮೇಯಿಸುವಾಗ ಹಠಾತ್ತಗಿ ಚಿರತೆ–ಯು ಜಾನುವಾರುಗಳ ಮೇಲೆ ಆಹಾರಕ್ಕಾಗಿ ದಾಳಿ ಮಾಡಿದರೆ ದೂರ ಸರಿಯಬೇಕು ಚಿರತೆಗೆ ಪ್ರತಿರೋಧ ಮಾಡಬಾರದು. ಜಾನುವಾರನ್ನು ಚಿರತೆ ಹತ್ಯೆ ಮಾಡಿದಲ್ಲಿ ಅದನ್ನು ಮುಟ್ಟಬಾರದು. ಚರತೆ ಹಾವಳಿ ಕುರಿತಂತೆ ಯಾವುದೇ ಸುಳ್ಳು ಸುದ್ದಿ, ವಂದತಿ ಹಬ್ಬಿಸಬಾರದು. ಅನಾವಶ್ಯಕವಾಗಿ ಸ್ಪೋಟಕವಸ್ತುಗಳನ್ನು ಸಿಡಿಸಬಾರದು. ಗ್ರಾಮಸ್ಥರ ಪ್ರಕಾರ ಚಿರತೆ ಆಹಾರಕ್ಕಾಗಿ ಕಳೆದ ಒಂದು ತಿಂಗಳಿಂದ ಗ್ರಾಮದ ಹೊರವಲಯದ ಕಾಡಿನಲ್ಲಿ ಸುತ್ತುತ್ತಿದ್ದು, ಈಗಾ ಗ್ರಾಮದ ಕಡೆ ಮುಖ ಮಾಡಿದೆ ಬಹು ಬೇಗ ಕಾರ್ಯಚರಣೆ ಮಾಡಿ ಚಿರತೆ(ಹುಲಿ) ಸೆರೆ ಹಿಡಿಯಲು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

## ಮೋದಿ ಹುಟ್ಟು ಹಬ್ಬದ ನಿಮಿತ್ಯ ರಕ್ತದಾನ ಶಿಬಿರ

**ಮಲ್ಲಮ್ಮ ನುಡಿ ವಾರ್ತೆ**

ಶಹಾಪುರ: ದಿಟ್ಟ ನಡೆಯ ಯುಗಪುರುಷ, ರಾಜಕೀಯ ತಪಸ್ವೀ, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು 74 ವಸಂತಗಳನ್ನು ಪೂರೈಸಿ 75ನೇ ವರ್ಷಕ್ಕೆ ಕಾಲಿಡುತ್ತೀರುವ ಹಿನ್ನಲೇ ಅವರ ಹುಟ್ಟು ಹಬ್ಬದ ನಿಮಿತ್ಯ ಭಾರತೀಯ ಜನತಾ ಪಾರ್ಟಿವತಿಯಿಂದ ರಕ್ತದಾನ ಶಿಬಿರ ಕಾರ್ಯಕ್ರಮ ಜರುಗಿತು.

ನಗರದ ಬಿಜೆಪಿ ಕಛೇರಿಯಲ್ಲಿ ನಡೆದ ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡ ಅಮೀನರೆಡ್ಡಿ ಯಾಳಗಿ ಮಾತನಾಡಿ, ಅನೇಕ ಸವಾಲು ಬಿಕ್ಕಟ್ಟುಗಳ ನಡುವೆಯೂ ದೇಶವನ್ನೂ ಪ್ರಗತಿಯತ್ತ ಮುನ್ನಡೆಸುತಿದ್ದು ಭಾರತದ ಸಮಗ್ರ ಅಭಿವೃದ್ಧಿಯ ದಿಕ್ಕನ್ನು ನಿರ್ಧರಿಸುವಲ್ಲಿ ಧೀಮಂತ ನಾಯಕತ್ವವನ್ನು ಪ್ರದರ್ಶಿಸುತ್ತೀರುವ ಇವರ ಜೀವನದ ಹಾದಿ ಈಗೆ ಮುಂದುವರೆಯಲಿ ಎಂದರು. ಕಾರ್ಯಕ್ರಮದಲ್ಲಿ 85 ಕ್ಕೂ ಹೆಚ್ಚು ಅಭಿಮಾನಿಗಳು ರಕ್ತದಾನ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷ ದೇವಿಂದ್ರಪ್ಪ ಕೊನೇರ, ನಗರ ಮಂಡಲ ಅಧ್ಯಕ್ಷ ಚಂದ್ರಶೇಖರ ಯಾಳಗಿ, ತಿರುಪತಿ ಹತ್ತಿಕಟಗಿ, ದಾಮು ಪವಾರ, ಮಲ್ಲಿಕಾರ್ಜುನ ಚಿಲ್ಲಾಳ, ಡಾ.ಶಿವರಾಜ ದೇಶಮುಖ, ರಾಜುಗೌಡ ಪಾಟೀಲ ಉಕ್ಕಿನಾಳ, ಡಾ.ಸಂತೋಷ ಚೆನ್ನೂರ, ಅಪ್ಪುಗೌಡ ಯಾಳಗಿ, ಮಹೇಶ ರಸ್ತಾಪುರ, ಸಾಯಿಬಣ್ಣ ನಾಶಿ, ಕರಬಸಪ್ಪ ಬಿರಾಳ ಸೇರಿದಂತೆ ಬಿಜೆಪಿ ಕಾರ್ಯಕರ್ತರು, ಅಭಿಮಾನಿಗಳು ಇದ್ದರು.



ಶಹಾಪುರ: ಶ್ರೀ ವಿಧ್ಯಾನಿಧಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಶಹಾಪುರನಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಮತ್ತು ಜಗದ್ಗುರು ವಿರಾಟ ವಿಶ್ವಕರ್ಮ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಆಚರಿಸಲಾಯಿತು.ಕಾಲೇಜಿನ ಪ್ರಾಚಾರ್ಯರು ಮತ್ತು ಸಿಬ್ಬಂದಿಗಳು

## ದಿ.ಬಾಪುಗೌಡ ದರ್ಶನಾಪುರ ಟ್ಯಾಕ್ಸಿ ಸ್ಟ್ಯಾಂಡ್ ಉದ್ಘಾಟನೆ

**ಮಲ್ಲಮ್ಮ ನುಡಿ ವಾರ್ತೆ**

ಶಹಾಪುರ; ನಗರದ ಹೊಸ್ ಬಸ್ ನಿಲ್ದಾಣದ ಹಿಂದೆ ಕರ್ನಾಟಕ ಚಾಲಕರ ಒಕ್ಕೂಟ(ರಿ) ತಾಲೂಕ ಘಟಕದಿಂದ ದಿ.ಬಾಪುಗೌಡ ದರ್ಶನಾಪುರ ತಾಲೂಕ ಘಟಕ ಟ್ಯಾಕ್ಸಿ ಸ್ಟ್ಯಾಂಡ್‌ನ್ನು ಸಣ್ಣ ಕೈಗಾರಿಕ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪಗೌಡ ದರ್ಶನಾಪುರ ಉದ್ಘಾಟಿಸಿದರು.

ಬಳಿಕ ಮಾತನಾಡಿ 1994 ರಿಂದಲೂ ನಾನು ನಿಮ್ಮಗಳ ಪರವಾಗಿದ್ದೇನೆ. ಈ ಹಿಂದೆ ನಗರಸಭೆ ಬಳಿ ಸಹ ಟ್ಯಾಕ್ಸಿ ಚಾಲಕರಿಗಾಗಿ ಸ್ಥಳ ನೀಡಲಾಗಿತ್ತು, ನಂತರ ಶಾಲೆಯ ಸ್ಥಳ ಆಗಿದ್ದರಿಂದ ಸಮಸ್ಯೆ ಆಗಿತ್ತು. ದುಡಿಯುವ ವರ್ಗಕ್ಕೆ ಅನ್ಯಾಯ ಆಗದಂತೆ ಮುಂದಿನ ದಿನಗಳಲ್ಲಿ ಟ್ಯಾಕ್ಸಿ ಚಾಲಕರಿಗೆ ಸ್ಥಳ ನೀಡಿ, ಕುಡಿಯುವ ನೀರು, ಶೇಡ್ ಹಾಕಿ ಕೊಡಲಾಗುವುದು. ಟ್ಯಾಕ್ಸಿ ಸ್ಟ್ಯಾಂಡ್ ಬಸ್ ನಿಲ್ದಾಣದ ಬಳಿ ಇದ್ದರೆ ನಿಮಗೆ ಲಾಭವಾಗುತ್ತದೆ ಆದ್ದರಿಂದ ಮುಂದಿನ ಒಂದು ವರ್ಷದ ಒಳಗೆ ಶೆಡ್ ನಿರ್ಮಿಸಿ ಕೊಡಲಾಗುವುದು, ಮೂಲಭೂತ ಸೌಲಭ್ಯ ಒದಗಿಸಿ ಸದಾ ನಿಮ್ಮ ಜೊತೆ ಇರುತ್ತೇನೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಪೌರಾಯುಕ್ತ ಜೀವನ್, ಜಿಲ್ಲಾಧ್ಯಕ್ಷ ನಾರಾಯಣಸ್ವಾಮಿ, ಮಲ್ಲಿಕಾರ್ಜುನ ಚೌದ್ರಿ, ಹೊನ್ನಪ್ಪ ಜಂಗಳಿ, ಹಣಮಂತ ಕೊನೇರ, ಪ್ರಭು ಕೋರವಾರ, ಬಸು ಹಿರೇಗೌಡ, ಮಲ್ಲು ಬಾಣತಿಹಾಳ, ಶಿವುಕುಮಾರ, ಧರ್ಮಸಿಂಗ್, ಇಸ್ಮಾಯಿಲ್ ಸಾಬ್, ಮಹಾದೇವ ಹೊಸಮನಿ, ಸಂತೋಷ ಮದ್ರಿಕಿ ಸೇರಿದಂತೆ ಟ್ಯಾಕ್ಸಿ ಚಾಲಕರು ಇದ್ದರು.

## ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದಿಂದ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ




**ಮಲ್ಲಮ್ಮ ನುಡಿ ವಾರ್ತೆ**

ಯಾದಗಿರಿ।ನಗರದಲ್ಲಿ ಕೆಆರ್ಎಸ್ ಪಕ್ಷವು ಕಲ್ಯಾಣ ಕರ್ನಾಟಕ ವಿಮೋಚನಾ ದಿನವನ್ನು ಆಚರಿಸಿತು. ಕುಟುಂಬ ರಾಜಕಾರಣ ಮತ್ತು ಭ್ರಷ್ಟಾಚಾರದಿಂದಾಗಿ ಕಲ್ಯಾಣ ಕರ್ನಾಟಕ ಭಾಗವು ಇನ್ನೂ ಹಿಂದುಳಿದಿದ್ದು, ಈ ದುರ್ದಶೆಯಿಂದ ಯಾದಗಿರಿ ಜನತೆಯನ್ನು ಮುಕ್ತಗೊಳಿಸಲು ಕೆಆರ್ಎಸ್ ಪಕ್ಷವು ಹೋರಾಟ ನಡೆಸಲಿದೆ ಎಂದು ಪಕ್ಷದ ಮುಖಂಡರು ಕರೆ ನೀಡಿದರು.

ಯಾದಗಿರಿಯ ಶ್ರೀ ವಿದ್ಯಾಮಂಗಲ ಕಾರ್ಯಾಲಯದಲ್ಲಿ ನಡೆದ ಕಾರ್ಯಕ್ರಮದಲ್ಲಿ, ಪಕ್ಷದ ಜಿಲ್ಲಾ ಅಧ್ಯಕ್ಷ ಜಗನ್ನಾಥ ಎಸ್. ಚಿಂತನಹಳ್ಳಿ ಅವರು ಮಾತನಾಡಿ, ಬಸವಣ್ಣನವರ ತತ್ವಗಳ ಮೇಲೆ ಪ್ರೇರಣೆಗೊಂಡ ಕೆಆರ್ಎಸ್ ಪಕ್ಷವು, ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗಾಗಿ ಶ್ರಮಿಸುತ್ತದೆ ಎಂದು ಹೇಳಿದರು. ಪಕ್ಷದ ಗೌರವಾಧ್ಯಕ್ಷರಾದ ರವಿ ಕೃಷ್ಣಾರೆಡ್ಡಿ ಅವರ ನೇತೃತ್ವದಲ್ಲಿ ಕೆಆರ್ಎಸ್ ಪಕ್ಷವು ಪ್ರತಿಯೊಂದು ಹಳ್ಳಿಯಲ್ಲಿಯೂ ತನ್ನ ಬುನಾದಿಯನ್ನು ಭದ್ರಪಡಿಸಿಕೊಳ್ಳುತ್ತಿದೆ ಎಂದು ತಿಳಿಸಿದರು. ಕಲ್ಯಾಣ ಕರ್ನಾಟಕದ ದುಸ್ಥಿತಿಗೆ ಕುಟುಂಬ ರಾಜಕಾರಣವೇ ಕಾರಣ ಕಾರ್ಯಕ್ರಮದಲ್ಲಿ ಮಾತನಾಡಿದ ಕೆಆರ್ಎಸ್ ಪಕ್ಷದ ಗೌರವಾಧ್ಯಕ್ಷ ರವಿ ಕೃಷ್ಣಾರೆಡ್ಡಿ ಅವರು, ರಮಾನಂದ ತೀರ್ಥ ಮತ್ತು ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಹೋರಾಟದಿಂದ ಕಲ್ಯಾಣ ಕರ್ನಾಟಕಕ್ಕೆ ವಿಮೋಚನೆ ಸಿಕ್ಕರೂ, ಈ ಭಾಗದಲ್ಲಿನ ಕುಟುಂಬ ರಾಜಕಾರಣದಿಂದಾಗಿ ಅಭಿವೃದ್ಧಿ ಕುಂಠಿತವಾಗಿದೆ ಎಂದು ಹೇಳಿದರು. ಈ ಸಮಸ್ಯೆಗಳಿಗೆ ಇತಿಶ್ರೀ ಹಾಡಲು ಮುಂಬರುವ ಎಲ್ಲಾ ಚುನಾವಣೆಗಳಲ್ಲಿ ಪಕ್ಷದ ಸೈನಿಕರನ್ನು ಕಣಕ್ಕಿಳಿಸಲಾಗುವುದು ಎಂದು ತಿಳಿಸಿದರು.

ಪಕ್ಷದ ರಾಜ್ಯಾಧ್ಯಕ್ಷ ದೀಪಕ್ ಸಿ.ಎನ್. ಅವರು ಮಾತನಾಡಿ, ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ರಾಜಕೀಯ ಮತ್ತು ಸಾಮಾಜಿಕ ಸಮಾನತೆ ಸಿಕ್ಕಿಲ್ಲ. ಕೆಕೆಆರ್‌ಡಿಬಿಯ ಅನುದಾನವನ್ನು ದುರುಪಯೋಗಪಡಿಸಿಕೊಳ್ಳುವ ಮೂಲಕ ಜನರಿಗೆ ವಂಚಿಸಲಾಗಿದೆ ಎಂದು ಆರೋಪಿಸಿದರು. ಈ ಎಲ್ಲಾ ಸಮಸ್ಯೆಗಳಿಗೆ ಪರ್ಯಾಯವಾಗಿ ಕೆಆರ್ಎಸ್ ಪಕ್ಷಕ್ಕೆ ಬೆಂಬಲ ನೀಡುವಂತೆ ಜನರಿಗೆ ಕರೆ ನೀಡಿದರು.

ಜನರ ಧ್ವನಿಯಾಗಲಿದೆ ಕೆಆರ್ಎಸ್ ಪಕ್ಷ ಜಿಲ್ಲಾ ಉಸ್ತುವಾರಿ ಹಾಗೂ ರಾಜ್ಯ ಸಂಘಟನಾ ಕಾರ್ಯದರ್ಶಿ ದೀಪಾ ಮನ್ನೂರು ಅವರು ಮಾತನಾಡಿ, ಯಾದಗಿರಿ ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗದಲ್ಲಿನ ಜನರು ಮೂಲಭೂತ ಸೌಲಭ್ಯಗಳ ಕೊರತೆಯಿಂದ ಕಷ್ಟಪಡುತ್ತಿದ್ದಾರೆ. ಕೆಆರ್ಎಸ್ ಪಕ್ಷವು ಜನಸಾಮಾನ್ಯರ ಧ್ವನಿಯಾಗಿ ಕೆಲಸ ಮಾಡಲಿದೆ ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ರಾಜ್ಯದ ಹಲವು ಜಿಲ್ಲೆಗಳ ಅಧ್ಯಕ್ಷರು, ಕಾರ್ಯಾಧ್ಯಕ್ಷರು ಹಾಗೂ ಪಕ್ಷದ ಪ್ರಮುಖ ನಾಯಕರು ಭಾಗವಹಿಸಿದ್ದರು.

## ಮಾಜಿ ಶಾಸಕ ದಿ.ಮುದ್ನಾಳ್ ಅವರ ಪ್ರಥಮ ಪುಣ್ಯ ಸ್ಮರಣೆ;ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಬಣ್ಣನೆ ವೆಂಕಟರಡ್ಡಿ ಅವರದ್ದು ನೇರ ನುಡಿಯ ವ್ಯಕ್ತಿತ್ವ

**ಮಲ್ಲಮ್ಮ ನುಡಿ ವಾರ್ತೆ**




ಯಾದಗಿರಿ: ರಾಜಕೀಯದಲ್ಲಿ ಸಾಮಾನ್ಯವಾಗಿ ನಾಯಕರುಗಳ ಹಿಂದೆ ಜನರು ಹೋಗುತ್ತಾರೆ. ಆದರೆ, ಮುದ್ನಾಳ್ ಮನೆತನದ ರಾಜಕೀಯ ವಿಷಯದಲ್ಲಿ ನಾಯಕರೇ ಸದಾ ಜನರ ಹಿಂದೆ ಇರುವುದು ಅಪರೂಪದ ಸಂಗತಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ನಗರದ ಮುದ್ನಾಳ್ ಲೇಔಟ್ ನಲ್ಲಿ ಬುಧವಾರ ಆಯೋಜಿಸಿದ್ದ ಮಾಜಿ ಶಾಸಕ ದಿ.ವೆಂಕಟರಡ್ಡಿ ಮುದ್ನಾಳ್ ಅವರ ಪ್ರಥಮ ಪುಣ್ಯಸ್ಮರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವೆಂಕಟರಡ್ಡಿ ಅವರದ್ದು ನೇರ ನುಡಿಯ ವ್ಯಕ್ತಿತ್ವವಾಗಿತ್ತು. ಸದಾ ಜನರೊಂದಿಗೆ ಬೆರೆತು ಅವರ ಕಷ್ಟ, ಸುಖದಲ್ಲಿ ಭಾಗಿಯಾಗುತ್ತಿದ್ದರು ಎಂದು ಗುಣಗಾನ ಮಾಡಿದರು.

ಕಳೆದ 2018ರ ಚುನಾವಣೆ ವೇಳೆ ಮುದ್ನಾಳ್ ಅವರಿಗೆ ಗುರಮಠಕಲ್ ಕ್ಷೇತ್ರದಿಂದ ಸ್ಪರ್ಧೆ ಮಾಎಲುವ ಬಯಕೆ ಇತ್ತು. ಆದರೆ, ಕೆಲ ಅನಿವಾರ್ಯ ಕಾರಣಗಳಿಂದ ಅವರಿಗೆ ಯಾದಗಿರಿ ಕ್ಷೇತ್ರದಿಂದ ಸ್ಪರ್ಧಿಸಲು ಪಕ್ಷ ಸೂಚನೆ ನೀಡಿತ್ತು. ಈ ವಿಷಯ ನಮ್ಮ ತಂದೆ ಬಿ.ಎಸ್.ಯಡಿಯೂರಪ್ಪ ವೆಂಕಟರಡ್ಡಿ ಅವರಿಗೆ ತಿಳಿಸಿದಾಗ ಅವರು ಮರು ಮಾತನಾಡದೆ, ನೀವು ಮುಖ್ಯಮಂತ್ರಿಯಾಗಬೇಕು, ರೈತರ ಸಮಸ್ಯೆ ದೂರವಾಗಿಸಬೇಕು. ಇದಕ್ಕಾಗಿ ನಾನು ಯಾವ ಕ್ಷೇತ್ರದಿಂದ ಹೇಳಿದರೂ ಸ್ಪರ್ಧೆ ಮಾಡುತ್ತೇನೆ ಎಂದು ಹೇಳುವ ಮೂಲಕ ಬಿಎಸ್ ವೈ ಅವರ ಹೆಗಲಿಗೆ ಹೆಗಲು ಕೊಟ್ಟು ನಡೆದವರು ಎಂದು ಹಳೇ ನೆನಪುಗಳನ್ನು ಮೆಲಕು ಹಾಕಿದರು.

ಮಾಜಿ ಸಚಿವ ನರಸಿಂಹ ನಾಯಕ ( ರಾಜುಗೌಡ) ಮಾತನಾಡಿ, ವೆಂಕಟರಡ್ಡಿ ಮತ್ತು ವೀರಬಸವಂತರಡ್ಡಿ ಮುದ್ನಾಳ್ ಅವರು ನನಗೆ ಹಿರಿಯಣ್ಣನಂತಿದ್ದರು. ಕ್ಷೇತ್ರ್ ಯಾವುದೇ ಕೆಲಸಗಳಾಗಬೇಕಾದರೂ ಮುಖ್ಯಮಂತ್ರಿಗಳ ಬಳಿಗೆ ನನ್ನ ಕರೆದು–ಕೊಂಡು ಹೋಗುತ್ತಿದ್ದರು. ವಿಶೇಷವಾಗಿ ವೆಂಕಟರಡ್ಡಿ ಮುದ್ನಾಳ್ ಅವರಲ್ಲಿ ಕಪಟವಿರಲಿಲ್ಲ. ಇದ್ದದ್ದನ್ನು ಇದ್ದ ಹಾಗೆ ನೇರವಾಗಿ ಮಾತನಾಡುತ್ತಿದ್ದರು ಎಂದರು.

ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಚಲುವಾದಿ ನಾರಯಣಸ್ವಾಮಿ ಮಾತನಾಡಿ, ನಾನು ಬೆಂಗಳೂರು ಮೂಲದಿಂದ ಎಂಎಲ್ಸಿ ಆಗಿದ್ದೇನೆ. ಆದರೆ ಮುದ್ನಾಳ್ ಅವರು ನನಗೆ ಯಾದಗಿರಿ ಕ್ಷೇತ್ರವನ್ನು ಮಾದರಿಯನ್ನಾಗಿ ಪಡೆದು ಅಭಿವೃದ್ಧಿ ಮಾಡಲು ಮುಂದಾಗಿ ಎಂದು ಮನವಿ ಮಾಡಿಕೊಂಡಾಗ ಈ ಜಿಲ್ಲೆಗೆ ಬಂದೆ. ಇವತ್ತು ಮುದ್ನಾಳ್ ನಮ್ಮ ಮಧ್ಯೆ ಇಲ್ಲ. ಆದರೆ, ಅವರ ಪುತ್ರ ಮಹೇಶರಡ್ಡಿ ಎಲ್ಲರೊಂದಿಗೆ ಬೆರೆತು ಕೆಲಸ ಮಾಡುತ್ತಿದ್ದಾನೆ. ನಾನು ಮತ್ತು ಮಹೇಶರಡ್ಡಿ ಇಬ್ಬರೂ ಸಹೋದರರಂತೆ ಇರುತ್ತೇವೆ ಎಂದು ಹೇಳಿದರು.

ಸಾನಿಧ್ಯ ಕರುಣಿಸಿದ್ದ ಅಬ್ಬೆತುಮಕೂರಿನ ಪೀಠಾಧಿಪತಿ ಡಾ.ಗಂಗಾಧರ ಮಹಾಸ್ವಾಮಿಗಳು ಅಶೀರ್ವಚನ ನೀಡಿ, ವೆಂಕಟರಡ್ಡಿ ಮುದ್ನಾಳ್ ಕಠೋರ ಮಾತನಾಡುವ ಸ್ವಭಾವ ಹೊಂದಿದ್ದರೂ ಮನಸ್ಸು ಅಷ್ಟೇ ಮೃದುವಾಗಿತ್ತು.ಅಲ್ಲದೆ ಸರಳತೆಯ ಮೂಲಕ ಎಲ್ಲರೊಂದಿಗೆ ಬೆರೆ–ಯುತ್ತಿದ್ದರು ಎಂದು ನುಡಿದರು.

ಯುವ ನಾಯಕ ಮಹೇಶರಡ್ಡಿ ಮುದ್ನಾಳ್ ಪ್ರಸ್ತಾವಿಕ ಮಾತನಾಡಿ, ನೆರೆದ ಇಷ್ಟೊಂದು ಜನಸ್ತೋಮ ಕಂಡು ನನಗೆ ಮಾತು ಹೊರಡುತ್ತಿಲ್ಲ ಎಂದು ಕ್ಷಣಕಾಲ ಭಾವುಕರಾದರು.ನಮ್ಮ ತಾತ ದಿ.ವಿಶ್ವನಾಥರಡ್ಡಿ ಮುದ್ನಾಳ್ ಕಲ್ಯಾಣ ಭಾಗಕ್ಕೆ ಸಂವಿಧಾನದ 371 ಕಲಂ ಹೋರಾಟ ಆರಂಭಿಸಿದವರು. ಅವರ ಮಾರ್ಗದರ್ಶನದಲ್ಲಿ ಸಾಗಿದ್ದ ನಮ್ಮ ತಂದೆಯವರ ಆದರ್ಶ ಮುಂದಿಟ್ಟುಕೊಂಡು ನಾನು ಮುನ್ನೆಡೆಯುತ್ತಿದ್ದೇನೆ. ಕ್ಷೇತ್ರದ ಜನರ ಕಷ್ಟ, ಸುಖಗಳಲ್ಲಿ ಮುದ್ನಾಳ್ ಪರಿವಾರದವರು ಸದಾ ಇರಲಿದ್ದಾರೆ. ನಮ್ಮ ಅಭಿಮಾನಿಗಳು ಮತ್ತು ಕಾರ್ಯಕರ್ತರು ಈ ವಿಷಯದಲ್ಲಿ ಗೊಂದಲಕ್ಕೆ ಬೀಳಬೇಡಿ ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಹೆಡಗಿಮದ್ರಾ ಶ್ರೀ ಶಾಂತಮಲ್ಲಿಕಾರ್ಜುನ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ಗುರುಮಿಟ್ಕಲ್ ಶ್ರೀ ಮುರುಘರಾಜೇಂದ್ರ ಸ್ವಾಮೀಜಿ, ನೇರಡಗಂಬ ಪಂಚಮ ಸಿದ್ದಲಿಂಗ ಸ್ವಾಮೀಜಿ, ವಿಶ್ವಾ–ರಾಧ್ಯ ಸ್ವಾಮಿಜಿ, ದೋರನಹಳ್ಳಿ ಶ್ರೀಗಳು ಮತ್ತು ಚಿಕ್ಕಮಠದ್ದ ಶ್ರೀಗಳು ಶಾಸಕರಾದ ಬಸವರಾಜ ಮತ್ತಿಮುಡ, ಡಾ.ಅವಿನಾಶ ಜಾಧವ, ಎಂಎಲ್ಸಿ ಬಿ.ಜಿ.ಪಾಟೀಲ್, ಮಾಜಿ ಸಂಸದ ರಾಜಾ ಅಮರೇಶ್ವರ ನಾಯಕ ಮಾಜಿ ಸಚಿವ ಡಾ.ಎ.ಬಿ.ಮಾಲಕರಡ್ಡಿ, ದೊಡ್ಡಪಗೌಡ ಪಾಟೀಲ್ ನರಿಬೋಳ, ಪ್ರಮುಖರಾದ ರಾಚನಗೌಡ ಮುದ್ನಾಳ್, ಹಣಮಂತರಡ್ಡಿ ಮುದ್ನಾಳ, ಮಲ್ಲಣ್ಣಗೌಡ ಪಾಟೀಲ್ ಹತ್ತಿಕುಣಿ, ನಗರಸಭೆ ಅಧ್ಯ–ಕ್ಷೆ ಲಲಿತಾ ಅನಪುರ, ಇತರರು ಇದ್ದರು. ಪ್ರಕಾಶ ಅಂಗಡಿ ನಿರೂಪಿಸಿದರು. ಶರಣಗೌಡ ಬಾಡಿಯಾಳ ವಂದಿಸಿದರು.

### ರಕ್ತದಾನ, ನೇತ್ರ ತಪಾಸಣಾ ಶಿಬಿರ

ಪ್ರಥಮ ಪುಣ್ಯಸ್ಮರಣೆ ನಿಮಿತ್ತ ಮುದ್ನಾಳ್ ಅಭಿಮಾನಿ ಬಳಗದಿಂದ ರಕ್ತದಾನ ಶಿಬಿರ ಮತ್ತು ಉಚಿತ ನೇತ್ರ ತಪಾಸಣಾ ಶಿಬಿರ ಏರ್ಪಡಿಸಲಾಗಿತ್ತು. ನೂರಾರು ಯುವಕರು ರಕ್ತದಾನ ಮಾಡಿದರು. ಅಲ್ಲದೆ ಗುರಮಠಕಲ್ ಮತ್ತು ಯಾದಗಿರಿ ಕ್ಷೇತ್ರಗಳಿಂದ ಹಲವಾರು ಜನ ತಮ್ಮ ಕಣ್ಣುಗಳನ್ನು ಪರೀಕ್ಷೆ ಮಾಡಿಸಿಕೊಂಡರು.

ಸುಮಾರು 5 ಸಾವಿರಕ್ಕೂ ಹೆಚ್ಚು ಜನ ಭಾಗವಹಿಸಿದ ಕಾರಣ ನಗರದ ಪ್ರಮುಖ ರಸ್ತೆಗಳಲ್ಲಿ ಟ್ರಾಫಿಕ್ ಹೆಚ್ಚಾಗಿತ್ತು.

ಸ್ವಾತಂತ್ರ್ಯ ಹೋರಾಟದ ಇತಿಹಾಸದಿಂದ ಬಂದ ಮುದ್ನಾಳ್ ಮನೆತನದಲ್ಲಿ ದಿ.ವೆಂಕಟರಡ್ಡಿ ಅವರಂತೆ ಅವರ ಪುತ್ರ ಮಹೇಶರಡ್ಡಿ ಮುದ್ನಾಳ್ ಅವರಿಗೂ ಉತ್ತಮ ಭವಿಷ್ಯವಿದೆ. ಈ ಜನಸೇವೆ ಕಾರ್ಯವನ್ನು ಮುಂದುವರೆಸಲಿ.

– ಬಿ.ವೈ.ವಿಜಯೇಂದ್ರ
ಬಿಜೆಪಿ ರಾಜ್ಯಾಧ್ಯಕ್ಷ

### ಅಚ್ಚುಕಟ್ಟಾದ ಕಾರ್ಯಕ್ರಮ

ಇಡೀ ಕಾರ್ಯಕ್ರಮ ಅತ್ಯಂತ ಅಚ್ಚುಕಟ್ಟಾಗಿ ನಡೆಯಿತು. ಮುದ್ನಾಳ್ ಬಟಾಲಿಯನ್ ನ ಟೀಂ ವರ್ಕ ಕಳೆದ 15 ದಿನಗಳಿಂದ ಕಾರ್ಯಕ್ರಮದ ಉಸ್ತುವಾರಿ ವಹಿಸಿಕೊಂಡಿತ್ತು. ಆಗಮಿಸಿದ್ದ ಜನತೆ ಬಿಸಿಬಿಸಿ ಹುಗ್ಗಿ, ಚಪಾತಿ, ಬದನೆಕಾಯಿ ಪಲ್ಯ ಮತ್ತು ಅನ್ನ, ಸಾಂಬಾರ್ ಸವಿದರು.

## ವೀರಶೈವ ಲಿಂಗಾಯತ ಒಂದೇ : ಡಾ. ಮಾಹಾದೇವ ಮಹಾಸ್ವಾಮಿಗಳು

**ಮಲ್ಲಮ್ಮ ನುಡಿ ವಾರ್ತೆ**




ಕುಕನೂರ : ವೀರಶೈವ ಲಿಂಗಾಯತರು ಬೇರೆ ಬೇರೆಯಲ್ಲ ಮುಂಬರುವ ಜಾತಿ ಸಮೀಕ್ಷೆಯಲ್ಲಿ ವೀರಶೈವ ಲಿಂಗಾಯತ ಧರ್ಮ ಎಂದು ಬರಿಸಬೇಕು ಎಂದು ಕುಕನೂರ ಪಟ್ಟಣದ ಅನ್ನದಾನೀಶ್ವರ ಶಾಖಾಮಠದ ಪೂಜ್ಯ ಮಹಾದೇವ ಸ್ವಾಮೀಜಿ ಹೇಳಿದರು.

ಅವರು ಕುಕನೂರ ಪಟ್ಟಣದ ಅನ್ನದಾನೀಶ್ವರ ಮಠದಲ್ಲಿ ಮಾತನಾಡುತ್ತಾ ಈಗಾಗಲೇ ಮುಂಡರಗಿ ಶ್ರೀ ಜಗದ್ಗುರು ಅನ್ನದಾನೀಶ್ವರ ಸಂಸ್ಥಾನಮಠದ ಪೂಜ್ಯರು ಬಹಳ ಸ್ಪಷ್ಟವಾಗಿ ವೀರಶೈವ ಲಿಂಗಾಯತ ಧರ್ಮದ ಇತಿಹಾಸ ತಿಳಿಸಿದ್ದಾರೆ.

ಅವರೊಂದಿಗೆ ಈ ನಾಡಿನ ಶಿರಹಟ್ಟಿ ಪೂಜ್ಯರು ಸೇರಿದಂತೆ ಹಲವಾರು ಪೂಜ್ಯರು ವೀರಶೈವ ಲಿಂಗಾಯತ ಒಂದೇ ಎಂಬ ಸಂದೇಶ ನೀಡಿದ್ದಾರೆ ಆದ್ದ–ರಿಂದ ಸಮಾಜದ ಬಂಧುಗಳು ಯಾವುದಕ್ಕೂಕಿವಿಕೊಡದೆ ಸಮಾಜದ ಒಳತಿಗಾಗಿ ಹೊಂದಾಗಬೇಕು, ಹಾನಗಲ್ ಕುಮಾರಸ್ವಾಮಿಗಳು ಸ್ಥಾಪಿಸಿದ ವೀರಶೈವ ಲಿಂಗಾಯತ ಮಹಾಸಭಾ ನಿಲುವಿಗೆ ನಾವೆಲ್ಲ ಬದ್ದರಾಗಬೇಕು, ವೀರಶೈವರು ಬೇರೆ ಲಿಂಗಾಯತರು ಬೇರೆ ಎಂದರೆ ಸಮಾಜ ಅಭಿವೃದ್ಧಿ ಹೊಂದಲು ಸಾದ್ಯವಿಲ್ಲ, ಬಸವಣ್ಣನವರು ರೇಣುಕರು ಸಮಾಜದ ಎರಡು ಕಣ್ಣುಗಳು ಯಾವುದೇ ಕಣ್ಣಿಗೆ ನೋವಾದರು ಅದು ನಮ್ಮ ಸಮಾಜಕ್ಕೆ ಹಾನಿಯಾಗುತ್ತದೆ, ನಮ್ಮಲ್ಲಿರುವ ಸಣ್ಣ ಪುಟ್ಟ ಬಿನ್ನಾಬಿಪ್ರಾಯಗಳನ್ನ ಮರೆತು ನಾವೆಲ್ಲ ಹೊಂದಾಗಬೇಕು, ಸಮಾಜ ಒಡೆಯುವ ಕಾರ್ಯಕ್ಕೆ ಯಾರು ಮುಂದಾಗಬಾರದು ಈ ನಿಟ್ಟಿನಲ್ಲಿ ಸೆ.19 ರಂದು ನಡೆಯುವ ವೀರಶೈವ ಲಿಂಗಾಯತ ಏಕತಾ ಸಮಾವೇಶಕ್ಕೆ ಸಮಾಜದ ಬಂಧುಗಳು ಬರಬೇಕು ಮತ್ತು ವೀರಶೈವ ಲಿಂಗಾಯತ ಒಂದೇ ಎಂಬ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

## ‘ಹೈದರಾಬಾದ ಕರ್ನಾಟಕ ವಿಮೋಚನಾದಿನಾಚರಣೆ



**ಮಲ್ಲಮ್ಮ ನುಡಿ ವಾರ್ತೆ**

ಯಾದಗಿರಿ:ನಗರದ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಕಾರ್ಯಾಲಯದಲ್ಲಿ ಯಾದಗಿರಿ ಜಿಲ್ಲಾಧ್ಯಕ್ಷರಾದ ಶ್ರೀ ಟಿ.ಎನ್. ಭೀಮುನಾಯಕ ರವರ ನೇತೃತ್ವದಲ್ಲಿ ಕಲ್ಯಾಣ ಕರ್ನಾಟಕ ಉತ್ಸವವನ್ನು ರಾಷ್ಟ್ರ ಧ್ವಜಾರೋಹಣ ಮಾಡುವ ಮೂಲಕ ಆಚರಿಸಲಾಯಿತು, ಮತ್ತು ರಾಷ್ಟ್ರಪಿತ ಮಹಾತ್ಮ ಗಾಂಧಿಜೀ ಹಾಗೂ ಸಂವಿಧಾನ ಶಿಲ್ಪಿ ಡಾ॥ ಬಾಬಾ ಸಾಹೇಬ ಅಂಬೇಡ್ಕರ್ ಮತ್ತು ಸರದಾರ ವಲ್ಲಭಬಾಯಿ ಪಟೇಲ ರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚಾಣೆ ಮಾಡುವ ಮೂಲಕ ಗೌರವಿಸಿ ಮಾತನಾಡಿದ ಅವರು ‘ಹೈದರಾಬಾದ ಕರ್ನಾಟಕ ವಿಮೋಚನಾದಿನ’ವನ್ನು ‘ಕಲ್ಯಾಣಕರ್ನಾಟಕಉತ್ಸವ’ವನ್ನಾಗಿ ಆಚರಿಸಲಾಗುತ್ತಿದೆ. ಉತ್ಸವದ ಹೊಸ್ತಿಲಲ್ಲಿರುವ ಸಂದರ್ಭಲ್ಲಿ ಈ ಭಾಗದ ಜನಸಮಸ್ಯೆಗಳ ಸಂಕೋಲೆಯಿಂದ ಮುಕ್ತವಾದರೇ?’ ಅಭಿವೃದ್ಧಿಯ ಸುಳಿಗಾಳಿ ಬೀಸುತ್ತಿದೆಯೇ ಎಂಬ ಪ್ರಶ್ನೆಗಳಿಗೆ ಸ್ಪಷ್ಟ ಉತ್ತರವೇ ಸಿಗುತ್ತಿಲ್ಲ! ಅಭಿವೃದ್ಧಿ ಸಂಪೂರ್ಣ ಮರಿಚಿಕೆಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಕೇವಲ ಉತ್ಸವ ಮಾಡುವುದರಿಂದ ಅಭಿವೃದ್ಧಿಯಾಗದು ಈ ಸರ್ಕಾರ ಕಲ್ಯಾಣ ಕರ್ನಾಟಕದ ಭಾಗಕ್ಕೆ ಕಳೆದ ವರ್ಷಕ್ಕಿಂತ ಈ ಬಾರಿ ಜಿಲ್ಲಾವಾರು ಸಚಿವಸ್ಥಾನ ನೀಡಿ ಈ ಭಾಗದ ಶಾಸಕರಿಗೆ ಅತೀ ಹೆಚ್ಚು ಜವಬ್ದಾರಿಯನ್ನು ನೀಡಿರುವುದು ಸಂತಸದ ವಿಷಯ ಆದರೆ ಕೇವಲ ಸ್ಥಾನಕ್ಕೆ ಮಾತ್ರ ಸೀಮಿತವಾಗದೆ ಅಭಿವೃದ್ಧಿ ಕಡೆಗೆ ಗಮನ ಹರಿಸಬೇಕೆಂದು ಹೇಳಿದರು,

ಹಾಗೇ ನಿನ್ನೆ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಬುಹುದಿನ ಬೇಡಿಕೆಯಾದ ಪ್ರತ್ಯೇಕ ಸಚಿವಾಲಯಕ್ಕೆ ಅನುಮೋದನೆ ನೀಡಿದ ಸಲುವಾಗಿ ಸನ್ಮಾನ್ಯ ಶ್ರೀ ಸಿದ್ಧರಾಮಯ್ಯ ಮಾನ್ಯ ಮುಖ್ಯಮಂತ್ರಿಗಳು ಮತ್ತು ಸಚಿವರಿಗೆ ಕರವೇ ಯಾದಗಿರಿ ಜಿಲ್ಲಾ ಘಟಕವತಿಯಿಂದ ತುಂಬು ಹೃದಯದ ಅಭಿನಂದನೆಗಳನ್ನು ಸಲ್ಲಿಸುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕರವೇ ಮುಖಂಡರಾದ ಸಂತೋಷಕುಮಾರ ನಿರ್ಮಲಕರ್, ಹಣಮಂತ ಅಚ್ಚೋಲಾ, ಭಿಮರಾಯ ರಾಮಸಮುದ್ರ, ನಾಗು ತಾಂಡೂರಕರ್, ಸುರೇಶ ಬೆಳಗುಂದಿ, ಜರ್ನಾಧನ ಬಡಿಗೇರಾ, ಸಾಗರ ಹುಲ್ಲೇರ, ಬಸವರಾಜ ಜಗನಾಥ, ಅಶೋಕ ಮುಂಡರಗಿ, ರಮೇಶ.ಡಿ.ನಾಯಕ, ಇನ್ನಿತರರು ಭಾಗಿಯಾಗಿದ್ದರು,

## ಶಿಕ್ಷಕರು ಕೇವಲ ಪಾಠ ಹೇಳುವವರು ಮಾತ್ರವಲ್ಲ, ಅವರು ಸಮಾಜ ನಿರ್ಮಾಣದ ಸಂಕೇತ”:ಅಶೋಕ ಹಂಚಲಿ

**ಮಲ್ಲಮ್ಮ ನುಡಿ ವಾರ್ತೆ**



ಲಿಂಗಸುಗೂರು:ರಾಯಚೂರು ಜಿಲ್ಲೆ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ, ತಾಲೂಕು ಘಟಕ ಲಿಂಗಸುಗೂರು ಹಾಗೂ ವಿಜಯ ಮಹಾಂತೇಶ್ವರ ಮಠ ಲಿಂಗಸುಗೂರು ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ವಿಶಿಷ್ಟ ರೀತಿಯಲ್ಲಿ ಅಶೋಕ ಹಂಚಲಿ ಬಸವನ ಬಾಗೇವಾಡಿ ಅವರು ವಿಶೇಷ ಉಪನ್ಯಾಸ ನೀಡಿದರು.

ಅವರು ಪ್ರಾರಂಭದಲ್ಲಿ ಶಿಕ್ಷಕರ ಪರಂಪರೆ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಅವರ ಸಲ್ಲಿಕೆಯ ಮಹತ್ವವನ್ನು ಪ್ರಾಮಾಣಿಕವಾಗಿ ವಿವರಿಸಿದರು. “ಶಿಕ್ಷಕರು ಕೇವಲ ಪಾಠ ಹೇಳುವವರು ಮಾತ್ರವಲ್ಲ, ಅವರು ಸಮಾಜ ನಿರ್ಮಾಣದ ಸಂಕೇತ” ಎಂಬುದು ಅವರ ಮುಖ್ಯ ಸಂದೇಶವಾಗಿತ್ತು.

“ಪ್ರತಿ ವಿದ್ಯಾರ್ಥಿಯ ಹೃದಯದಲ್ಲಿ ಬೆಳಕು ಹಚ್ಚುವ ಕಾರ್ಯವು ಶಿಕ್ಷಕರ ಕೈಯಲ್ಲಿದೆ. ಪಾಠ ಪುಸ್ತಕದಲ್ಲಿ ಮಾತ್ರವಲ್ಲದೆ ಜೀವನ ಪಾಠಗಳ ಮೂಲಕ ಮೌಲ್ಯಗಳ ಬೋಧನೆ ಶಿಕ್ಷಕರ ಪ್ರಾಥಮಿಕ ಕರ್ತವ್ಯ. ಶಿಸ್ತು, ಪ್ರಾಮಾಣಿಕತೆ, ಮಾನವೀಯತೆ ಮತ್ತು ಶ್ರಮವೆಂಬ ಗುಣಗಳನ್ನು ರೂಪಿಸುವುದು ಪ್ರತಿಯೊಬ್ಬ ಶಿಕ್ಷಕರ ಶ್ರೇಷ್ಠ ಕಾರ್ಯವಾಗಿದೆ.”

ಅವರು ಶಿಕ್ಷಣ ಕ್ಷೇತ್ರದಲ್ಲಿ ಎದುರಿಸುತ್ತಿರುವ ಸವಾಲುಗಳ ಕುರಿತು ಗಮನ ಸೆಳೆದರು. ಪ್ರಸ್ತುತ ತಂತ್ರಜ್ಞಾನಗತ ಯುಗದಲ್ಲಿ ಮಕ್ಕಳನ್ನು ಕೇವಲ ಜ್ಞಾನಾಭಿವೃದ್ದಿಗೇ ಮೀರಿ ಮಾನವೀಯತೆಯುಳ್ಳ ನೈತಿಕ ಶಕ್ತಿಯನ್ನು ನೀಡುವ ದಿಕ್ಕಿನಲ್ಲಿ ಶಿಕ್ಷಕರ ಪ್ರಾಮುಖ್ಯತೆ ಹೆಚ್ಚಾಗಿದೆ

ಅವರು ತಮ್ಮ ಜೀವನಾನುಭವದ ಮೂಲಕ ಸಾಧನೆ ಮಾಡಿರುವ ಉತ್ತಮ ಶಿಕ್ಷಕರ ಗುಣಮಟ್ಟವನ್ನು ಉದಾಹರಿಸಿದರು. ಜೊತೆಗೆ, ಶಿಕ್ಷಕರ ನೈತಿಕತೆ, ಶ್ರದ್ಧೆ, ಶಿಸ್ತು ಮತ್ತು ಸಮರ್ಪಣೆಯ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಬದಲಾವಣೆ ತರಬೇಕೆಂದು ಪ್ರೇರೆಪಿಸಿದರು. ಎನ್.ಬಸವರಾಜ, ಶರಣಯ್ಯ ಒಡೆಯರ್, ಸಿದ್ದನಗೌಡ ಪಾಟೀಲ್, ಶಶಿಧರ ಕಂಚಿಮಠ ವರದಿಗಾರರು, ವಿಶ್ವನಾಥ ಹೂಗಾರ ಟಿ.ವಿ. , ಸುನೀಲ್ ಕುಮಾರ, ಪತ್ರಕರ್ತರಿಗೆ ಸನ್ಮಾನ ಮಾಡಿದರು ಹಾಗೂ 70ಕ್ಕೂ ಹೆಚ್ಚು ಶಿಕ್ಷಕರಿಗೆ ಉತ್ತಮ ಪ್ರಶಸ್ತಿ ನೀಡಲಾಯಿತು. ಈ ಸಂದರ್ಭದಲ್ಲಿ ಷ.ಬ್ರ. ಶ್ರೀ ಅಭಿನವ ಗಜದಂಡ ಶಿವಯೋಗಿಗಳು ಬೃಹನ್ಮಠ ದೇವರಭೂಪೂರ, ಶ್ರೀ ಶರಣಗೌಡ ಬಯ್ಯಾಪೂರು ವಿಧಾನ ಪರಿಷತ್ ಸದಸ್ಯರು ಮಂಜುನಾಥ ಸ್ವಾಮಿ ತೋರಣದಿನ್ನಿ , ಶ್ರೀಮತಿ ಸುಜಾರ ಹೂನೂರು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಲಿಂಗಸುಗೂರ, ಸಿದ್ಧರಾಮಪ್ಪ ಸಾಹುಕಾರ , ಶಾಂತಗೌಡ ಪಾಟೀಲ್ ದಿಡ್ಡಿ ,ನರಸಪ್ಪ ಯಾದವ, ಆದಯ್ಯ ಎಸ್. ದಳಪತಿ, ಸಂಜೀವಕುಮಾರ ಕಂದಗಲ್ , ಶಿವಕುಮಾರ ಎನ್ ಅಶೋಕ ಹಂಚಲಿ ಬಸವನಬಾಗೇವಾಡಿ , ಖಾದರ ಪಾಷ, ಗೋವಿಂದ ನಾಯಕ, ಮಹಮ್ಮದ್ ರಫಿ ಸೇರಿದಂತೆ ಉಪಸ್ಥಿತರಿದ್ದರು.

# ಕಲ್ಯಾಣ ಕರ್ನಾಟಕಕ್ಕೆ ಶ್ರಮಿಸಿದ ಹೋರಾಟಗಾರರ ತ್ಯಾಗ ಬಲಿದಾನ ಗೌರವಿಸೋಣ: ಸಚಿವ ರಹೀಂ ಖಾನ್

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.17–ಕಲ್ಯಾಣ ಕರ್ನಾಟಕ ಭಾಗವು ನಿಜಾಮರ ಆಳ್ವಿಕೆಯಿಂದ ಸ್ವಾತಂತ್ರ್ಯ ಪಡೆದು ಭಾರತದ ಒಕ್ಕೂಟ–ಕ್ಕೆ ಸೇರ್ಪಡೆಗೊಳ್ಳಲು ಶ್ರಮಿಸಿದ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಮತ್ತು ಬಲಿದಾನ ಗೌರವಿಸಲು ಕಕ ಉತ್ಸವ ದಿನಾಚರಣೆ ಆಚರಿಸಲಾಗುತ್ತದೆ ಎಂದು ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್ ಅವರು ಹೇಳಿದರು.

ಜಿಲ್ಲಾಡಳಿತ ವತಿಯಿಂದ ನಗರದ ಸರ್ಕಾರಿ ಪದವಿ ಪೂರ್ವ(ಮಾ.ಪು) ಕಾಲೇಜು ಮೈದಾನದಲ್ಲಿ ಬುಧವಾರ ಏರ್ಪಡಿಸಿದ್ದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿ ಧ್ವಜಾರೋಹಣ ನೆರವೇರಿಸಿ, ಏಕೀಕರಣದ ರೂವಾರಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಕಲ್ಯಾಣಕರ್ನಾಟಕಪ್ರದೇಶವು ನಿಜಾಮರ ಅಳ್ವಿಕೆಯಿಂದ ಸ್ವಾತಂತ್ರ್ಯಗೊಂಡು 77 ವರ್ಷಗಳಾಗಿವೆ. ಭವ್ಯ ಪರಂಪರೆ ಹೊಂದಿರುವ ಭಾರತವು ಹತ್ತಾರು ಕಾರಣಗಳಿಂದಾಗಿ ಪರಕೀಯರ ಆಡಳಿತಕ್ಕೆ ಒಳಗಾಗಿತ್ತು. ರಾಷ್ಟ್ರಕ್ಕೆ 1947ರ ಆಗಸ್ಟ್ 15 ರಂದು ಸ್ವಾತಂತ್ರ್ಯ ದೊರೆತರೂ ಹೈದ್ರಾಬಾದ್ ಸಂಸ್ಥಾನದ ಪ್ರಜೆಗಳಿಗೆ ಸ್ವಾತಂತ್ರ್ಯ ದೊರೆತಿರಲಿಲ್ಲ. ಹೈದ್ರಾಬಾದ್ ನಿಜಾಮರ ಆಡಳಿತಕ್ಕೆ ಒಳಪಟ್ಟಿದ್ದ ಕಲಬುರಗಿ, ಬೀದರ್, ರಾಯಚೂರು, ಕೊಪ್ಪಳ, ಯಾದಗಿರಿ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳು ಸ್ವಾತಂತ್ರ್ಯ ಹೊಂದಲು ಒಂದು ವರ್ಷ ಕಾಲ (1948 ರ ಸೆ.17) ಕಾಯಬೇಕಾಯಿತು ಎಂದರು.

2013 ರ ನ.06 ರಂದು ಅಂದಿನ ನಮ್ಮ ಕಾಂಗ್ರೆಸ್ ಸರ್ಕಾರ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯನ್ನು ಕಲಬುರಗಿಯಲ್ಲಿ ಸ್ಥಾಪಿಸಿ, ಈ ಭಾಗದ 40 ವಿಧಾನಸಭಾ ಕ್ಷೇತ್ರಗಳ ಗ್ರಾಮೀಣ ಮತ್ತು ಪಟ್ಟಣ ಪ್ರದೇಶಗಳಿಗೂ ಸೇರಿದಂತೆ ಎಲ್ಲಾ ಭಾಗಗಳ ಮೂಲಭೂತ ಸೌಕರ್ಯ,



ಆರೋಗ್ಯ, ಸಾಮಾಜಿಕ, ರಸ್ತೆ ಸಂಪರ್ಕ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಇನ್ನಿತರೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದಕ್ಕೆ ವಿಶೇಷ ಅನುದಾನ ಮೀಸಲಿರಿಸುವ ಕಾರ್ಯ ಮಾಡಿದೆ ಎಂದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆಯಡಿ ರೂ.1954.22 ಕೋಟಿ ಅನುದಾನ ಹಂಚಿಕೆಯಾಗಿದ್ದು, ಅದರಲ್ಲಿ 5524 ಕಾಮಗಾರಿಗಳನ್ನು ಕೈಗೆತ್ತಿಕೊಂಡು 4966 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಇದಕ್ಕೆ ರೂ.1412.84 ಕೋಟಿ ಅನುದಾನ ವೆಚ್ಚ ಮಾಡಲಾಗಿದೆ. ಬಾಕಿ ಉಳಿದ 402 ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕ ಭಾಗದ ವ್ಯಾಪ್ತಿಗೆ ಒಳಪಡುವ 07 ಜಿಲ್ಲೆಗಳಲ್ಲಿ ಶಿಕ್ಷಣ ಹಾಗೂ ಉದ್ಯೋಗ ಮೀಸಲಾತಿಗಾಗಿ ಶೇ.50 ರಷ್ಟು ಮೀಸಲಾತಿ ಕಲ್ಪಿಸಲಾಗಿದೆ ಹಾಗೂ ಇತರೆ ಜಿಲ್ಲೆಗಳಲ್ಲಿ ಈ ಭಾಗದ ಜನರಿಗಾಗಿ ಶೇಕಡವಾರು ಶೇ.8 ರಷ್ಟು ಮೀಸಲಾತಿ ಕಲ್ಪಿಸಲಾಗಿದೆ. 371(ಜೆ) ಪ್ರಮಾಣ ಪತ್ರಗಳಿಂದ ಶಿಕ್ಷಣದಲ್ಲಿ ಹಾಗೂ ವಿವಿಧ ಇಲಾಖೆಗಳಲ್ಲಿ ಉದ್ಯೋಗದ ಮೀಸಲಾತಿ ಪಡೆಯಲು ಅನುಕೂಲವಾಗುತ್ತಿದೆ ಎಂದು ಸಚಿವರು ಹೇಳಿದರು.

ಅನೇಕ ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ 'ಎ' ಮತ್ತು 'ಬಿ' ಖಾತಾ ಯೋಜನೆಯನ್ನು ಎರಡೂ ಸದನಗಳಲ್ಲಿ ಮಂಡಿಸಿ ಕಾಯ್ದೆರೂಪಕ್ಕೆ ತಂದು ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಾನೂನಾತ್ಮಕವಾಗಿ ಜಾರಿಗೆ ತರಲಾಗಿದೆ. ಅನೇಕ ವರ್ಷಗಳಿಂದ ಅನಧಿಕೃತವಾಗಿದ್ದ ಕಟ್ಟಡ ಮತ್ತು ನಿವೇಶನಗಳಿಗೆ 'ಇ' ಖಾತಾ ನೀಡುವುದರ ಮೂಲಕ ತೆರಿಗೆ ವ್ಯಾಪ್ತಿಗೆ ತಂದು ಅನೇಕ ಬಡಜನರ ಕನಸನ್ನು ನನಸಾಗಿ ಮಾಡಲಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಮುಖ್ಯಮಂತ್ರಿಗಳ ಆಶಯದಂತೆ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಇಂದಿರಾ ಕ್ಯಾಂಟೀನ್ ಯೋಜನೆಯನ್ನು ಇನ್ನು ಹೆಚ್ಚು ಪರಿಣಾಮಕಾರಿಯಾಗಿ ಹಾಗೂ ಸಮರ್ಪಕವಾಗಿ ಜಾರಿಗೊಳಿಸಲಾಗುವುದು. ನಗರ ಸ್ಥಳೀಯ ಸಂಸ್ಥೆಗಳಲ್ಲಿ ರಸ್ತೆ, ಚರಂಡಿ, ಬೀದಿ ದೀಪ, ಕುಡಿಯುವ ನೀರು ಹಾಗೂ ಸ್ವಚ್ಛತೆಗಳಿಗೆ ಆದ್ಯತೆ ನೀಡಲಾಗುತ್ತಿದೆ ಎಂದರು.

ಸಂಸದ ಈ.ತುಕಾರಾಮ್ ಅವರು ಮಾತನಾಡಿ, ಆಗಿನ ಸಂದರ್ಭದಲ್ಲಿ ರಾಜ್ಯದ ಬೆಂಗಳೂರು ಪ್ರಾಂತ್ಯ, ಮುಂಬೈ ಪ್ರಾಂತ್ಯ ಮತ್ತು ಹೈದರಬಾದ್ ಪ್ರಾಂತ್ಯದಲ್ಲಿನ ತಾರತಮ್ಯ, ಪ್ರಾದೇಶಿಕ ಅಸಮತೋಲನ ಹೋಗಲಾಡಿಸಲು ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರು 2002ರಲ್ಲಿ ಡಾ.ನಂಜುಂಡಪ್ಪ ಅವರ ನೇತೃತ್ವದ ಡಾ.ನಂಜುಂಡಪ್ಪ ಸಮಿತಿ ರಚಿಸಿ ವರದಿ ತಯಾರಿಸಲು ಸೂಚಿಸಿದ್ದರು. ಮೂಲಭೂತ ಸೌಕರ್ಯ ಸೇರಿದಂತೆ ವಿವಿಧ ಕ್ಷೇತ್ರಗಳ ಅಭಿವೃದ್ಧಿಯಲ್ಲಿ ಹಿಂದುಳಿದ, ಅತಿ ಹಿಂದುಳಿದ, ಅತ್ಯಂತ ಹಿಂದುಳಿದ ತಾಲ್ಲೂಕುಗಳನ್ನು ಗುರುತಿಸಿ ಸಂಪೂರ್ಣ ಅಭಿವೃದ್ಧಿ ಕರ್ನಾಟಕ ಮಾಡುವ ಪಣತೆ–ಯೊಟ್ಟಿದ್ದರು ಎಂದು ಹೇಳಿದರು.

175 ತಾಲ್ಲೂಕುಗಳಲ್ಲಿ 114 ತಾಲ್ಲೂಕು ಹಿಂದುಳಿದ ವರದಿಯಾದರೆ, ಕಲ್ಯಾಣ ಕರ್ನಾಟಕ ಭಾಗದ 39 ತಾಲ್ಲೂಕುಗಳಲ್ಲಿ 21 ತಾಲ್ಲೂಕುಗಳು ಅತ್ಯಂತ ಹಿಂದುಳಿದ ತಾಲ್ಲೂಕುಗಳಿವೆ ಎಂದು ವರದಿ ನೀಡಿದ ಬೆನ್ನಲ್ಲೆ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರು ವಿಶೇಷ ಸ್ಥಾನಮಾನ ದೊರಕಿಸಲು ಪ್ರಯತ್ನ ಪಟ್ಟರು ಎಂದು ಮಾಹಿತಿ ನೀಡಿದರು.

ಅಖಂಡ ಬಳ್ಳಾರಿ ಜಿಲ್ಲೆಯ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳು ರೂಪುಗೊಂಡು ಕಾರ್ಯಪ್ರವೃತ್ತವಾಗಿದ್ದು, ಮುಂಬರುವ ದಿನಮಾನಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ ಉಜ್ವಲ ಭವಿಷ್ಯ ನಿರ್ಮಿಸೋಣ ಎಂದು ಕರೆ ನೀಡಿದರು.

ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಜಿಲ್ಲಾಧ್ಯಕ್ಷ ಸಿರಿಗೇರಿ ಪನ್ನರಾಜ್ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಸ್ವಾತಂತ್ರ್ಯ ರಾಷ್ಟ್ರ ಕಟ್ಟುವ ಬಯಕೆಯಿಂದ ಹೈದ್ರಾಬಾದ್ ನಿಜಾಮ ಮೀರ್ ಉಸ್ಮಾನ್ ಅಲಿ ಭಾರತದ ಒಕ್ಕೂಟ ವ್ಯವಸ್ಥೆಯಲ್ಲಿ ಸೇರಿಕೊಳ್ಳದೇ ಸ್ವತಂತ್ರವಾಗಿರಲು ಬಯಸಿ ಹೈದ್ರಬಾದ್ ಸಂಸ್ಥಾನವನ್ನು ಸ್ವಾತಂತ್ರ್ಯ ರಾಷ್ಟ್ರವೆಂದು ಘೋಷಿಸಿದ. ಇದರಿಂದಾಗಿ ಇಲ್ಲಿಯ ಜನರು ನಿರಂತರ ಶೋಷಣೆಗೆ ಒಳಪಟ್ಟಿದರು ಎಂದು ಹೇಳಿದರು.

ಹೈದ್ರಾಬಾದ್ ನಿಜಾಮರ ಆಳ್ವಿಕೆಯಿಂದ ಮುಕ್ತಿಗೊಳ್ಳಲು ಅನೇಕರು ಒಗ್ಗೂಡಿ ಚಳುವಳಿಯನ್ನು ಪ್ರಾರಂಭಿಸಿದರು. ಚಳುವಳಿಯನ್ನು ಹತ್ತಿಕ್ಕಲು ಹೈದ್ರಾಬಾದ್ ನಿಜಾಮನು ಖಾಸಿಂ ರಜ್ವಿ ಎಂಬುವವನ ನೇತೃತ್ವದಲ್ಲಿ ರಜಾಕಾರ ದಾಳಿಯನ್ನು ಆರಂಭಿಸಿದನು. ಇದರ ಪರಿಣಾಮವಾಗಿ ಈ ಭಾಗದ ಜನರು ಅಭಿವ್ಯಕ್ತಿ ಸ್ವಾತಂತ್ರ್ಯ, ಪತ್ರಿಕಾ ಸ್ವಾತಂತ್ರ್ಯ, ಮೂಲಭೂತ ಹಕ್ಕುಗಳು ಜನರ ಪಾಲಿಗೆ ಇಲ್ಲವಾಗಿ, ಈ ಪ್ರದೇಶದ ಆರ್ಥಿಕ ಸಾಮಾಜಿಕ, ಶೈಕ್ಷಣಿಕ, ಸಾಂಸ್ಕೃತಿಕ ಕ್ಷೇತ್ರಗಳ ಪ್ರಗತಿ ಶೂನ್ಯದ ಕಡೆಗೆ ಹೆಜ್ಜೆ ಇಡುವಂತಾಯಿತು. ಆಗಿನ ಸಂದರ್ಭದಲ್ಲಿ ವಿವಿಧ ಸಂಘ–ಸಂಸ್ಥೆಗಳು ಹೋರಾಟಕ್ಕೆ ಇಳಿದು ರಜಾಕಾರರ ದಬ್ಬಾಳಿಕೆಯನ್ನು ಧಿಕ್ಕರಿಸಿ ಸ್ವಾತಂತ್ರ್ಯ ಪಡೆಯುವಲ್ಲಿ ಯಶಸ್ವಿಯಾದರು. ಇವರನ್ನೆಲ್ಲಾ ನಾವು ಇಂದು ಸ್ಮರಿಸಬೇಕಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ಏರ್ಪಡಿಸಿದ್ದ ಪ್ರಬಂಧ, ಭಾಷಣ ಮತ್ತು ಚಿತ್ರಕಲೆ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ಮತ್ತು ಪ್ರಮಾಣ ಪತ್ರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್, ಉಪಮೇಯರ್ ಡಿ.ಸುಕುಂ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಬಳ್ಳಾರಿ ವಲಯ ಪೊಲೀಸ್ ಮಹಾ ನಿರೀಕ್ಷಕರಾದ ವರ್ತಿಕ ಕಟಿಯಾರ್, ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಬಳ್ಳಾರಿ ವಲಯ ಉಪಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್.ಬಸವರಾಜ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ, ಡಿಎಂಎಫ್ ವಿಶೇಷ ಅಧಿಕಾರಿ ಲೋಕೇಶ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಬಳ್ಳಾರಿ: ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ಮತ್ತು ಶಿಕ್ಷಕರ ದಿನಾಚರಣೆ ಸಂಭ್ರಮ

**ಮಲ್ಲಮ್ಮ ನುಡಿ ವಾರ್ತೆ**



ಬಳ್ಳಾರಿ,ಸೆ.17–ಜಾತಿ, ಧರ್ಮ ಎಂಬ ಎಲ್ಲೆ ಇರದ ಆದರ್ಶಪ್ರಾಯ ಶಿಕ್ಷಕನು ವಿದ್ಯಾರ್ಥಿಗಳಲ್ಲಿ ಜ್ಞಾನಾರ್ಜನೆ ಮಾಡುತ್ತಾನೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ.ಮಲ್ಲಿಕಾ ಘಂಟಿ ಅವರು ಹೇಳಿದರು.

ಬುಧವಾರ, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ ಕಲ್ಯಾಣ ಕರ್ನಾಟಕ ಉತ್ಸವ ಮತ್ತು ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಶಿಕ್ಷಕವರ್ಗದಲ್ಲಿ ದ್ರೋಣಾಚಾರ್ಯರ ಪೌರಾಣಿಕ ಹಿನ್ನೆಲೆಯ ಗುರು ಪರಂಪರೆ ಹಾಗೂ ಗುರು ಗೋವಿಂದ ಭಟ್ಟರ ತಾತ್ವಿಕ ಮೂಲದ ಗುರು ಪರಂಪರೆ ಎಂಬ ಎರಡು ವಿಧಗಳಿವೆ. ಗುರುದಕ್ಷಿಣೆ ಕೇಳುವ ಪರಂಪರೆಗೆ ತದ್ವಿರುದ್ಧವಾದವನೇ ನಿಜವಾದ ಶಿಕ್ಷಕ. ಸಮಾಜಮುಖಿ ಹಾಗೂ ಅಧ್ಯಯನಶೀಲ ಶಿಕ್ಷಕರುಗಳಿಂದ ವಿದ್ಯಾರ್ಥಿಗಳ, ಸಮುದಾಯದ ಮನ ಮುಟ್ಟುವಂತೆ ವಿಷಯಗಳ ಜ್ಞಾನ ಬಿತ್ತಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ರಾಜಕೀಯ, ಧಾರ್ಮಿಕ ಹಾಗೂ ಸಮಾಜ ಸುಧಾರಣೆಯಲ್ಲಿ ಸಮಾನತೆ ಮತ್ತು ಏಕತೆ ಸ್ವರೂಪವಾಗಿರುವ ಶಿಕ್ಷಕರ ಪಾತ್ರ ಬಹುಮುಖ್ಯವಾಗಿದೆ. ಅದೇರೀತಿಯಾಗಿ ಕಲ್ಯಾಣ–ಕರ್ನಾಟಕ ಭಾಗದ ವಿಮೋಚನೆಗೆ ಶ್ರಮಿಸಿದ ಅನೇಕ ಪುರಷ–ಮಹಿಳಾ ಹೋರಾಟಗಾರರನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು ಅವರು ಮಾತನಾಡಿ, ವಿದ್ಯಾರ್ಥಿಗಳ ಜೀವನ ರೂಪಿಸುವುದು ಶಿಕ್ಷಕರ ಪ್ರಥಮ ಆದ್ಯತೆಯಾಗಬೇಕು. ಈ ನಿಟ್ಟಿನಲ್ಲಿ ಎಲ್ಲ ಶಿಕ್ಷಕರು ಮೌಲ್ಯಗಳನ್ನು ಬೆಳೆಸಿಕೊಂಡು ಆದರ್ಶಪ್ರಾಯ ಜೀವನ ನಡೆಸಬೇಕು ಎಂದು ಕರೆ ನೀಡಿದರು. ವಿವಿಯ ಕುಲಸಚಿವ ಸಿ.ನಾಗರಾಜು ಅವರು ಮಾತನಾಡಿ, ಶಿಕ್ಷಕರು ನಿರಂತರ ಅಧ್ಯಯನಗಳ ಮೂಲಕ ನಿತ್ಯವೂ ವಿದ್ಯಾರ್ಥಿಯಾಗಬೇಕು. ಇದರಿಂದ ತಮ್ಮ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಜವಾಬ್ದಾರಿಯುತ ಪ್ರಜೆಯನ್ನಾಗಿಸುವ ಮಹತ್ತರ ಕಾರ್ಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಸಂಯೋಜಕ ಪ್ರೊ.ತಿಪ್ಪೇಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕುಲಸಚಿವರು (ಮೌಲ್ಯಮಾಪನ) ಪ್ರೊ.ಎನ್.ಎಂ.ಸಾಲಿ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಸದಸ್ಯರಾದ ಡಾ.ರಾಜೇಂದ್ರ ಪ್ರಸಾದ್ ಎನ್.ಎಲ್ ವೇದಿಕೆಯಲ್ಲಿದ್ದರು.

ಇದೇ ಸಂದರ್ಭದಲ್ಲಿ ಸರ್ದಾರ್ ವಲ್ಲಭಾಯಿ ಪಟೇಲ್, ಡಾ.ಸರ್ವೆಪಲ್ಲಿ ರಾಧಾಕೃಷ್ಣನ್ ಹಾಗೂ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಲಾಯಿತು. ಡಾ.ಶಶಿಧರ್ ಕೆಲ್ಲೂರ್ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ವಿವಿಯಲ್ಲಿ ಇತ್ತೀಚೆಗೆ ಆಯೋಜಿಸಿದ್ದ ವಿವಿಧ ಕ್ರೀಡೆಗಳಲ್ಲಿ ವಿಜೇತರಾದ ಶಿಕ್ಷಕರಿಗೆ ಬಹುಮಾನ ವಿತರಿಸಲಾಯಿತು. ವಿವಿಧ ನಿಕಾಯಗಳ ಡೀನರು, ವಿಭಾಗಗಳ ಮತ್ತು ಘಟಕಗಳ ಮುಖ್ಯಸ್ಥರು, ಸಂಯೋಜಕರುಗಳು, ಬೋಧಕ–ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಜರಿದ್ದರು.

# ಜವಾಹರ್ ನವೋದಯ ವಿದ್ಯಾಲಯ: ಖಾಲಿ ಇರುವ ಸೀಟುಗಳ ಭರ್ತಿಗೆ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.17–ವಿಜಯನಗರ ಜಿಲ್ಲೆಯ ಚಿಕ್ಕಜೋಗಿಹಳ್ಳಿಯ ಪಿ.ಎಂ.ಶ್ರೀ ಜವಾಹರ್ ನವೋದಯ ವಿದ್ಯಾಲಯ ಪ್ರಥಮ ಪಿಯುಸಿಯ ವಿಜ್ಞಾನ ವಿಭಾಗಲ್ಲಿ ಖಾಲಿ ಇರುವ ಸೀಟುಗಳಿಗೆ ಭರ್ತಿಗಾಗಿ ಅರ್ಹ ವಿದ್ಯಾರ್ಥಿಗಳಿಂದ ಆಹ್ವಾನಿಸಲಾಗಿದೆ.

ಸೆ.23 ರೊಳಗಾಗಿ 10 ನೇ ತರಗತಿಯಲ್ಲಿ ಗಣಿತ ಮತ್ತು ವಿಜ್ಞಾನದಲ್ಲಿ ಶೇ.60 ರಷ್ಟು ಅಂಕಗಳೊಂದಿಗೆ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯಬಹುದು. ಕೆಲವೇ ಸೀಟುಗಳು ಮಾತ್ರ ಲಭ್ಯವಿದ್ದು ಮೊದಲು ಬಂದವರಿಗೆ ಆದ್ಯತೆ ನೀಡಲಾಗುವುದು.

*ನೇರ ಪ್ರವೇಶಾತಿ ನಡೆಯುವ ಸ್ಥಳ:*

ಸೆ.20 ರಂದು ಬಳ್ಳಾರಿ ಈಸ್ಟ್ ಮತ್ತು ಬಳ್ಳಾರಿ ವೆಸ್ಟ್ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ. ಸೆ.22 ರಂದು ಸಿರುಗುಪ್ಪ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ನಡೆಯಲಿದೆ.

ವಿದ್ಯಾರ್ಥಿಗಳು ಪ್ರವೇಶಾತಿ ಸಮಯದಲ್ಲಿ ಅಗತ್ಯವಿರುವ ಎಲ್ಲಾ ದಾಖಲಾತಿಗಳನ್ನು ತರಬೇಕು ಮತ್ತು ನೇರ ಪ್ರವೇಶವನ್ನು ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ಜವಾಹರ ನವೋದಯದ ವಿದ್ಯಾಲಯ, ಇಲ್ಲಿಗೆ ಭೇಟಿ ನೀಡಬಹುದು ಎಂದು ಪ್ರಾಚಾರ್ಯ ಎಂದು ಸುದೇಶ ಗೋಪಾಲ ಮಲಾಜುರೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಮಾಧ್ಯಮ ಅಕಾಡೆಮಿಯಿಂದ ಇನ್ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಸಿಎಸ್‌ಆರ್ ಕಾರ್ಯಕ್ರಮದಡಿ ಪತ್ರಕರ್ತರ ತರಬೇತಿಗೆ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.17–ಕರ್ನಾಟಕ ಮಾಧ್ಯಮ ಅಕಾಡೆಮಿಯು ಇನ್ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಸಿಎಸ್‌ಆರ್ ಕಾರ್ಯಕ್ರಮದಡಿ ಪತ್ರಕರ್ತರ ತರಬೇತಿಗೆ ಅರ್ಜಿ ಆಹ್ವಾನಿಸಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕನಿಷ್ಠ 5 ವರ್ಷ ಸೇವಾನುಭವ ಹೊಂದಿರುವ ಪತ್ರಕರ್ತರು ಅರ್ಜಿ ಸಲ್ಲಿಸಬಹುದು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪರಿಗಣಿಸಿರುವ ರಾಜ್ಯಮಟ್ಟದ ಪತ್ರಿಕೆಗಳು ಹಾಗೂ ಇಲಾಖೆಯಡಿ ನೋಂದಾಯಿತ ಉಪಗ್ರಹ ಸುದ್ದಿ ವಾಹಿನಿಗಳ ಸಂಪಾದಕರು ಶಿಫಾರಸು ಮಾಡುವ ಪತ್ರಕರ್ತರನ್ನು ತರಬೇತಿಗೆ ಪರಿಗಣಿಸಲಾಗುವುದು. ಈ ಕುರಿತು ಸಂಪಾದಕರನ್ನು ನೇರವಾಗಿ ಸಂಪರ್ಕಿಸಲಾಗುವುದು.

ಆಸಕ್ತ ಪತ್ರಕರ್ತರು ಗೂಗಲ್ ಫಾರ್ಮ್‌ಃಣಣಠಿ://ಜಿಂಡಿಟ.ರಿಟಜ/ಡ9ಓಗಟಕಿ7ಒ5ಥಢಿಡಿಣ೦9 ನಲ್ಲಿ ಮಾಹಿತಿ ಹಾಗೂ ದಾಖಲೆಗಳನ್ನು ಒದಗಿಸುವ ಮೂಲಕ ತರಬೇತಿಗೆ ನೋಂದಾಯಿಸಬಹುದಾಗಿದೆ.

ಅರ್ಜಿ ನಮೂನೆಯಲ್ಲಿ ಸೂಚಿಸಿರುವಂತೆ ಪತ್ರಕರ್ತರು ಭಾವಚಿತ್ರ, ವಯಸ್ಸಿನ ದಾಖಲೆ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ಮುಖ್ಯಸ್ಥರ ದೃಢೀಕರಣ, ಸದರಿ ಮಾಧ್ಯಮ ಸಂಸ್ಥೆಯು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿ ಸೇರ್ಪಡೆಯಾಗಿರುವ ಕುರಿತ ದಾಖಲೆ ಹಾಗೂ ಕನಿಷ್ಠ 5 ವರ್ಷ ಸೇವೆ ಸಲ್ಲಿಸಿರುವ ಕುರಿತು ಸೇವಾನುಭವ ದಾಖಲೆಗಳನ್ನು ಸಲ್ಲಿಸಬೇಕು.

ಇದು ಮೂರು ದಿನಗಳ ವಸತಿಯುತ ತರಬೇತಿಯಾಗಿದ್ದು, ಪತ್ರಕರ್ತರಿಗೆ ಪ್ರಯಾಣ ಭತ್ಯೆ ನೀಡಲಾಗುವುದು. ಇನ್‌ಫೋಸಿಸ್ ಸಂಸ್ಥೆಯ ನಿಗದಿತ ಕ್ಯಾಂಪಸ್‌ಗಳಲ್ಲಿ ತರಬೇತಿ ನಡೆಯಲಿದೆ. ಈ ತರಬೇತಿ ಕಾರ್ಯಕ್ರಮದಲ್ಲಿ ಡಿಜಿಟಲ್ ಮಾಧ್ಯಮ, ಎಐ ಬಳಕೆ ಹಾಗೂ ಸಾಫ್ಟ್ ಸ್ಕಿಲ್ ಅಭಿವೃದ್ಧಿ ತರಬೇತಿ ನೀಡಲಾಗುವುದು.

ಪ್ರಸಕ್ತ ಸಾಲಿನಲ್ಲಿ ಒಟ್ಟು ಮೂರು ತಂಡಗಳಲ್ಲಿ ತರಬೇತಿ ನಡೆಯಲಿದ್ದು, ಒಂದು ತಂಡದಲ್ಲಿ ಮಹಿಳಾ ಆಯವ್ಯಯದಡಿ ಪತ್ರಕರ್ತೆಯರಿಗಾಗಿ ತರಬೇತಿ ನಡೆಯಲಿದೆ. ಎಲ್ಲ ಮೂರು ತಂಡಗಳಿಗೂ ಈ ಒಂದು ಬಾರಿ ಮಾತ್ರ ಅರ್ಜಿ ಆಹ್ವಾನಿಸಲಾಗುತ್ತಿದೆ.

ತರಬೇತಿಯ ಸ್ಥಳ ಮತ್ತು ದಿನಾಂಕವನ್ನು ನಂತರ ತಿಳಿಸಲಾಗುವುದು. ತರಬೇತಿಗೆ ಪತ್ರಕರ್ತರ ಆಯ್ಕೆ ಕುರಿತ ಅಂತಿಮ ನಿರ್ಧಾರ ಅಕಾಡೆಮಿಯದ್ದೇ ಆಗಿರುತ್ತದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 26 ಕೊನೆಯ ದಿನವಾಗಿದೆ ಎಂದು

# ಕರಾಟೆ ಸ್ಪರ್ಧೆಯಲ್ಲಿ ಅಕ್ಷರ ಪಬ್ಲಿಕ್ ಶಾಲೆ ವಿದ್ಯಾರ್ಥಿಗಳು ಅಮೋಘ ಸಾಧನೆ

**ಮಲ್ಲಮ್ಮ ನುಡಿ ವಾರ್ತೆ**

ಕೊಪ್ಪಳ : ಕೊಪ್ಪಳ ಜಿಲ್ಲಾ ಕ್ರೀಡಾಂಗಣ ದಲ್ಲಿನಡೆದ ಜಿಲ್ಲಾ ಪಂಚಾಯತ್ ಕೊಪ್ಪಳ. ಶಾಲಾ ಶಿಕ್ಷಣ ಇಲಾಖೆ ಕೊಪ್ಪಳ.ಹಾಗೂ ನ್ಯಾಷನಲ್ ಸ್ಟ್ರೀಟ್ ಕರಾಟೆ ಅಕಾಡೆಮಿ ಕೊಪ್ಪಳ. ಇವರ ಸಂಯೋಗದಲ್ಲಿ ಕೊಪ್ಪಳ ಜಿಲ್ಲಾ ಮಟ್ಟದ ಪ್ರಥಮಿಕ ಹಾಗೂ ಪ್ರೌಢಶಾಲೆ ಮಕ್ಕಳ ಕರಾಟೆ ಸ್ಪರ್ಧೆಯಲ್ಲಿ. ಗಂಗಾವತಿ ನಗರದ ಅಕ್ಷರ ಪಬ್ಲಿಕ್ ಸ್ಕೂಲ್ ಬಾಲಕರ ವಿಭಾಗದಲ್ಲಿ .ಕಿಶೋರ್ ಕುಮಾರ್. 45 ಕೆಜಿ ವಿಭಾಗದಲ್ಲಿ ಪ್ರಥಮ ಸ್ಥಾನ,ವೀವಂತ್ ಗೌಡ. 55 ಕೆಜಿ ವಿಭಾಗದಲ್ಲಿ ಪ್ರಥಮ ಸ್ಥಾನ,ಸುಮಿತ್ ಶೆಟ್ಟಿ 58 ಕೆಜಿ ವಿಭಾಗದಲ್ಲಿ ದ್ವಿತೀಯ ಸ್ಥಾನ ಬಾಲಕಿಯರ ವಿಭಾಗದಲ್ಲಿ

ಸಿಂಚನ. 30 ಕೆ.ಜಿ ವಿಭಾಗದಲ್ಲಿ ಪ್ರಥಮ ಸ್ಥಾನ, ಲಿಖಿತ. 46 ಕೆಜಿ ವಿಭಾಗದಲ್ಲಿ ಪ್ರಥಮ ಸ್ಥಾನ.ನಾಲ್ಕು ವಿದ್ಯಾರ್ಥಿಗಳು ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದಿರುತ್ತಾರೆ. ವಿದ್ಯಾರ್ಥಿಗಳು ಪಾಠದ ಜೊತೆಗೆ




ಬಿಡುವಿನ ವೇಳೆಯಲ್ಲಿ ಕರಾ–ಟೆ ಕಲಿಯುವುದರಿಂದ ದೈಹಿಕ ಮಾನಸಿಕ ಹಾಗೂ ಬೌದ್ಧಿಕ ಬೆಳವಣಿಗೆ ಸಹಕಾರಿಯಾಗುತ್ತದೆ. ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ಮಕ್ಕಳಲ್ಲಿ ಆತ್ಮ ಧೈರ್ಯವನ್ನು ತುಂಬುತ್ತದೆ ಹಾಗೂ ನಮ್ಮ ಶಾಲೆಯಿಂದ ಕರಾಟೆ ತರಬೇತಿ ಪಡೆದು ರಾಜ್ಯಮಟ್ಟಕ್ಕೆ. ಆಯ್ಕೆಯಾಗಿ ನಮ್ಮ ಶಾಲೆಗೆ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಎಂದು ಉಪಾಧ್ಯಾಯನಿ ಸತಿ ಹೀಮಾ ರವಿ ಚೈತನ್ಯ ರೆಡ್ಡಿ ಅಭಿನಂದಿಸಿ ಹೇಳಿದರು. ಸಾಧನೆ ಮಾಡಿದ ಎಲ್ಲಾ ವಿದ್ಯಾರ್ಥಿಗಳಿಗೆ ಶಾಲೆಯ ಡೈರೆಕ್ಟರ್ ರವಿ ಚೈತನ್ಯ ರೆಡ್ಡಿ ಶುಭಕೋರಿದರು. ಈ ಸಂದರ್ಭದಲ್ಲಿ ದೈಹಿಕ ಶಿಕ್ಷಕರಾದ ತಿಮ್ಮಪ್ಪ ಕರಾಟೆ ಶಿಕ್ಷಕರಾದ ಅನ್ವರ್ ಪಾಷಾ ಶಾಲೆಯ ಶಿಕ್ಷಕರ ವೃಂದದಿಂದ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

# ಬಸವರಾಜ ರಾಯರೆಡ್ಡಿ ಮುಖ್ಯಮಂತ್ರಿ ಆಗಲಿ : ಪಿ.ಜಿ.ಆರ್. ಸಿಂಧ್ಯಾ



**ಮಲ್ಲಮ್ಮ ನುಡಿವಾರ್ತೆ**

ಕೊಪ್ಪಳ : ಯಲಬುರ್ಗಾ ರಾಜ್ಯದ ಪ್ರಸ್ತುತ ರಾಜಕೀಯದಲ್ಲಿ ಹೆಚ್ಚು ಪ್ರಭಾವಿಶಾಲಿಗಳು ಹಾಗೂ ರಾಜ್ಯದ ಸಮಗ್ರ ಇತಿಹಾಸವನ್ನು ಬಲ್ಲ ಸ್ಥಳೀಯ ಶಾಸಕ ಬಸವರಾಜ ರಾಯರೆಡ್ಡಿಯವರು ಮುಖ್ಯಮಂತ್ರಿ ಆಗುವ ಎಲ್ಲಾ ಅರ್ಹತೆಗಳು ಅವರಲ್ಲಿವೆ ಆ ಕಾರಣಕ್ಕಾಗಿ ಅವರು ಮುಖ್ಯಮಂತ್ರಿ ಆಗುವುದು ಪ್ರಸಕ್ತ ಸಂದರ್ಭದಲ್ಲಿ ಸೂಕ್ತ ಎಂದು ರಾಜ್ಯದ ಮಾಜಿ ಗೃಹ ಹಾಗೂ ಸಾರಿಗೆ ಸಚಿವರಾದ ಪಿ.ಜಿ.ಆರ್.ಸಿಂಧ್ಯಾರವರು ಮುಕ್ತವಾಗಿ ತಮ್ಮ ಅಭಿಪ್ರಾಯವನ್ನು ಹಂಚಿಕೊಂಡರು.

ತಾಲೂಕಿನ ಕರಮುಡಿ ಗ್ರಾಮದಲ್ಲಿ ನಿಂಗೋಜಿ ಶಿಕ್ಷಣ ಹಾಗೂ ಗ್ರಾಮೀಣಾಭಿವೃದ್ಧಿ ಟ್ರಸ್ಟನವರು ಆಯೋಜಿಸಿದ 78 ನೇ ಕಲ್ಯಾಣ ಕರ್ನಾಟಕ ವಿಮೋಚನಾ ಧ್ವಜಾರೋಹಣ ನೇರವೆರಿಸಿ ಮಾತನಾಡಿದ ಅವರು ರಾಯರೆಡ್ಡಿ ರವರು ಹಾಗೂ ನಾನು ಒಟ್ಟೊಟ್ಟಿಗೆ ರಾಜಕೀಯ ಪ್ರವೇಶ ಮಾಡಿದವರು. ಅವರು ನನ್ನ ಗೆಳೆಯರು ಅಂತಾ ಮುಖ್ಯಮಂತ್ರಿ ಆಗಲಿ ಅನ್ನುವನಲ್ಲ ಆತನಲ್ಲಿ ಅಂತಹ ಚಾಣಾಕ್ಷ ಬುದ್ಧಿ ಹಾಗೂ ರಾಜ್ಯವನ್ನು ಮುನ್ನೆಡಿಸುವ ಸಾಮರ್ಥ್ಯ ಇದೆ ಅನೇಕ ಜ್ವಲಂತ ಸಮಸ್ಯೆಗಳನ್ನು ಬಗೆ ಹರಿಸುವ ಸಂಘಟನಾ ಚತುರತೆ ಅವರಲ್ಲಿ ಇದೆ ಎಂದು ಹೇಳಿದರು.

# ಬಳ್ಳಾರಿಯಲ್ಲಿ ಸಂಭ್ರಮದ ವಿಶ್ವಕರ್ಮ ಜಯಂತಿ ಆಚರಣೆ

## ವಿಶ್ವಕರ್ಮ ಜಗತ್ತು ಕಂಡ ಮಹಾನ್ ಶಿಲ್ಪಿ: ಸಂಸದ ಈ.ತುಕಾರಾಮ್

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.17–ವಿಶ್ವಕರ್ಮರು ಜಗತ್ತು ಕಂಡ ಮಹಾನ್ ವಾಸ್ತುಶಿಲ್ಪಿ ಮತ್ತು ವಿನ್ಯಾಸಕರಾಗಿದ್ದಾರೆ. ಅವರ ಜೀವನದ ಇತಿಹಾಸವನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು ಎಂದು ಸಂಸದ ಈ.ತುಕಾರಾಮ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಬುಧವಾರ ಏರ್ಪಡಿಸಿದ್ದ ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ವಿಶ್ವಕರ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವಕರ್ಮರ ಸತ್ಯ ಧರ್ಮವನ್ನು ಎಲ್ಲಾ ಜನಾಂಗದವರು ಪರಿಪಾಲನೆ ಮಾಡಬೇಕು. ಅವರ ಗ್ರಂಥಗಳ ಬಗ್ಗೆ ಅಧ್ಯಯನ ಮಾಡಿ, ಅವರ ಜೀವನಶೈಲಿ ತತ್ವಗಳನ್ನು ಪಾಲಿಸೋಣ ಎಂದು ತಿಳಿಸಿದರು. ಸಮಾಜದಲ್ಲಿ ಪ್ರತಿಯೊಬ್ಬರೂ ವಿದ್ಯೆಯ




ಮಹತ್ವ ತಿಳಿದು ಶೈಕ್ಷಣಿಕವಾಗಿ ಪ್ರಜ್ಞಾವಂತರಾಗಬೇಕು. ಸಂವಿಧಾನವು ನಮಗೆ ಬದುಕುವ ಮತ್ತು ಶಿಕ್ಷಣ ಪಡೆಯುವ ಹಕ್ಕನ್ನು ನೀಡಿದ್ದು, ಅದನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು. ತಂದೆ–ತಾಯಿ ಜನ್ಮ ನೀಡಿದರೆ, ಗುರುಗಳು ಭವಿಷ್ಯ ನೀಡುತ್ತಾರೆ. ಅಂತಹ ಗುರುಗಳಿಗೆ ಯಾವಾಗಲೂ ನಾವು ಋಣಿಯಾಗಿರಬೇಕು ಎಂದು ಹೇಳುತ್ತಾ ತಮ್ಮ ಪದವಿ ಕಾಲೇಜಿನ ವಿದ್ಯಾಭ್ಯಾಸ ಕಲಿಸಿದ ಗುರುಗಳನ್ನು ಸ್ಮರಿಸಿಕೊಂಡರು.

ಬಳ್ಳಾರಿ ನಗರದ ವಿಶ್ವಕರ್ಮ ಸಮುದಾಯದ ವಿದ್ಯಾರ್ಥಿ ನಿಲಯಕ್ಕೆ ಅನುದಾನವಾಗಿ 50 ಲಕ್ಷ ನೀಡಲಾಗುವುದು ಎಂದು ತಿಳಿಸಿದ ಅವರು, ಜಿಲ್ಲಾ ಆಸ್ಪತ್ರೆಯಲ್ಲಿ 12 ಕೋಟಿ ವೆಚ್ಚದಲ್ಲಿ ಎಮ್‌ಆರ್‌ಐ ಸ್ಕ್ಯಾನಿಂಗ್ ಹಾಗೂ ಇಎಸ್‌ಐ ಆಸ್ಪತ್ರೆಗೆ ಶಂಕುಸ್ಥಾಪನೆಗೆ ಸರ್ಕಾರದಿಂದ ಅನುಮೋದನೆ ಸಿಕ್ಕಿದೆ ಎಂದು ಹೇಳಿದರು.

ಬಳ್ಳಾರಿಯಲ್ಲಿ ಜವಾಹರ್ ನವೋದಯ ವಿದ್ಯಾಲಯ ಸ್ಥಾಪಿಸಲು ಸರ್ಕಾರದ ಗಮನಕ್ಕೆ ತರಲಾಗುವುದು ಹಾಗೂ ನಗರದಲ್ಲಿ ಈಗಾಗಲೇ ಹಲವಾರು ಯೋಜನೆಗಳ ಕಾಮಗಾರಿಗಳು ಪ್ರಗತಿಯಲ್ಲಿದ್ದು ಶೀಘ್ರದಲ್ಲೇ ಪೂರ್ಣಗೊಳಿಸಿ ಉದ್ಘಾಟಿಸಲಾಗುವುದು ಎಂದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ವಿಶ್ವಕರ್ಮರು ಅರಮನೆಗಳಿಂದ ಹಿಡಿದು ದೇವರ ಆಯುಧಗಳು, ದೇವತೆಗಳಿಗೆ ಹಾರುವ ರಥಗಳವರೆಗೆ ಎಲ್ಲವನ್ನು ಸೃಷ್ಟಿಸಿದ ವಿನ್ಯಾಸಕರಾಗಿದ್ದಾರೆ. ವಿಶ್ವಕರ್ಮ ಜನಾಂಗದವರು ಕರ್ಮ ಸಿದ್ಧಾಂತ ಮತ್ತು ದುಡಿಮೆ ನಂಬಿ ಬದುಕುವ ಜನರಾಗಿದ್ದು, ಸಮಾಜ ಸೇವೆ ಮಾಡುವ ಸಹೃದಯ ಜನಾಂಗವಾಗಿದೆ ಎಂದು ಹೇಳಿದರು.

ಕೂಡ್ಲಿಗಿ ತಾಲ್ಲೂಕಿನ ಖಾನಹೊಸಹಳ್ಳಿಯ ನಿವೃತ್ತ ಪ್ರಾಂಶುಪಾಲರು ಹಾಗೂ ಸಾಹಿತಿ ಡಾ.ವೃಷಭೇಂದ್ರಚಾರ್ಯ ಅರ್ಕಸಾಲಿ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ವಿಶ್ವಕರ್ಮರು ಪುರಾಣಗಳ ಪ್ರಕಾರ, ಒಬ್ಬ ಅಪ್ರತಿಮ ವಾಸ್ತುಶಿಲ್ಪ, ತಂತ್ರಜ್ಞಾನದ ಹಿಂದೂ ದೇವರು. ವೇದ ಉಪನಿಷತ್ತುಗಳಲ್ಲಿ ಕೊಂಡಾಡಿರುವ ಭಗವಂತ ವಿಶ್ವಕರ್ಮ ಅವರು ವಿಶ್ವದ ಪ್ರಖ್ಯಾತ ಶಿಲ್ಪಿಗಳು. ಹಲವಾರು ಕವಿಗಳು, ಸಾಹಿತಿಗಳು ಸಂಶೋಧನೆ ನಡೆಸಿ ವಿಶ್ವಕರ್ಮ ಅವರ ಬಗ್ಗೆ ಪುಸ್ತಕಗಳನ್ನು ಬರೆದಿದ್ದಾರೆ. ವಿಶ್ವಕರ್ಮ ಅವರ ಬಗ್ಗೆ ಚರಿತ್ರೆ, ಜೀವನದ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳಬೇಕು ಎಂದರು.

ನಮ್ಮ ಭಾರತದಲ್ಲಿಯು ವಿಶ್ವಕರ್ಮರಿಂದ ಸ್ಥಾಪಿಸಿಲ್ಪಟ್ಟ ಕೆಲವು ಅದ್ಭುತ ಸ್ಥಳಗಳಿವೆ. 5 ಸಾವಿರ ವರ್ಷಗಳ ಚರಿತ್ರೆ ಹಿನ್ನೆಲೆಯನ್ನು ಹೊಂದಿದ ಜನಾಂಗ ವಿಶ್ವಕರ್ಮ ಜನಾಂಗವಾಗಿದೆ. ಹಲವಾರು ಪ್ರಾಚೀನ ಕಾಲದ ಶಿಲೆಗಳು, ಆಯುಧಗಳು ವಿಶ್ವಕರ್ಮರವರು ರಚಿಸಿದ್ದಾರೆ ಎಂಬ ಉಲ್ಲೇಖಗಳಿವೆ ಎಂದು ತಿಳಿಸಿದರು. ಕಾರ್ಯಕ್ರಮಕ್ಕೂ ಮುನ್ನ ಸಂವಿಧಾನದ ಪ್ರಸ್ತಾವನೆ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ತೋರಣಗಲ್ ನ ಕೆ.ಕೊಟ್ರೇಶ್ ತಂಡದಿಂದ ಭಕ್ತಿ ಸಂಗೀತ ವಚನ ಗಾಯನ ಪ್ರಸ್ತುತ ಪಡಿಸಿದರು. ಇದೇ ವೇಳೆ ಎಸ್‌ಎಸ್‌ಎಲ್‌ಸಿ, ಪಿಯುಸಿ ಮತ್ತು ವಿಶೇಷ ಸಾಧನೆಗೈದ ವಿದ್ಯಾರ್ಥಿಗಳನ್ನು ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ವಿಶ್ವಕರ್ಮ ಅಭಿವೃದ್ಧಿ ನಿಗಮದ ಸದಸ್ಯ ಚಂದ್ರಶೇಖರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಬಳ್ಳಾರಿ ಜಿಲ್ಲಾ ವಿಶ್ವಕರ್ಮ ವಿಕಾಸ್ ವೇದಿಕೆ ಅಧ್ಯಕ್ಷ ಚಂದ್ರಕಾಂತ್ ಸ.ಸೋನಾರ ಸೇರಿದಂತೆ ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು, ಸಮುದಾಯದ ಮುಖಂಡರು ಹಾಗೂ ಇಲಾಖೆಯ ಸಿಬ್ಬಂದಿಗಳು ಇತರರು ಉಪಸ್ಥಿತರಿದ್ದರು.

**ಸಂಭ್ರಮದ ಮೆರವಣಿಗೆ:**

ವಿಶ್ವಕರ್ಮ ಜಯಂತಿಯ ಅಂಗವಾಗಿ ಏರ್ಪಡಿಸಿದ್ದ ಮೆರವಣಿಗೆಯು ಡೊಳ್ಳು ಕುಣಿತ ಮತ್ತು ವಿವಿಧ ಸಾಂಸ್ಕೃತಿಕ ಕಲಾ ತಂಡಗಳನ್ನೊಳಗೊಂಡು ಸಂಭ್ರಮದಿಂದ ನಡೆಯಿತು. ಮೆರವಣಿಗೆಯಲ್ಲಿ ಮಹಿಳೆಯರು ಕೋಲಾಟ ಪ್ರದರ್ಶನ ನೀಡಿದರು.

ಮೆರವಣಿಗೆಯು ನಗರದ ಕಾಳಿಕಾ ಕಮತೇಶ್ವರ ದೇವಸ್ಥಾನದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ಹಳೇ ಬ್ರೂಸ್‌ಪೇಟೆ ಪೊಲೀಸ್ ಠಾಣೆ, ತೇರು ಬೀದಿ, ಹೆಚ್.ಆರ್.ಗವಿಯಪ್ಪ ವೃತ್ತದ ಮೂಲಕ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಸಭಾಂಗಣಕ್ಕೆ ತಲುಪಿ ಸಂಪನ್ನಗೊಂಡಿತು.

# ತ್ಯಾಗ–ಬಲಿದಾನದ ಪ್ರತೀಕವಾಗಿ ಸಿಕ್ಕ ಸ್ವಾತಂತ್ರ್ಯ ಎಸಿ ಕಲಶೆಟ್ಟಿ



**ಮಲ್ಲಮ್ಮ ನುಡಿ ವಾರ್ತೆ**

ಲಿಂಗಸುಗೂರು.ಸೆ.17:ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಹೈದರಾಬಾದ್ ಕರ್ನಾಟಕ ವಿಮೋಚನಾ ದಿನಾಚರಣೆಯನ್ನು ಸಮ್ಮುಖವಾಗಿ ಆಚರಿಸಲಾಯಿತು. ಲಿಂಗಸುಗೂರಿನ ಸಹಾಯಕ ಆಯುಕ್ತರಾದ ಬಸವಣ್ಣಪ್ಪ ಕಲಶೆಟ್ಟಿಯವರು ಧ್ವಜಾರೋಹಣ ನೆರವೇರಿಸಿದರು. ನಂತರ ಮಾತನಾಡಿದ ಅವರು "ನಮ್ಮ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದ್ದರೂ ಹೈದರಾಬಾದ್ ಕರ್ನಾಟಕ ಭಾಗಕ್ಕೆ ನಿಜಾಮರ ಆಳ್ವಿಕೆಯಿಂದ ನಿಜವಾದ ಸ್ವಾತಂತ್ರ್ಯ ದೊರಕಿರಲಿಲ್ಲ. ಆ ಕಾಲದಲ್ಲಿ ನಮ್ಮ ಆರು ಜಿಲ್ಲೆಗಳ ಜನರು ಅನೇಕ ತ್ಯಾಗ–ಬಲಿದಾನಗಳನ್ನು ಸಲ್ಲಿಸಿದರು. ಅಂತಹ ಸಮಯದಲ್ಲಿ ಅಂದಿನ ಕೇಂದ್ರ ಗೃಹ ಸಚಿವರಾದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ದೃಢ ನಿರ್ಧಾರದಿಂದ ಆಪರೇಷನ್ ಪೋಲೊ ನಡೆಸಿ ಸೆಪ್ಟೆಂಬರ್ 17ರಂದು ನಿಜಾಮರ ಆಳ್ವಿಕೆಯಿಂದ ವಿಮೋಚನೆ ದೊ–ರೆತದ್ದು ಇಂದಿಗೂ ಸ್ಮರಣೀಯವಾಗಿದೆ. ಇದು ನಮ್ಮೆಲ್ಲರ ಹರ್ಷದಾಯಕ ದಿನವಾಗಿದೆ" ಎಂದು ಹೇಳಿದರು. ಈ ಸಂದರ್ಭದಲ್ಲಿ ತಹಶಿಲ್ದಾರ ಕು.ಸತ್ಯಮ್ಮ, ಡಿವೈಎಸ್ಪಿ ದತ್ತಾತ್ರೇಯ ಕಾರ್ನಾಡ್, ಭೂಪನಗೌಡ ಕರಡಕಲ್, ಪಾಮಯ್ಯ ಮುರಾರಿ, ಬಾಬುರೆಡ್ಡಿ ಮುನ್ನೂರ್ ಬಸವನಗೌಡ ಮೇಟಿ ಈಚನಾಳ್ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು, ಜನಪ್ರತಿನಿಧಿಗಳು ಭಾಗವಹಿಸಿದ್ದರು.

# ಪಿಯು ಕಾಲೇಜು ಕ್ರೀಡಾಕೂಟ- ಶಿರೂರ ವಿದ್ಯಾರ್ಥಿಗಳ ಸಾಧನೆ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.17-ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಇತ್ತೀಚಿಗೆ ಜರುಗಿದ ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜು ಕ್ರೀಡಾಕೂಟದಲ್ಲಿ ಸಮೀಪದ ಶಿರೂರ ಪಟ್ಟಣದ ಕೆ.ಆರ್.ಲಕ್ಕಂ ಪಿಯು ಕಾಲೇಜಿನ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಪುರುಷರ ವಿಭಾಗದಲ್ಲಿ 400 ಮೀ.ಓಟದಲ್ಲಿ ಶ್ರೀಧರ ಹಂಡರಗಲ್ಲ ಪ್ರಥಮ, 1500 ಮೀ. (ಕ್ರಾಸ್‌ಕಂಟ್ರಿ) ಗುಡ್ಡಗಾಡು ಓಟದಲ್ಲಿ ಮರಗಪ್ಪ ಮಾದರ ಪ್ರಥಮ, ಯೋಗಾಸನದ ಮೂರು ವಿಭಾಗದಲ್ಲಿ ಅಜಯ ಕೋಂಗಿ ಪ್ರಥಮ, 4*400 ಮೀ. ರಿಲೆಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಮಹಿಳೆಯರ ವಿಭಾಗದ ಥ್ರೋಬಾಲ್‌ನಲ್ಲಿ ಕಾಲೇಜಿನ ವಿದ್ಯಾರ್ಥಿಗಳು ದ್ವಿತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದರೆ, ಎತ್ತರ ಜಿಗಿತದಲ್ಲಿ ರೇಷ್ಮಾ ಗುಳೇದ ತೃತೀಯ, ಗುಂಡು ಎಸೆತದಲ್ಲಿ ದೀಪಾ ಮಲಘಾನ ತೃತೀಯ ಸ್ಥಾನ ಗಳಿಸಿ ಸಾಧನೆ ತೋರಿದ್ದಾರೆ ಎಂದು ಸಂಸ್ಥೆಯ ಕಾರ್ಯದರ್ಶಿ ಶ್ರೀಶೈಲ ಕರಿಶಂಕರಿ ಹಾಗೂ ಪ್ರಾಚಾರ್ಯ ಎಸ್.ಎಸ್. ಮುಳ್ಳೂರ ತಿಳಿಸಿದ್ದಾರೆ.

# ನಂದಿನಿ ಮಾರಾಟ ಮಳಿಗೆಗೆ ಸಚಿವ ತಿಮ್ಮಾಪೂರ ಚಾಲನೆ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.17-ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲಾ ವ್ಯಾಪ್ತಿಯಲ್ಲಿ ಹೊಸದಾಗಿ ಪ್ರಾರಂಭಿಸಲಾದ 30 ನಂದಿನಿ ಮಾರಾಟ ಮಳಿಗೆಗಳ ಪೈಕಿ ಸಾಂಕೇತಿಕವಾಗಿ ಒಂದು ಮಾರಾಟ ಮಳಿಗೆಗೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ತಿಮ್ಮಾಪೂರ ಬುಧವಾರ ಚಾಲನೆ ನೀಡಿದರು.

ವಿಜಯಪುರ-ಬಾಗಲಕೋಟೆ ಜಿಲ್ಲಾ ಸಹಕಾರಿ ಹಾಲು ಒಕ್ಕೂಟ-ದ ವತಿಯಿಂದ ವಿದ್ಯಾಗಿರಿಯಲ್ಲಿ ಪ್ರಾರಂಭಿಸಲಾದ ನೂತನ ನಂದಿನಿ ಮಳಿಗೆಗೆ ಸಾಂಕೇತಿಕವಾಗಿ ಚಾಲನೆ ನೀಡಿ, ಮಳಿಗೆಯಲ್ಲಿರುವ ನಂದಿನಿ ಉತ್ಪನ್ನಗಳನ್ನು ವೀಕ್ಷಣೆ ಮಾಡಿದರು.

ಕಲಬುರ್ಗಿಯಲ್ಲಿ ರಾಜ್ಯದ ಮುಖ್ಯಮಂತ್ರಿಗಳು ರಾಜ್ಯಾದ್ಯಂತ ಏಕ ಕಾಲಕ್ಕೆ 500 ನಂದಿನಿ ಮಳಿಗೆಗಳಿಗೆ ಚಾಲನೆ ನೀಡಿರುವ ಕಾರ್ಯಕ್ರಮವನ್ನು ವರ್ಚ್ಯೂವಲ್ ಮೂಲಕ ವೀಕ್ಷಣೆ ಮಾಡಲಾಯಿತು.

ರಾಜ್ಯಾದ್ಯಂತ ಚಾಲನೆ ನೀಡಲಾದ 500 ಮಳಿಗೆಗಳ ಪೈಕಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲಾ ವ್ಯಾಪ್ತಿಗೆ ತಲಾ 15 ಮಳಿಗೆಗಳ ಗುರಿ ನೀಡಲಾಗಿತ್ತು. ಅವಳಿ ಜಿಲ್ಲೆಗೆ ಗುರಿ ನೀಡಲಾದ ಒಟ್ಟು 30 ನಂದಿನಿ ಮಳಿಗೆಗಳ ಪೈಕಿ ಬಾಗಲಕೋಟೆಯಲ್ಲಿ ಒಂದು ಮಳಿಗೆಗೆ ಸಾಂಕೇತಿಕವಾಗಿ ಚಾಲನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ವಿಜಯಪುರ-ಬಾಗಲಕೋಟೆ ಜಿಲ್ಲಾ ಸಹಕಾರಿ ಹಾಲು ಒಕ್ಕೂಟದ ಅಧ್ಯಕ್ಷ ಐ.ಎಸ್.ಕರಿಗೌಡ್ರ, ಒಕ್ಕೂಟದ ನಿರ್ದೇಶಕರಾದ ನಿಂಗಣ್ಣ ಹಂಡಿ, ಸಿದ್ದಪ್ಪ ಕಡಪಟ್ಟಿ, ನಿಂಗನಗೌಡ ಪಾಟೀಲ, ನಿಂಗರಾಜ ಪಾಟೀಲ, ಸಿದ್ದಣ್ಣ ಕೊಲ್ಹಾರ, ಸಿದ್ದರಾಮ ಜಂಗಮಶೆಟ್ಟಿ, ಈರಣ್ಣ ಕೊಪ್ಪದ, ಪಾತ್ರೋಟ, ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಡಿ.ಟಿ.ಶಿವಶಂಕರಸ್ವಾಮಿ, ಮಾರುಕಟ್ಟೆ ಮುಖ್ಯಸ್ಥ ಡಾ.ವಿ.ಆರ್. ಯಡಹಳ್ಳಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವಿಜಯಪುರ ಅಪರ ಡಿಸಿ ಸೋಮಲಿಂಗ ಗೆಣ್ಣೂರ ಕೃತಿಗಳ ಬಿಡುಗಡೆ
## ಕಹಿಸತ್ಯ ಹೇಳದ ಕನ್ನಡ ದಲಿತ ಲೇಖಕರು-ಡಾ.ಮಲ್ಲಿಕಾ ಘಂಟಿ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.17-ಮರಾಠಿ ಲೇಖಕರು ತಮ್ಮ ಆತ್ಮಕಥೆಗಳಲ್ಲಿ ನಿರ್ಭಿಡೆಯಿಂದ ಹಾಗೂ ವಾಸ್ತವ ಕಹಿಸತ್ಯಗಳನ್ನು ಹೇಳಿದ ಹಾಗೆ ಕನ್ನಡದ ದಲಿತ ಲೇಖಕರಿಗೆ ಸಾಧ್ಯವಾಗಿಲ್ಲ ಎಂದು ಹಿರಿಯ ಲೇಖಕಿ, ಹಂಪಿ ಕನ್ನಡ ವಿಶ್ವವಿದ್ಯಾಲಯ ವಿಶ್ರಾಂತ ಕುಲಪತಿ ಡಾ.ಮಲ್ಲಿಕಾ ಘಂಟಿ ವಿಷಾದ ವ್ಯಕ್ತಪಡಿಸಿದರು. ನಗರದ ಚರಂತಿಮಠದಲ್ಲಿ ಶಿವಾನುಭವ ಸಮಿತಿ, ಗೆಳೆಯರ ಬಳಗ ಹಾಗೂ ಮೈಸೂರಿನ ಕವಿತಾ ಪ್ರಕಾಶನ ವತಿಯಿಂದ ಆಯೋಜಿಸಿದ್ದ ವಿಜಯಪುರ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಅವರ 'ನಮ್ಮ ಸಂವಿಧಾನ ನಮ್ಮ ಹೆಮ್ಮೆ' ಹಾಗೂ ಅವರ ಆತ್ಮಕಥೆ 'ದೇವರ ಗೆಣ್ಣೂರ' ಕೃತಿಗಳನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಮಹಾರಾಷ್ಟ್ರದಲ್ಲಾದ ಔದ್ಯೋಗೀಕರಣ ಪ್ರಭಾವ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಅವರ ನೇರವಾದ ಪ್ರಭಾವದಿಂದ ಮರಾಠಿ ಲೇಖಕರು ಸಮಾಜಶಾಸ್ತ್ರ ಹಾಗೂ ಅರ್ಥಶಾಸ್ತ್ರ ನೆಲೆಯಲ್ಲಿ ವಿಶ್ಲೇಷಣೆಗೆ ಒಳಪಡಿಸುವ ಹಾಗೆ ಬರೆದರು. ಆದರೆ ಕರ್ನಾಟಕದ ಸಾಂಸ್ಕೃತಿಕ ಹಾಗೂ ಸಾಮಾಜಿಕ ಬದುಕು ಸಂಪೂರ್ಣವಾಗಿ ಜಮೀನ್ದಾರಿ ಒಳಗೊಂಡಿದ್ದಿಲ್ಲ. ಅಲ್ಲದೆ ಔದ್ಯೋಗೀಕರಣ ಸಂಪೂರ್ಣವಾಗಿ ತೆರೆದುಕೊಂಡಿಲ್ಲ. ಇದರಿಂದ ತಣ್ಣಗಿರುವ ಅವಮಾನಗಳನ್ನು ತಲ್ಲಣಗಳನ್ನು ಹಾಗೂ ನೋವುಗಳನ್ನು ಹೇಳಿಕೊಳ್ಳುವ ಒತ್ತಡಗಳು ನಮ್ಮ ಕರ್ನಾಟಕ ಲೇಖ-ಕರಿಗೆ ಇಲ್ಲ ಎಂದರು.

ಮೂಲತಃ ಲೇಖಕರು ಗಾಂಧಿವಾದ, ಬಸವಣ್ಣನ ಸಿದ್ಧಾಂತ ಕಾರಣಗಳಿಗಾಗಿ ಅವರೊಳಗೆ ಸಾತ್ವಿಕತೆ ಮನೆ ಮಾಡಿಕೊಂಡಿದೆ. ಈ ಸಾತ್ವಿಕತೆ-ಯು ಅವರ ಅತ್ಯಂತ ಬಡತನದ ಭಯಾನಕತೆಯನ್ನು ಬಿಚ್ಚಿಡುವಲ್ಲಿ ಗಾಂಧಿ ಮತ್ತು ಬಸವಣ್ಣ ತಡೆಗೋಡೆಯಾಗಿ ನಿಲ್ಲುತ್ತಾರೆ. ಹೀಗಾಗಿ ಸಂಘರ್ಷಕ್ಕೆ ಇಳಿವ ಮನೋಭಾವ ಅವರದಲ್ಲ ಎಂದು ಡಾ.ಮಲ್ಲಿಕಾ ಘಂಟಿ ವಿವರಿಸಿದರು.

ಕೃತಿ ಪರಿಚಯಿಸಿದ ಹಿರಿಯ ಲೇಖಕ ಡಾ.ಪ್ರಕಾಶ ಖಾಡೆ, ದೇವರ ಗೆಣ್ಣೂರು ಕೃತಿಯು ಕನ್ನಡದ ಗ್ರಾಮ್ಯ ಅಸ್ಮಿತೆಗಳನ್ನು ಕಟ್ಟಿಕೊಟ್ಟಿದೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳ ಅದರಲ್ಲೂ ದಲಿತ ಬಾಲಕರ ಬಾಲ್ಯಲೋಕವು ಎಷ್ಟೊಂದು ಅವಮಾನವೀಯ ನೆಲೆಯಲ್ಲಿ ರೂಪುಗೊಂಡಿರುತ್ತದೆಯೋ ಅದನ್ನು ಒಂದು ಸವಾಲಾಗಿ ಸ್ವೀಕರಿಸಿ ಬೆಳೆದು ದೊಡ್ಡವರಾಗುವ ಛಲಗಾರಿಕೆ ಈ ಕೃತಿಯ ಲೇಖಕರ ಅನುಭವಗಳಿಂದ ಕಾಣುತ್ತೇವೆ ಎಂದು ತಿಳಿಸಿದರು.

ಗಿಡಕ್ಕೆ ನೀರುಣಿಸುವ ಮೂಲಕ ಜಿಲ್ಲಾಧಿಕಾರಿ ಸಂಗಪ್ಪ ಕಾರ್ಯಕ್ರಮ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಯುಐಐಸಿ ನಿವೃತ್ತ ವಿಭಾಗೀಯ ವ್ಯವಸ್ಥಾಪಕ ಎಂ.ಎಸ್.ಚಲವಾದಿ ಭಾಗವಹಿಸಿದ್ದರು. ಸತ್ಯಶೋಧಕ ಸಂಘದ ರಾಜ್ಯಾಧ್ಯಕ್ಷ ಪರಶುರಾಮ ಮಹಾರಾಜನವರ ಹಾಗೂ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಭೀಮವಾದ) ಸಂಸ್ಥಾಪಕ ಪರಶುರಾಮ ನೀಲನಾಯಕ ಅವರನ್ನು ಸನ್ಮಾನಿಸಲಾಯಿತು.

ಚರಂತಿಮಠದ ಡಾ.ಪ್ರಭುಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಶ್ರೇಯಾ ಜೋರಾಪುರ ವಚನ ಹಾಡಿದರು. ಕವಿತಾ ಪ್ರಕಾಶನದ ಗಣೇಶ ಅಮೀನಗಡ ಸ್ವಾಗತಿಸಿದರು. ಗೆಳೆಯರ ಬಳಗದ ಅಧ್ಯಕ್ಷ ಎಂ.ಎಸ್.ಗುಡಗುಂಟಿ ವಂದಿಸಿದರು. ಡಾ.ಸುಮಂಗಲಾ ಮೇಟಿ ನಿರೂಪಿಸಿದರು.

# ಉದ್ಯೋಗ ಪೂರ್ವ ತರಬೇತಿ ಶಿಬಿರ ಉದ್ಘಾಟನೆ ಉದ್ಯೋಗಂ ಮಾನವ ಲಕ್ಷಣಂ : ಡಾ.ಅರುಣಕುಮಾರ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.17-ಇಂದು ಪ್ರತಿಯೊಬ್ಬ ವ್ಯಕ್ತಿಗೂ ಉದ್ಯೋಗದ ಅವಶ್ಯಕತೆಯಿದೆ. ಸಂತಸದ ಬದುಕಿಗೆ ಉದ್ಯೋಗ ಬೇಕು. ಅದಕ್ಕಾಗಿ ಉದ್ಯೋಗ ಪೂರ್ವ ತರಬೇತಿ ಅವಶ್ಯವಾಗಿದ್ದು, ಇಂದಿನ ಕಾಲದಲ್ಲಿ ಉದ್ಯೋಗಂ ಮಾನವ ಲಕ್ಷಣಂ ಆಗಿದೆ ಎಂದು ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಹೇಳಿದರು.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಬೆಂಗಳೂರಿನ ಉನ್ನತಿ ಪೌಂಡೇಶನ್ ಅವರ ಸಹಯೋಗದಲ್ಲಿ ಕಾಲೇಜಿನ ವಿಶ್ವಮಾನವ ಸಭಾ ಭವನದಲ್ಲಿ ನಡೆದ 30 ದಿನಗಳ ಉದ್ಯೋಗ ಪೂರ್ವ ತರಬೇತಿ ಶಿಬಿರವನ್ನು ಸಸಿಗೆ ನೀರುಣಿಸಿ ಉದ್ಘಾಟಿಸಿ ಅವರು ಮಾತನಾಡಿದರು.

ಕೌಶಲ್ಯಯುಕ್ತ ಶಿಕ್ಷಣದಿಂದ ಉದ್ಯೋಗಾವಕಾಶ ಸೃಷ್ಟಿಸಿಕೊಳ್ಳಲು ಸಾಧ್ಯವಿದೆ. ಬೆಂಗಳೂರಿನ ಉನ್ನತಿ ಪೌಂಡೇಶನ್‌ದವರು ನೀಡುವ ಉದ್ಯೋಗದ ಪೂರ್ವ ತರಬೇತಿ ಪಡೆದು ವಿದ್ಯಾರ್ಥಿಗಳು ತಮ್ಮ ಮುಂದಿನ ಭದ್ರವಾದ ಬದುಕು ರೂಪಿಸಿಕೊಳ್ಳಬೇಕೆಂದು ಡಾ.ಗಾಳಿ ಹೇಳಿದರು.

ಬೆಂಗಳೂರಿನ ಉನ್ನತಿ ಪೌಂಡೇಶನ್‌ದ ಸಂಪನ್ಮೂಲ ವ್ಯಕ್ತಿ ಐಶ್ವರ್ಯ ಕಡಕೋಳ ಮಾತನಾಡಿ, ವಿದ್ಯಾರ್ಥಿಗಳು ಪದವಿ ಶಿಕ್ಷಣ ಮುಗಿಸಿದ ನಂತರ ಉದ್ಯೋಗ ಅವಕಾಶಕ್ಕಾಗಿ ಅಲೆಯದೆ ತಾವೇ ಸ್ವಂತ ಉದ್ಯೋಗ ಮತ್ತು ಉದ್ಯಮ ಸ್ಥಾಪಿಸಲು ಉದ್ಯೋಗ ಪೂರ್ವ ತರಬೇತಿ ಪಡೆದರೆ ಯಶಸ್ವಿಯಾಗಲು ಸಾಧ್ಯವಿದೆ ಎಂದರು.

ಪ್ರೊ.ಸಂಪತ್ತು ಲಮಾಣಿ ಪ್ರಾಸ್ತಾವಿಕ ಮಾತನಾಡಿ, ವಿದ್ಯಾರ್ಥಿಗಳು ಪಡೆಯುವ ಶಿಕ್ಷಣ ಸರ್ಟಿಫಿಕೆಟ್‌ಗೆ ಸೀಮಿತವಾಗದೆ ಅದು ಉದ್ಯೋಗಕ್ಕೆ ಪೂರಕವಾದ ಕೌಶಲ್ಯವನ್ನು ನೀಡಬೇಕು. ಶಿಕ್ಷಣ ಸಂಸ್ಕಾರಗೊಂಡರೆ ಮಾನವ ಉದ್ಯೋಗವಂತನಾಗುತ್ತಾನೆ ಎಂದರು.

ಐಕ್ಯೂಎಸಿ ಸಂಚಾಲಕ ಡಾ.ಬಸವರಾಜ ಬೀಳಗಿ ಸ್ವಾಗತಿಸಿದರು. ಡಾ.ಚಂದ್ರಶೇಖರ ಕಾಳನ್ನವರ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಅಂತಿಮ ವರ್ಷದ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಮಗುವಿನ ಆರೋಗ್ಯಪೂರ್ಣ ಬೆಳವಣಿಗೆಗೆ ಗರ್ಭಸಂಸ್ಕಾರ ಅಗತ್ಯ




**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.17-ಗರ್ಭಧಾರಣೆ ಕೇವಲ ಜೈವಿಕ ಪ್ರಕ್ರಿಯೆಯಲ್ಲ, ಅದು ದೈವಿಕ ಗೌರವವಾಗಿದ್ದು, ಮಗುವಿನ ಆರೋಗ್ಯಪೂರ್ಣ ಬೆಳವಣಿಗೆಗೆ ಗರ್ಭಸಂಸ್ಕಾರ ಅಗತ್ಯವಾಗಿದೆ ಎಂದು ದೆಹಲಿಯ ಎನ್.ಸಿ.ಐ.ಎಸ್.ಎಮ್ ಅಧ್ಯಕ್ಷ ಡಾ.ಸಿದ್ದಲಿಂಗೇಶ ಕುದರಿ ಹೇಳಿದರು.

ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಆಸ್ಪತ್ರೆ, ಸ್ತ್ರೀರೋಗ ಹಾಗೂ ಪ್ರಸೂತಿ ತಂತ್ರ ವಿಭಾಗ ಮತ್ತು ಸ್ವಸ್ಥ ವೃತ್ತ ಹಾಗೂ ಯೋಗ ವಿಭಾಗದಿಂದ ಮಂಗಳವಾರ ನೂತನ ಸಭಾಭವನದಲ್ಲಿ ಹಮ್ಮಿಕೊಂಡ ಆಯುರ್ವೇದದ ಗರ್ಭಸಂಸ್ಕಾರ ರಾಜ್ಯಮಟ್ಟದ ಕಾರ್ಯಾಗಾರದಲ್ಲಿ ವಿಶೇಷ ಸಂಪನ್ಮೂಲ ವ್ಯಕ್ತಿಗಳಾಗಿ ವರ್ಚುವಲ್ ಮಿಟಿಂಗ್ ಮೂಲಕ ಅವರು ಮಾತನಾಡಿದರು.

ಗರ್ಭಸಂಸ್ಕಾರವು ಆಯುರ್ವೇದದ ಅಭ್ಯಾಸವಾಗಿದ್ದು, ಇದು ಗರ್ಭಾವಸ್ಥೆಯಲ್ಲಿ ತಾಯಿಯ ಮನಸ್ಸು, ದೇಹ ಮತ್ತು ಚೈತನ್ಯವನ್ನು ಸಮನ್ವಯಗೊಳಿಸುವುದರ ಮೇಲೆ ಕೇಂದ್ರೀಕರಿಸುತ್ತದೆ. ಇದು ಮಗುವಿನ ದೈಹಿಕ, ಮಾನಸಿಕ ಮತ್ತು ಭಾವನಾತ್ಮಕ ಬೆಳವಣಿಗೆಯ ಮೇಲೆ ಸಕಾರಾತ್ಮಕ ಪ್ರಭಾವ ಬೀರುತ್ತದೆ. ಗರ್ಭಿಣಿಯು ಗರ್ಭಾವಸ್ಥೆಯಲ್ಲಿ ಪಾಲಿಸಬೇಕಾದ ಪೌಷ್ಟಿಕ ಸಮತೋಲನ ಅಹಾರ, ಮಾನಸಿಕ ಸಮತೋಲನಗೆ ಅವಶ್ಯವಿರುವ ಧ್ಯಾನ, ಮುದ್ರಾ, ಮಂತ್ರ, ಆಸನ, ಸಂಗೀತ ಹಾಗೂ ಗರ್ಭಸಂವಾದ ವಿಷಯಗಳ ಅರಿವು ಅಗತ್ಯವಾಗಿದೆ ಎಂದು ಡಾ.ಕುದರಿ ಹೇಳಿದರು. ಕಾರ್ಯಕ್ರಮ ಉದ್ಘಾಟಿಸಿದ ಪ್ರಭಾರಿ ಪ್ರಾಚಾರ್ಯ ಡಾ.ಎಮ್.ಎಸ್.ಹಿರೇಮಠ ಮಾತನಾಡಿ, ಗರ್ಭಸಂಸ್ಕಾರ 'ಅಂಕುರಂ' ಎಂಬ ಈ ಅರ್ಥಪೂರ್ಣ ವಿಷಯದೊಂದಿಗೆ, ಗರ್ಭಸಂಸ್ಕಾರವು ಜೀವನವನ್ನು ಅದರ ಮೂಲದಿಂದಲೇ ಹೇಗೆ ಪೋಷಿಸಬಹುದು ಎಂಬುದನ್ನು ಸಂಪೂರ್ಣವಾಗಿ ಅನ್ವೇಷಿಸುವ ಮತ್ತು ಚಿಂತಿಸುವ ಜೊತೆಗೆ ಪಾಲಿಸಬೇಕಾದ ವಿಷಯಗಳನ್ನು ಅವಲೋಕಿಸುವುದಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕಾರ್ಯಕ್ರಮದ ಸಂಯೋಜಕಿ ಡಾ.ವೀಣಾ ಪತ್ತಾರ, ಕಾರ್ಯಾಗಾರದಲ್ಲಿ ಗರ್ಭಾವಸ್ಥೆಯಲ್ಲಿನ ತಾಯಿಯ ಆಲೋಚನಾ ಪ್ರಕ್ರಿಯೆ, ಜೀವನಶೈಲಿ ಮತ್ತು ಪರಿಸರ ಅಂಶಗಳು ಮಗುವಿನ ಬೆಳವಣಿಗೆಯ ಮೇಲೆ ಹೇಗೆ ಆಳವಾದ ಪರಿಣಾಮ ಬೀರಬಲ್ಲವು, ಆರೋಗ್ಯದ ಮೌಲ್ಯಗಳು ಮತ್ತು ವ್ಯಕ್ತಿತ್ವದ ಬಗ್ಗೆ ಉಪನ್ಯಾಸಗಳು ನಡೆಯಲಿದ್ದು, ರಾಜ್ಯದ ವಿವಿಧ ಕಾಲೇಜುಗಳಿಂದ 350ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದಾರೆ ಎಂದರು.

ಸ್ತ್ರೀರೋಗ ಹಾಗೂ ಪ್ರಸೂತಿ ತಂತ್ರ ವಿಭಾಗದ ಮುಖ್ಯಸ್ಥ ಡಾ. ಶಿವಕುಮಾರ ಪಾಟೀಲ, ಡಾ.ಸುಜಾತಾ ಬಿರಾದಾರ ಡಾ.ಶ್ವೇತಾ ಮಾಶ್ಯಾಳ, ಡಾ.ಜಲೀನ ಗೂರ್ಗಿ, ಡಾ.ರಾಜಕುಮಾರ ಜಂಬಗಿ, ಡಾ.ಯು.ಎಸ್.ಚೌಧರಿ ಸೇರಿದಂತೆ ಅನೇಕರು ಇದ್ದರು. ಡಾ.ಜಿ.ಎಸ್. ಕುಲಕರ್ಣಿ ಹಾಗೂ ಮಹಾಲಕ್ಷ್ಮೀ ಹಿರೇಮಠ ಪ್ರಾರ್ಥಿಸಿದರು. ಡಾ.ಸುಜಾತಾ ಸ್ವಾಗತಿಸಿದರು. ಡಾ.ಸುಮಿತಾ ವಂದಿಸಿದರು. ಡಾ.ಚೈತ್ರಾ ನಿರೂಪಿಸಿದರು.

ತೇರದಾಳದ ಜಿಎಮ್‌ಸಿ ಕಾಲೇಜಿನ ಸ್ತ್ರೀರೋಗ ಹಾಗೂ ಪ್ರಸೂತಿ ತಂತ್ರ ವಿಭಾಗದ ಮುಖ್ಯಸ್ಥೆ ಡಾ.ಭಾರತಿ ಕುಂಬಾರ ಹಾಗೂ ಸ್ವಸ್ಥವೃತ್ತ ಹಾಗೂ ಯೋಗ ವಿಭಾಗದ ಸಹ ಅದ್ಯಾಪಕಿ ಡಾ.ಸೌಭಾಗ್ಯ ಮಠಪತಿಯವರು ಗರ್ಭಾವಸ್ಥೆಯಲ್ಲಿ ಪಾಲಿಸಬೇಕಾದ ಅಂಶಗಳ ಬಗ್ಗೆ ಉಪನ್ಯಾಸ ನೀಡಿದರು.

# ಪ್ರಜಾಪ್ರಭುತ್ವದ ಮೌಲ್ಯ ರೂಢಿಸಿಕೊಳ್ಳಿ : ಡಾ. ನಿಟ್ಟೂರ




**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.17-ಭಾರತದ ಪ್ರಜೆಗಳಾದ ನಮಗೆ ಪ್ರಜಾಪ್ರಭುತ್ವದ ಸಂಪೂರ್ಣ ಅರಿವು ಇರಬೇಕಾದುದು ಮುಖ್ಯ, ಹೀಗಾಗಿ ಮೊದಲು ನಾವು ಸಂವಿಧಾನವನ್ನು ಓದಿ ಅರ್ಥೈಸಿಕೊಂಡು, ಪ್ರಜಾಪ್ರಭುತ್ವ ಮೌಲ್ಯ ರೂಢಿಸಿಕೊಳ್ಳಬೇಕು ಎಂದು ಜಮಖಂಡಿ ಕಾಲೇಜಿನ ಉಪಪ್ರಾಚಾರ್ಯ ಡಾ.ಡಿ.ಎಸ್.ನಿಟ್ಟೂರ ಹೇಳಿದರು.

ಜಿಲ್ಲೆಯ ಜಮಖಂಡಿ ನಗರದ ಬಿಎಲ್‌ಡಿಇ ಸಂಸ್ಥೆಯ ವಾಣಿಜ್ಯ ಬಿಎಚ್‌ಎಸ್ ಕಲೆ ಮತ್ತು ಟಿಜಿಪಿ ವಿಜ್ಞಾನ ಮಹಾವಿದ್ಯಾಲಯದ ಸಭಾಂಗಣದಲ್ಲಿ ಮಂಗಳವಾರ ಐಕ್ಯುಎಸಿ ಮತ್ತು ರಾಜ್ಯಶಾಸ್ತ್ರ ವಿಭಾಗದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಾಧ್ಯಾಪಕ, ಎಸ್.ಐ.ಬಿರಾದರ ಮಾತನಾಡಿ, ದೇಶಕ್ಕೆ ಡಾ.ಬಿ.ಆರ್. ಅಂಬೇಡ್ಕರ್ ನೀಡಿದ ಸಂವಿಧಾನದ ಆಧಾರದಲ್ಲಿ ಆಡಳಿತ ಯಂತ್ರ ನಡೆ-ಯುತ್ತಿದೆ. ಎಲ್ಲರಿಗೂ ಸಮಾನ ಹಕ್ಕುಗಳೊಂದಿಗೆ ಕೆಲ ಕರ್ತವ್ಯಗಳನ್ನು ನೀಡಿದೆ. ನಾವು ನಮ್ಮ ಕರ್ತವ್ಯ ನಿಭಾಯಿಸಿದಾಗ ಮಾತ್ರ ಸಮಾನತೆ ಬರುತ್ತದೆ ಎಂದು ಹೇಳಿದರು.

ಪ್ರೊ.ಮಲ್ಲಿಕಾರ್ಜುನ ಬಿ. ಮಾತನಾಡಿ, ಮತದಾನ ಮದ್ದು-ಗುಂಡಿಗಿಂತ ಬಲಾಢ್ಯವಾಗಿದೆ. ಆದ್ದರಿಂದ ಪ್ರತಿಯೊಬ್ಬ ಪ್ರಜೆಯು ಮತದಾನದಲ್ಲಿ ಭಾಗವಹಿಸಬೇಕು ಎಂದರು. ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು ಉಪಸ್ಥಿತರಿದ್ದರು. ಉತ್ತಮ ಕಾಂಬಳೆ ಪ್ರತಿಜ್ಞಾವಿಧಿ ಬೋಧಿಸಿದರು. ನಾಗಪ್ಪ ಕಲ್ಲಟ್ಟಿ ಸ್ವಾಗತಿಸಿದರು. ಪರಶುರಾಮ ಭಜಂತ್ರಿ ನಿರೂಪಿಸಿ ವಂದಿಸಿದರು.

# ದೌರ್ಜನ್ಯ ಕಾಯ್ದೆಯ ಬಗ್ಗೆ ಅರಿವು ಮೂಡಿಸಲು ಸೂಚನೆ ಕಾಮಗಾರಿಗಳಲ್ಲಿ ವಿಳಂಬ ನೀತಿ ಸಲ್ಲದು : ಮೊಹಸಿನ್



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.17-ವಿವಿಧ ಇಲಾಖೆಗಳಡಿ ಕೈಗೊಂಡ ಕಟ್ಟಡ ಕಾಮಗಾರಿಗಳಿಗೆ ವಿಳಂಬ ನೀತಿ ಅನುಸರಿಸದೇ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಕ್ರಮಕೈಗೊಳ್ಳುವಂತೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಆಗಿರುವ ಜಿ.ಪಂ ಆಡಳಿತಾಧಿಕಾರಿ ಮೊಹಮ್ಮದ ಮೊಹಸಿನ್ ಅಧಿಕಾರಿಗಳಿಗ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಬುಧವಾರ ಜರುಗಿದ ದ್ವಿತೀಯ ಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯಾವುದೇ ಕಟ್ಟಡ ಕಾಮಗಾರಿ ಕೈಗೆತ್ತಿಕೊಂಡಾಗ ಬಿಡುಗಡೆಯಾದ ಅನುದಾನದಿಂದ ಕಾಮಗಾರಿ ಕೈಗೊಂಡು ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಮುಂದಿನ ಕಂತು ಅನುದಾನ ಬಿಡುಗಡೆಯಾಗುವವರೆಗೆ ಕಾಮಗಾರಿ ಅಷ್ಟಕ್ಕೆ ಬಿಡುವಂತಿಲ್ಲ. ಆ ಕಾಮಗಾರಿ ಮುಂದುವರಿಸಲು ಕ್ರಮಕೈಗೊಳ್ಳಬೇಕೆಂದು ನಿರ್ಮಿತಿ ಹಾಗೂ ಕೆ.ಐ.ಆರ್.ಡಿ.ಎಲ್ ಅಧಿಕಾರಿಗಳಿಗೆ ಸೂಚಿಸಿದರು.

ಆರೋಗ್ಯ ಇಲಾಖೆಗೆ ಸಂಬಂಧಿಸಿದಂತೆ ತಾಲೂಕಾ ಆಸ್ಪತ್ರೆಗಳಲ್ಲಿ ಎ.ಆರ್.ಟಿ. ಮೆಡಿಷಿನ್ ಲಭ್ಯವಿರುವಂತೆ ಕ್ರಮವಹಿಸಬೇಕು. ಅನಾವಶ್ಯಕವಾಗಿ ಖಾಸಗಿ ಆಸ್ಪತ್ರೆಗಳಲ್ಲಿ ಸಿಜಿರಿನ್ ಹೆರಿಗೆ ಮಾಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಿ ಇಲ್ಲವೇ ನೋಂದಣಿ ರದ್ದುಪಡಿಸಲು ತಿಳಿಸಿದರು. ನವನಗರ, ಇಳಕಲ್ಲ ಹಾಗೂ ಜಮಖಂಡಿ ಬಸ್ ನಿಲ್ದಾಣದಲ್ಲಿ ನಮ್ಮ ಕ್ಲಿನಿಕ್ ಪ್ರಾರಂಭಿಸಲು ಬಾಡಿಗೆ ಕಟ್ಟಡ ಗುರುತಿಸಿ ಪ್ರಾರಂಭಿಸಲು ಸೂಚನೆ ನೀಡಿದರು. ಜಿಲ್ಲೆಯಲ್ಲಿ ಆಹಾರ ಸುರಕ್ಷತೆ ಬಗ್ಗೆ ಎಸ್.ಎಸ್.ಐನಲ್ಲಿ ಕಡ್ಡಾಯವಾಗಿ ನೋಂದಣಿಗೆ ಕ್ರಮಕೈಗೊಳ್ಳಲು ತಿಳಿಸಿದರು.

ಶಾಲಾ ಕಟ್ಟಡ ಜಾಗಕ್ಕೆ ಸಂಬಂಧಿಸಿದಂತೆ ಬಾದಾಮಿ ತಾಲೂಕಿನ ಕಲ್ಲಾಪೂರ ಎಸ್.ಕೆ ಗ್ರಾಮದಲ್ಲಿ ಉನ್ನತೀಕರಿಸಿದ ಪ್ರೌಢಶಾಲೆಯ ಜಾಗೆ ಹಸ್ತಾಂತರವಾಗಿದ್ದು, ಆಡಳಿತಾತ್ಮಕ ಅನುಮೋದನೆ ಕಾರ್ಯ ಪ್ರಗತಿಯಲ್ಲಿರುವುದಾಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಸಭೆಗೆ ತಿಳಿಸಿದಾಗ ಅನುಮೋದನೆ ಪತ್ರ ಬರೆದರೆ ಸಾಲದು ಅನುಮೋದನೆ ಪಡೆದು ಕಾಮಗಾರಿ ಪ್ರಾರಂಭಕ್ಕೆ ಮುಂದಾಗಬೇಕು. ಕಳೆದ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದ 69 ಮಕ್ಕಳನ್ನು ಹುಡುಕಿ ಶಾಲೆಗೆ ದಾಖಲು ಮಾಡಲು ಸಂಬಂಧಿಸಿದ ಶಾಲಾ ಮುಖ್ಯೋಪಾದ್ಯಾಯರಿಗೆ ಸೂಚಿಸಲು ಮೊಹಸಿನ್ ತಿಳಿಸಿದರು.

ಕ್ರೀಡಾ ಇಲಾಖೆಗೆ ಸಂಬಂಧಿಸಿದಂತೆ ಬಾದಾಮಿ ತಾಲೂಕಿನಲ್ಲಿ ಸುಸಜ್ಜಿತ ಕ್ರೀಡಾಂಗಣವನ್ನು ನಿರ್ಮಿಸಲು 4.92 ಹೆಕ್ಟೆರ್ ನಿವೇಶನ ಪಡೆಯಲು ಅರಣ್ಯ ಇಲಾಖೆಯಿಂದ ನಿರಪೇಕ್ಷಣಾ ಪತ್ರವನ್ನು ನೀಡುವಂತೆ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲಾಗಿದೆ. ಅರ್ಜಿ ಅರಣ್ಯ ಇಲಾಖೆಯ ತಾಂತ್ರಿಕ ಪರಿಶೀಲನೆ ಹಂತದಲ್ಲಿರುವುದಾಗಿ ಗುರುಪಾದ ಡೂಗನವರ ಸಭೆಗೆ ತಿಳಿಸಿದರು.

ಹೊಸ ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ಈಗಾಗಲೇ ಗ್ರಾಮೀಣ ಪ್ರದೇಶದಲ್ಲಿ 90, ನಗರ ಪ್ರದೇಶದಲ್ಲಿ 78 ನಿವೇಶನ ಹಾಗೂ ಸಿಎ ಸೈಟ್‌ನಗಳ ಪಟ್ಟಿಯನ್ನು ಪ್ರಧಾನ ಕಚೇರಿಗೆ ಸಲ್ಲಿಸಿದ್ದಿರಿ. ಆದರೆ ನಿವೇಶನ ಖರೀದಿಗೆ ತಗಲುವ ಅನುದಾನ ಮಂಜುರಾತಿಗೆ ಕ್ರಮಕೈಗೊಳ್ಳಬೇಕು. ಕೌಟುಂಬಿಕ ದೌರ್ಜನ್ಯದಡಿ ಒಟ್ಟು 101 ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 25 ಮಾತ್ರ ಇತ್ಯರ್ಥಗೊಂಡಿವೆ. ಇಲಾಖೆಯ ವಿಚಾರಣಾ ಹಂತದಲ್ಲಿರುವ 72 ಪ್ರಕರಣಗಳು ಬಾಕಿ ಉಳಿದಿವೆ. ಕೌಟುಂಬಿಕ ದೌರ್ಜನ್ಯ ಕಾಯ್ದೆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯವಾಗಬೇಕು ಎಂದು ಜಿ.ಪಂ ಆಡಳಿತಾಧಿಕಾರಿಗಳು ತಿಳಿಸಿದರು.

ಕೃಷಿ, ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಗೆ ಸಂಬಂಧಿಸಿದಂತೆ ಮಳೆಯಿಂದ ಹಾನಿಗೊಳಗಾದ ಬೆಳೆ ಹಾನಿಗಳ ಮಾಹಿತಿಯನ್ನು ಪಡೆದುಕೊಂಡರು. ಈಗಾಗಲೇ ಬೆಳೆ ಹಾನಿ ಕುರಿತು ಜಂಟಿ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ಅಂದಾಜು 27 ಸಾವಿರ ಹೆಕ್ಟೆರ್ ಪ್ರದೇಶ ಹಾನಿಯಾಗಿದ್ದು, ಶೇ.86 ರಷ್ಟು ಸಮೀಕ್ಷೆಯಾಗಿದೆ. ಸಮೀಕ್ಷೆ ಪೂರ್ಣಗೊಂಡ ನಂತರ ಪರಿಹಾರದ ಪೋರ್ಟಲ್‌ನಲ್ಲಿ ಅಪಲೋಡ್ ಮಾಡಲಾಗುವುದೆಂದು ಸಭೆಗೆ ತಿಳಿಸಲಾಯಿತು. ನಂತರ ಇತರೆ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿ.ಪಂ ಉಪಕಾರ್ಯದರ್ಶಿ ಎನ್. ವಾಯ್.ಬಸರಿಗಿಡದ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಸೆ.20 ಬಾಗಲಕೋಟೆಯಲ್ಲಿ ಮ್ಯಾರಾಥಾನ್ ಸ್ಪರ್ಧೆ

**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.17- ಯುವಜನೋತ್ಸವ-2025ರ ಅಂಗವಾಗಿ 17 ರಿಂದ 25 ವಯಸ್ಸಿನ ಪದವಿ, ಸ್ನಾತಕೋತ್ತರ, ವೃತ್ತಿಪರ ಕಾಲೇಜುಗಳ ವಿದ್ಯಾರ್ಥಿಗಳಿಗೆ ಸೆಪ್ಟೆಂಬರ 20 ರಂದು ಬೆಳಿಗ್ಗೆ 7.30 ಗಂಟೆಗೆ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ಜಿಲ್ಲಾ ಮಟ್ಟದ ಮ್ಯಾರಾಥಾನ್ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ.

ರಾಜ್ಯ ಏಡ್ಸ್ ಪ್ರವೆನ್‌ಷನ್ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕ, ಕ್ರೀಡಾ ಇಲಾಖೆ ಹಾಗೂ ರೆಡ್ ರಿಬ್ಬನ್ ಕ್ಲಬ್‌ಗಳ ಸಹಯೋಗದಲ್ಲಿ ಮ್ಯಾರಥಾನ್ ಸ್ಪರ್ಧೆ ನಡೆಯಲಿದೆ.

ಪ್ರಥಮ 5 ಸಾವಿರ, ದ್ವಿತೀಯ 3500 ರೂ., ತೃತೀಯ 2500 ರೂ. ನಗದು ಬಹುಮಾನ ಹಾಗೂ ಮೆಡಲ್ ಒಳಗೊಂಡಿದ್ದು, ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಬಹುಮಾನ ನೀಡಲಾಗುತ್ತದೆ. ಸ್ಪರ್ಧಾಳುಗಳು ಆನ್‌ಲೈನ್ ಲಿಂಕ್‌ನಲ್ಲಿ ತಮ್ಮ ಹೆಸರನ್ನು ಸೆಪ್ಟೆಂಬರ 19 ರೊಳಗಾಗಿ ನೋಂದಣಿ ಮಾಡಿಕೊಳ್ಳುವಂತೆ ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕದ ಪ್ರಕಟಣೆ ತಿಳಿಸಿದೆ.

# ಮಂಜುನಾಥ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ ಯಲಬುರ್ಗಾದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ

**ಮಲ್ಲಮ್ಮ ನುಡಿ ವಾರ್ತೆ**

ಕೊಪ್ಪಳ : ಜಿಲ್ಲೆ ಯಲಬುರ್ಗಾ ತಾಲೂಕಿನ ಮಂಜುನಾಥ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ ಯಲಬುರ್ಗಾದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯನ್ನು ಆಚರಿಸಲಾಯಿತು. ಸಂಸ್ಥೆಯ ಅಧ್ಯಕ್ಷರಾದ ಶೇಖರಗೌಡ್ರು ಉಳ್ಳಾಗಡ್ಡಿ ಧ್ವಜಾರೋಹಣವನ್ನು ನೆರವೇರಿಸಿ 1947 ಆಗಸ್ಟ್ 15 ರಂದು ಭಾರತ ದೇಶಕ್ಕೆ ಸ್ವಾತಂತ್ರ್ಯ ಲಭಿಸಿದರು ಕಲ್ಯಾಣ ಕರ್ನಾಟಕ್ಕೆ ಸ್ವಾತಂತ್ರ್ಯ ಲಭಿಸಲಿಲ್ಲ ನಿಜಾಮನ ಕಪಿಮುಷ್ಠಿಯಲ್ಲಿ ಸಿಲುಕಿ ಸಾಕಷ್ಟು ನೋವನ್ನ ಅನುಭವಿಸಿ ಜನ ರೊಚ್ಚಿಗೆದ್ದರು ಮುರಡಿಯ ಬೀಮಜ್ಜ ಪ್ರಭುರಾಜ್ ಪಾಟೀಲ್ ದೇವೇಂದ್ರಕುಮಾರ ಹಕಾರಿ ಅನೇಕ ಮಹನೀಯರು ಮನೆಮಠಗಳನ್ನು ಬಿಟ್ಟು ಹೋರಾಟಕ್ಕಿಳಿದರು ಅನೇಕ ವಿದ್ಯಾರ್ಥಿಗಳು ಶಾಲಾ ಕಾಲೇಜುಗಳನ್ನು ತ್ಯಜಿಸಿ ತಮ್ಮ ಜೀವನವನ್ನು ಲೆಕ್ಕಿಸದೆ ನಿಜಾಮನ ವಿರುದ್ಧ ಹೋರಾಟ ಮಾಡಿದರು ಸರ್ದಾರ್ ವಲ್ಲಬಾಯ್ ಪಟೇಲ್ ಅವರ ಚಾಣಾಕ್ಷತನದಿಂದ ನಿಜಾಮನು ಭಾರತದ ಒಕ್ಕೂಟಕ್ಕೆ ಸೇರ್ಪಡೆಯಾದನು ಎಂದು ಹೇಳಿದರು. ಗಂಗಾಧರ ದಪೇದ ಪ್ರಾಚಾರ್ಯರು 371 ಜೆ ಸವಲತ್ತುಗಳನ್ನು ಕುರಿತು ಮಾತನಾಡಿದರು ವೇದಿಕೆಯ ಮೇಲೆ ಡಾ. ಬಿವಿಟಿಗೆ ನಿರ್ದೇಶಕರು ಉಪಸ್ಥಿತರಿದ್ದರು ಸುಭಾಷ್ ಎಸ್ ಹೊಂಬಾಳ ಅಧ್ಯಕ್ಷತೆ ವಹಿಸಿದ್ದರು ಕಾರ್ಯಕ್ರಮದಲ್ಲಿ ಮಂಜುನಾಥ ಅಕ್ಕಸಾಲಿಗರ ಮುಖೋಪಾಧ್ಯಾಯರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿಗೆ ಪ್ರತ್ಯೇಕ ಸಚಿವಾಲಯ ಮುಖ್ಯಮಂತ್ರಿಗಳಿಂದ ಘೋಷಣೆ: ಸಚಿವ ಶರಣಬಸಪ್ಪ ದರ್ಶನಾಪುರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಸೆ:17: ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿಗಾಗಿ ಪ್ರತ್ಯೇಕ ಸಚಿವಾಲಯ ಸ್ಥಾಪಿಸಲು ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿದ್ದಾರೆ

ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ಹೇಳಿದರು.

ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ವಿವಿಧ ಕವಾಯತು ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿಗೆ ಇನ್ನಷ್ಟು ವೇಗ ನೀಡಲು ಹಾಗೂ ಮೇಲುಸ್ತುವಾರಿ ನೋಡಿಕೊಳ್ಳುವ ಉದ್ದೇಶದಿಂದ, ಪ್ರತ್ಯೇಕ ಸಚಿವಾಲಯ ಸ್ಥಾಪಿಸಲು ಸಚಿವ ಸಂಪುಟದಲ್ಲಿ ನಿರ್ಣಯ ಕೈಗೊಂಡು,ಈ ಕುರಿತು ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿದ್ದಾರೆ ಎಂದು ಹೇಳಿದರು.

ಕೃಷ್ಣ ಮೇಲ್ದಂಡೆ ಯೋಜನೆಯ (ಯುಕೆಪಿ). ಮೂರನೇ ಹಂತದ ಭೂ ಸ್ವಾಧೀನಕ್ಕೆ ರಾಜ್ಯ ಸರ್ಕಾರ ಪರಿಹಾರ ನಿಗದಿಮಾಡಿದೆ.

ಅದರಂತೆ ಆಲಮಟ್ಟಿ ಜಲಾಶಯ 519 .ಮೀ ರಿಂದ 524 ಮೀ.ಗೆ ಎತ್ತರಿಸುವದರಿಂದ, ಎರಡೂವರೆ ಲಕ್ಷ ಎಕರೆ ಜಮೀನು ನೀರಾವರಿಗೆ ಒಳಪಡಲಿದೆ. ಮುಳುಗಡೆಯಾಗುವ 75,563 ಎಕರೆ ಪ್ರದೇಶದಲ್ಲಿ ರೈತರ ನೀರಾವರಿ ಭೂಮಿಗೆ ಕನಿಷ್ಠ 40 ಲ.ರೂ ಪ್ರತಿ ಎಕರೆಗೆ ಹಾಗೂ ಒಣ ಭೂಮಿಗೆ ಎಕರೆಗೆ 30 ಲ. ರೂ. ಪಾವತಿಸಲು ಸರ್ಕಾರ ನಿರ್ಧರಿಸಿದೆ ಎಂದು ಹೇಳಿದರು.

ಈಗಿನ ಕಲ್ಯಾಣ ಕರ್ನಾಟಕ ಭಾಗವು ಭಾರತ ಸ್ವಾತಂತ್ರ್ಯ ದ ನಂತರ ಒಂದು ವರ್ಷ,ಒಂದು ತಿಂಗಳು ಎರಡು ದಿನಗಳ ನಂತರ ವಿಳಂಬವಾಗಿಸ್ವಾತಂತ್ರ್ಯಪಡೆದಿದೆ.ಪ್ರಧಾನಿ ನೆಹರು ಅವರ ಸಂದರ್ಭದಲ್ಲಿ ಗೃಹ ಸಚಿವರಾಗಿದ್ದ ಸರ್ದಾರ್ ವಲ್ಲಭಭಾಯ್ ಪಟೇಲ್ "ಆಪರೇಶನ್ ಪೋಲೋ" ಮೂಲಕ ಭಾರತದ ಒಕ್ಕೂಟಕ್ಕೆ ಆಗಿನ ಹೈದರಾಬಾದ್ ಕರ್ನಾಟಕಭಾಗವನ್ನುಸೇರಿಸಲಾಯಿತು ಎಂದರು.

ಹೈದರಾಬಾದ್– ಕರ್ನಾಟಕ ವಿಮೋಚನಾ ಮುಂಚೂಣಿ ಹೋರಾಟಗಾರರಾಗಿದ್ದ ರಮಾನಂದ ತೀರ್ಥರು,ಶರಣಗೌಡಇನಾಮದಾರ,ಸಾಗರದ ಅಚ್ಚಪ್ಪಗೌಡ ಸುಬೇದಾರ್,ಸುರಪುರದ ರಾಜಾ ವೆಂಕಟಪ್ಪ ನಾಯಕ ಇತರೆ ಹೋರಾಟಗಾರರುಸ್ಮರಣೀಯರಾಗಿದ್ದಾರೆ ಎಂದು ಹೇಳಿದರು.



ಸರ್ಕಾರವು ನಂಜುಂಡಪ್ಪ ವರದಿ ಅನ್ವಯ ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಒದಗಿಸಿದೆ. ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿ ಹಾಗೂ ಸಂವಿಧಾನ ತಿದ್ದುಪಡಿ,ಕಲಂ 371 ( ಜೆ) ರನ್ವಯ ಈ ಭಾಗದ ಅಭಿವೃದ್ಧಿಗೆ 5000 ಕೋ.ರೂಗಳನ್ನು ಒದಗಿಸಿದೆ ಎಂದು ಹೇಳಿದರು.

ಈ ಭಾಗ ಹಳೆ ಮೈಸೂರು ಭಾಗದಂತೆ ಪ್ರಗತಿ ಸಾಧಿಸಬೇಕು.ಇದು ಶಿಕ್ಷಣದ ಕ್ರಾಂತಿಕಾರಿ ಬದಲಾವಣೆಯಿಂದ ಮಾತ್ರ ಸಾಧ್ಯವಿದ್ದು, ಈ ದಿಸೆಯಲ್ಲಿ ಶಿಕ್ಷಕರು ಹಾಗೂ ಪಾಲಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸಬೇಕು. ರಾಜ್ಯ ಸರ್ಕಾರವು ಕೂಡ ಶಿಕ್ಷಣ , ನೀರಾವರಿ, ಆರೋಗ್ಯ, ಮೂಲಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಗಮನ ನೀಡಿದೆ.ಈ ದಿಸೆಯಲ್ಲಿ ಈಗ ಪ್ರತ್ಯೇಕ ಸಚಿವಾಲಯ ಸ್ಥಾಪಿಸಲು ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿದ್ದಾರೆ

ಎಂದು ಹೇಳಿದರು.

ಸಚಿವರು ಈ ಸಂದರ್ಭದಲ್ಲಿ ಮಹಾತ್ಮ ಗಾಂಧೀಜಿ,ಡಾ..ಬಿ.ಆರ್ ಅಂಬೇಡ್ಕರ್ ಹಾಗೂ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ, ಪುಷ್ಪಾರ್ಚನೆ ಮಾಡಿ ಗೌರವ ಅರ್ಪಿಸಿದರು.

ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.ಸ್ವಚ್ಛ ಭಾರತ ಹಿ ಸೇವಾ ಅಭಿಯಾನಕ್ಕೆ,ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನಕ್ಕೆ ಚಾಲನೆ ನೀಡಲಾಯಿತು.ಸ್ವಚ್ಛತೆ ಕುರಿತು ಯುವ ಜನಸೇವಾ ಹಾಗೂ ಕ್ರೀಡಾಧಿಕಾರಿ ರಾಜು ಬಾವಿಹಳ್ಳಿ ಪ್ರತಿಜ್ಞಾ ವಿಧಿ ಬೋಧಿಸಿದರು. ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ಛಲವಾದಿ ಟಿ ನಾರಾಯಣ್ ಸ್ವಾಮಿ, ಸಂಸದ ಜಿ.ಕುಮಾರ್ ನಾಯಕ್,

ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ, ನಗರಸಭೆ ಅಧ್ಯಕ್ಷ ಲಲಿತಾ ಅನಪುರ್,

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬುರಾವ್ ಕಾಡ್ಲೂರ್, ಜಿಲ್ಲಾಧಿಕಾರಿ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್,ಅಪರ್ ಜಿಲ್ಲಾಧಿಕಾರಿ ರಮೇಶ ಕೋಲಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗಣ್ಯರು ಉಪಸ್ಥಿತರಿದ್ದರು.

# ಕಲ್ಯಾಣ ಕರ್ನಾಟಕ ವಿಮೋಚನೆಯ ಇತಿಹಾಸವನ್ನು ಯುವಪೀಳಿಗೆ ಅರಿತುಕೊಳ್ಳಬೇಕು:ಸಚಿವ ಈಶ್ವರ ಬಿ.ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಸೆ.17:ಕಲ್ಯಾಣ ಕರ್ನಾಟಕ ವಿಮೋಚನಾ ಇತಿಹಾಸವನ್ನು ಇಂದಿನ ಯುವ ಜನಾಂಗ ತಪ್ಪದೇ ಅರಿತುಕೊಳ್ಳಬೇಕೆಂದು ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ತಿಳಿಸಿದರು.

ಅವರು ಬುಧವಾರ ಬೀದರ ಜಿಲ್ಲಾಡಳಿತ ವತಿಯಿಂದ ಕಲ್ಯಾಣ ಕರ್ನಾಟಕ ಉತ್ಸವ ಅಂಗವಾಗಿ ಬೀದರ ನೆಹರು ಕ್ರೀಡಾಂಗಣದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಶತಮಾನಗಳಶಾಪ,ದಬ್ಬಾಳಿಕೆಯಿಂದಾಗಿ ನಮ್ಮ ಕಲ್ಯಾಣ ಕರ್ನಾಟಕ ಭಾಗ ಉಳಿದ ಕರ್ನಾಟಕ ಭಾಗಕ್ಕೆ ಹೋಲಿಸಿದರೆ ಅತ್ಯಂತ ಹಿಂದುಳಿದಿದೆ. ಈ ಅಸಮತೋಲನವನ್ನು ನಿವಾರಿಸಲು ನಮ್ಮ ಭಾಗಕ್ಕೆ ಸಂವಿಧಾನದ 371 ವಿಧಿಗೆ ತಿದ್ದುಪಡಿ ತರುವ ಮೂಲಕ ವಿಶೇಷ ಸ್ಥಾನಮಾನ ನೀಡಬೇಕು ಎಂಬುದು ನಮ್ಮ ಭಾಗದ ಜನರ ಬೇಡಿಕೆಯಾಗಿತ್ತು.29–01–2014ರಂದು ಅಂದಿನ ಯು.ಪಿ.ಎ. ಸರ್ಕಾರ ಶ್ರೀಮತಿ ಸೋನಿಯಾಗಾಂಧೀ ಅವರ ಸಲಹೆ ಹಾಗೂ ಅಂದಿನ ಪ್ರಧಾನಿ ಡಾ. ಮನಮೋಹನ ಸಿಂಗ್ ಅವರ ನೇತೃತ್ವದಲ್ಲಿ ಈ ಕನಸನ್ನು ನನಸು ಮಾಡಿತು ಎಂದರು.

ನಮ್ಮ ಭಾಗಕ್ಕೆ ವಿಶೇಷ ಸ್ಥಾನ ಮಾನ ದೊರಕಿಸಲು ಸಂವಿಧಾನಕ್ಕೆ 371(ಜೆ) ತಿದ್ದುಪಡಿ ಮಾಡಲು ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಹೋರಾಡಿದ,ಶ್ರಮಿಸಿದ ಎಲ್ಲರಿಗೂ ನಾನು ಈ ಸಂದರ್ಭದಲ್ಲಿ ಕೃತಜ್ಞತೆ ಸಮರ್ಪಿಸುತ್ತೇನೆ. ಅದರಲ್ಲೂ ವಿಶೇಷವಾಗಿ ಶ್ರೀ ಮಲ್ಲಿಕಾರ್ಜುನ ಖರ್ಗೆಜೀ ಮತ್ತು ದಿವಂಗತ ಮಾಜಿ ಮುಖ್ಯಮಂತ್ರಿ ಧರ್ಮಸಿಂಗ್ ಅವರಿಗೆ ವಂದನೆ ಸಲ್ಲಿಸುತ್ತೇನೆ. ನಮ್ಮ ಸರ್ಕಾರ ಪ್ರತಿ ವರ್ಷ ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ 5 ಸಾವಿರ ಕೋಟಿ ಅನುದಾನ ನೀಡುತ್ತಿದೆ, ಅದರಲ್ಲಿ ಬೀದರ ಅಭಿವೃದ್ಧಿಗೆ 500 ಕೋಟಿ ಹೆಚ್ಚುವರಿ ಅನುದಾನ ಸಿಗುತ್ತಿದೆ ಎಂದರು.

371 ಜೆ ತಿದ್ದುಪಡಿಯಿಂದಾಗಿ ಕಲ್ಯಾಣ ಕರ್ನಾಟಕ ಪ್ರದೇಶ



ನೇಮಕಾತಿಯಲ್ಲಿ ನಮ್ಮ ಭಾಗದ ಯುವಕರಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಮೀಸಲು ಲಭಿಸುತ್ತಿದೆ. ಈ ಹಿಂದೆ ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯನವರು 2013ರಲ್ಲಿ ಇದಕ್ಕೆ ನಿಯಮ ರೂಪಿಸಿ ಜಾರಿಗೆ ತಂದರು. ಕಲ್ಯಾಣ ಕರ್ನಾಟಕ ಭಾಗದಲ್ಲಿನ ಖಾಲಿಸ್ಥಾನಗಳಿಗೆ ನೇಮಕಾತಿ ಮಾಡುವಾಗ ಗ್ರೂಪ್ ಎ ಮತ್ತು ಬಿ ಹುದ್ದೆಯಲ್ಲಿ ಶೇ. 75 ರಷ್ಟು, ಗ್ರೂಪ್ ಸಿ ಹುದ್ದೆಯಲ್ಲಿ ಶೇ. 80 ರಷ್ಟು ಮತ್ತು ಗ್ರೂಪ್ ಡಿ ಹುದ್ದೆಯಲ್ಲಿ ಶೇ. 85 ರಷ್ಟು ಈ ಭಾಗದ ಜನರಿಗೆ ಮೀಸಲಿಡಲಾಗಿದೆ. ಹಾಗೆಯೇ ರಾಜ್ಯದ ಇತರೆ ಭಾಗದ ಜಿಲ್ಲೆಗಳಲ್ಲಿ ನೇಮಕ ಮಾಡುವಾಗ ಶೇ. 8 ರಷ್ಟು ಈ ಮೀಸಲಾತಿಯನ್ನು ನೀಡಲಾಗುತ್ತಿದೆ. ಕಲ್ಯಾಣ ಕರ್ನಾಟಕ ಭಾಗದ ಶಿಕ್ಷಣ ಸಂಸ್ಥೆಗಳಲ್ಲಿ (ವೈದ್ಯಕೀಯ, ಇಂಜಿನೀಯರಿಂಗ್ ಇತ್ಯಾದಿ ಕೋರ್ಸುಗಳಿಗೆ) ಶೇ.70 ರಷ್ಟು ಈ ಭಾಗದ ವಿದ್ಯಾರ್ಥಿಗಳಿಗೆ ಮತ್ತು ರಾಜ್ಯದ ಇತರೆ ಜಿಲ್ಲೆಗಳಲ್ಲಿನ ಶಿಕ್ಷಣ ಸಂಸ್ಥೆಗಳಲ್ಲಿ ಶೇ. 8 ರಷ್ಟು ಮೀಸಲಾತಿಯನ್ನು ಈ ಭಾಗದ ವಿದ್ಯಾರ್ಥಿಗಳಿಗಾಗಿಯೇ ಮೀಸಲಿಡಲಾಗುತ್ತಿದೆ. ಇದರಿಂದ ನಮ್ಮ ಭಾಗದ ಯುವಜನರಿಗೆ ಸೂಕ್ತ ಶಿಕ್ಷಣ, ಉದ್ಯೋಗ ಲಭಿಸುತ್ತಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಮುಂಬರುವ ವರ್ಷದಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿಯುಸಿ ಫಲಿತಾಂಶದಲ್ಲಿ 10% ರಷ್ಟು ಹೆಚ್ಚಳ ಮಾಡುವ ಗುರಿಯನ್ನು ಹೊಂದಲಾಗಿದೆ. ಅಕ್ಷರ ಆವಿಷ್ಕಾರ ಯೋಜನೆಯಡಿಯಲ್ಲಿ ಶಾಲೆಗಳ ಶಿಕ್ಷಣದ ಕೌಶಲ್ಯ ಮಟ್ಟವನ್ನು ಸುಧಾರಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಜಿಲ್ಲೆಯ 30 ಹೋಬಳಿಗಳಲ್ಲೂ ವಸತಿ ಶಾಲೆಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದೆಂದರು.

ಜಿಲ್ಲೆಯಲ್ಲಿ ಅತಿವೃಷ್ಠಿಯಿಂದಾಗಿ 1 ಲಕ್ಷ ಹೇಕ್ಟರ್ ಬೆಳೆ ನಾಶವಾಗಿದ್ದು, ಈಗಾಗಲೇ ಜಂಟಿ ಸಮೀಕ್ಷೆ ನಡೆ–ಯುತ್ತಿದ್ದು, ಸಮೀಕ್ಷೆ ಪೂರ್ಣಗೊಂಡ ನಂತರ ಪರಿಹಾರ ವಿತರಿಸಲಾಗುತ್ತಿದೆ. ಜಿಲ್ಲೆಯಲ್ಲಿ ಹಾನಿಯಾಗಿರುವ ಬಗ್ಗೆ ಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡಿ ಹೆಚ್ಚುವರಿ ಪರಿಹಾರಕ್ಕೆ ಮನವಿ ಮಾಡಲಾಗಿದೆ. ಈಗಾಗಲೇ ಮನೆ ಹಾನಿಗಳಿಗೆ ಪರಿಹಾರ ವಿತರಿಸಲಾಗಿದ್ದು, ರಸ್ತೆ, ಸೇತುವೆಗಳ ಮರು ನಿರ್ಮಾಣಕ್ಕೆ ಕ್ರಮಕೈಗೊಳ್ಳಲಾಗಿದೆ ಎಂದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಬೀದರ ಜಿಲ್ಲೆಯಲ್ಲಿ 2013–14 ರಿಂದ 2024–25 ರವರೆಗೆ 2635.60 ಕೋಟಿ ರೂ. ಮೊತ್ತದಲ್ಲಿ 5076 ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ. 4219 ಕಾಮಗಾರಿಗಳು ಮುಕ್ತಾಯಗೊಂಡಿದ್ದು ಇದಕ್ಕೆ 1952.92 ಕೋಟಿ ರೂ. ವೆಚ್ಚ ಮಾಡಲಾಗಿರುತ್ತದೆ. 450.23 ಕೋಟಿ ಮೊತ್ತದ 648 ಕಾಮಗಾರಿಗಳು ಜಿಲ್ಲೆಯಲ್ಲಿ ಪ್ರಗತಿಯಲ್ಲಿರುತ್ತದೆ. 187.72 ಕೋಟಿ ಮೊತ್ತದ 135 ಕಾಮಗಾರಿಗಳು ಜಿಲ್ಲೆಯಲ್ಲಿ ಪ್ರಾರಂಭವಾಗಬೇಕಾಗಿರುತ್ತದೆ. ಪ್ರಸ್ತುತ 2025–26ನೇ ಸಾಲಿಗೆ ಮಂಡಳಿಯಿಂದ 437.91 ಕೋಟಿಗಳಿಗೆ ಅನುದಾನ ಮಂಜೂರು ಮಾಡಲಾಗಿದ್ದು, ಕ್ರೀಯಾ ಯೋಜನೆ ಸಿದ್ದಪಡಿಸಲು ಶಾಸಕರಿಂದ ಯೋಜನೆ ರೂಪಿಸಲು ತಿಳಿಸಲಾಗಿದ್ದು ಶೀಘ್ರದಲ್ಲಿ ಕ್ರಿಯಾ ಯೋಜನೆ ಸಿದ್ದಪಡಿಸಿ ಅನುಮೋದನೆ ಪಡೆದು ಜಿಲ್ಲೆಗೆ ಅಭಿವೃದ್ಧಿ ಕಾಮಗಾರಿಗಳು ಕೈಗೊಳ್ಳಲಾಗುವುದು ಎಂದರು.

ಬೀದರ ಜಿಲ್ಲೆಯಲ್ಲಿ 2025–26ನೇ ಸಾಲಿನಲ್ಲಿ ಪ್ರಾದೇಶಿಕ ಮತ್ತು ಸಾಮಾಜಿಕ ಅರಣ್ಯ ವಿಭಾಗಗಳಲ್ಲಿ ಒಟ್ಟು 9.00 ಲಕ್ಷ ಸಸಿಗಳನ್ನು ನೆಡುವ ಗುರಿ ಹೊಂದಿದ್ದು ಅದರಲ್ಲಿ ಈಗಾಗಲೇ 7.00 ಲಕ್ಷ ಸಸಿಗಳನ್ನು ಜಿಲ್ಲೆಯ ವಿವಿಧ ಅರಣ್ಯ ಮತ್ತು ಅರಣ್ಯತರ ಪ್ರದೇಶಗಳಲ್ಲಿ ನೆಡಲಾಗಿರುತ್ತದೆ. 2026–27ನೇ ಸಾಲಿನಲ್ಲಿ ವಿವಿಧ ಅರಣ್ಯ ಮತ್ತು ಅರಣ್ಯತರ ಪ್ರದೇಶಗಳಲ್ಲಿ ನೆಡುತೋಪು ನಿರ್ಮಾಣ ಮಾಡಲು ಪ್ರಸ್ತುತ ಸಾಲಿನಲ್ಲಿ 8.00 ಲಕ್ಷ ಸಸಿಗಳನ್ನು ಬೆಳೆಸುವ ಗುರಿ ನಿಗಧಿಪಡಿಸಲಾಗಿದೆ. ಹೊನ್ನಿಕೇರಿ ಮೀಸಲು ಅರಣ್ಯ ಮತ್ತು ಇತರೆ ಜೀವವೈವಿಧ್ಯ ಪ್ರದೇಶಗಳಲ್ಲಿ ಪರಿಸರ ಪ್ರವಾಸೋದ್ಯಮ ಮತ್ತು ಸಂರಕ್ಷಣಾತ್ಮಕ ಕಾರ್ಯಕ್ರಮಗಳಿಗಾಗಿ ರೂ. 15.00 ಕೋಟಿಗೆ ಆಡಳಿತಾತ್ಮಕ ಅನುಮೋದನೆ ಪಡೆಯಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿರುತ್ತದೆಂದರು.

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಬಡ ಜನರ ಜೀವನ ಮಟ್ಟ ಸುಧಾರಣೆ ಆಗುತ್ತಿದ್ದು, ರಾಜ್ಯದ ಜಿಡಿಪಿ ಹೆಚ್ಚಳವಾಗಿದ್ದು ತಲಾ ಆದಾಯದಲ್ಲಿ ಭಾರತದಲ್ಲೇ ಕರ್ನಾಟಕ ಮೊದಲ ಸ್ಥಾನದಲ್ಲಿದೆ ಎಂದರು.

ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿ ದೃಷ್ಟಿಯಿಂದ ರೂಪಿಸುವ ಯೋಜನೆ, ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ನಿರಂತರ ಮೇಲ್ವಿಚಾರಣೆ ಉದ್ದೇಶದಿಂದ ಕಲ್ಯಾಣ ಕರ್ನಾಟಕ ಪ್ರದೇಶ ಸಚಿವಾಲಯ ಸ್ಥಾಪನೆಗೆ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆ ತೀರ್ಮಾನಿಸಿದೆ. ಕಲ್ಯಾಣ ಕರ್ನಾಟಕದ ಭಾಗದಲ್ಲಿ ತ್ವರಿತ ಹಾಗೂ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಪ್ರತ್ಯೇಕ ಸಚಿವಾಲಯ ರಚನೆಯಾಗಬೇಕು ಎಂಬುದು ಈ ಭಾಗದ 7 ಜಿಲ್ಲೆಗಳ ಹಲವು ವರ್ಷಗಳ ಬೇಡಿಕೆ. ಅದಕ್ಕೆ ಸ್ಪಂದಿಸಿರುವ ಸರಕಾರಿ ಸಂಪುಟ ಸಭೆಯಲ್ಲಿ ಪ್ರತ್ಯೇಕ ಸಚಿವಾಲಯ ಸ್ಥಾಪಿಸುವ ನಿರ್ಣಯ ಕೈಗೊಂಡಿದೆ ಎಂದರು.

ಅಂದು ಬೆಳಿಗ್ಗೆ ಸರ್ದಾರ್ ವಲ್ಲಭಭಾಯಿ ಪಟೇಲರ ಭಾವಚಿತ್ರದ ಮೆರವಣಿಗೆ ಬಸವೇಶ್ವರ ವೃತ್ತದಿಂದ ಜಿಲ್ಲಾ ನೆಹರು ಕ್ರೀಡಾಂಗಣದವರೆಗೆ ನಡೆಯಿತು.

ಈ ಕಾರ್ಯಕ್ರಮದಲ್ಲಿ ಬೀದರ ಸಂಸದರಾದ ಸಾಗರ್ ಖಂಡ್ರೆ,ಬೀದರ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಕೆ.ಬೆಲ್ದಾಳೆ, ನಗರಸಭೆ ಅಧ್ಯಕ್ಷರಾದ ಮೊಹ್ಮದ ಗೌಸ್, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಬೀದರ ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶೀಶ್ ರೆಡ್ಡಿ, ಪ್ರೋಬೇಷನರಿ ಐಎಎಸ್ ಅಧಿಕಾರಿ ರಮ್ಯಾ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಶಾಲಾ–ಕಾಲೇಜಿನ ವಿದ್ಯಾರ್ಥಿಗಳು, ಶಿಕ್ಷಕರು ಸೇರಿದಂತೆ ಹಲವಾರು ಜನರು ಉಪಸ್ಥಿತರಿದ್ದರು.

# ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಸೆ.17:ತಾಲ್ಲೂಕು ಪಂಚಾಯತ್ ಕಚೇರಿ ಆವರಣದಲ್ಲಿ ಕಲ್ಯಾಣ ಕರ್ನಾಟಕ ದಿನಾಚರಣೆ ಹಾಗೂ ಶ್ರೀ.ವಿಶ್ವಕರ್ಮ ಜಯಂತಿ ಆಚರಿಸಲಾಯಿತು.ಜಯಂತಿ ಅಂಗವಾಗಿ ತಾ.ಪಂ. ಇ.ಓ. ಹಣಮಂತರಾಯ ಕೌಟಗೆ ಸ ಅವರು ವಿಶ್ವಕರ್ಮ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಧ್ವಜಾ–ರೋಣ ನೆರವೇರಿಸಿದರು. ನಂತರ ತಹಶೀಲ್ದಾರ ಅಮೀತ ಕುಲಕರ್ಣಿ ಸ ಅವರು ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನಕ್ಕೆ ಚಾಲನೆ ನೀಡಿದರು.ಎಲ್ಲರೂ ಸ್ವಚ್ಛತಾ ಬಗ್ಗೆ ಗಮನ ಕೂಡುವಂತೆ ತಿಳಿಸಿದರು.ಈ ಸಂದರ್ಭದಲ್ಲಿ ಸಿಪಿಓ ಶ್ರೀಕಾಂತ ಅಲ್ಲಾಪೂರ, ಗ್ರಾ.ಪಂ.ಅಧ್ಯಕ್ಷರು, ಪಿಡಿಓ ಶೇಷಪ್ಪಾ, ರೈತ ಸಂಘದ ಸದಸ್ಯರು, ಶಾಲಾ ಶಿಕ್ಷಕರು, ಮಕ್ಕಳು, ತಾ.ಪಂ. ಸಿಬ್ಬಂದಿಗಳು, ನರೇಗಾ ಸಿಬ್ಬಂದಿಗಳು, ಎನ್. ಆರ್.ಎಲ್. ಎಮ್ ಸಿಬ್ಬಂದಿಗಳು ಮತ್ತು ಸ್ವ ಸಹಾಯ ಸಂಘದ ಮಹಿಳೆಯರು ಹಾಗೂ ಇತರರು ಇದ್ದರು.

# ಸೆ.24 ರ ರೆಡ್ಡಿ ಜನ ಸಂಘದ ಶತಮಾನೋತ್ಸವ ಮುಂದೂಡಿಕೆ: ಬ್ಯಾಂಕ್ ರಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಸೆ.17: ಇದೆ ಸೆಪ್ಟೆಂಬರ್

24 ರಂದು ರೆಡ್ಡಿ ಜನ ಸಂಘದ ಶತಮಾನೋತ್ಸವ ಕಾರ್ಯಕ್ರಮ ಬೆಂಗಳೂರಿನಲ್ಲಿ ಏರ್ಪಡಿಸಲಾಗಿತ್ತು. ಕೆಲ ಕಾರಣಾಂತರದಿಂದ ಸಭೆಯನ್ನು ಮುಂದೂಡಲಾಗಿದೆ. ಸಭೆಯ ಮುಂದಿನ ದಿನಾಂಕವನ್ನು ತಿಳಿಸಲಾಗುವುದು ಎಂದು ರೆಡ್ಡಿ ಸಮಾಜದ

ತಾಲೂಕಾ

ಅಧ್ಯಕ್ಷ ಬ್ಯಾಂಕ್ ರಡ್ಡಿ ಅವರು ಪತ್ರಿಕಾ ಪ್ರಕಟಣೆಯ ಮುಖಾಂತರ ತಿಳಿಸಿದ್ದಾರೆ.

# ಬೆಳೆ ಹಾನಿ:ಜಂಟಿ ಸಮೀಕ್ಷೆ ವರದಿ ಬಂದ ನಂತರ ಪರಿಹಾರ ಬಿಡುಗಡೆಗೆ ಕ್ರಮ:ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.17: ಕಲ್ಯಾಣ ಕರ್ನಾಟಕ ಭಾಗದ ಕಲಬುರಗಿ, ಬೀದರ, ಯಾದಗಿರಿ ಜಿಲ್ಲೆಯಲ್ಲಿ ಶೇ.50 ರಷ್ಟು ಹೆಚ್ಚುವರಿ ಮಳೆಯಿಂದ ಬೆಳೆ ಹಾನಿಯಾಗಿದ್ದು, ಈಗಾಗಲೆ ಜಂಟಿ ಸಮೀಕ್ಷೆಗೆ ಸೂಚಿಸಲಾಗಿದೆ. ವರದಿ ಬಂದ ನಂತರ ಬೆಳೆ ಪರಿಹಾರ ಬಿಡುಗಡೆಗೆ ಕ್ರಮ ವಹಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.ಬುಧವಾರ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ಭಾಗಿಯಾದ ನಂತರ ಸಾರ್ವಜನಿಕರ ಅಹವಾಲು ಆಲಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಾದ್ಯಂತ ಪ್ರಸಕ್ತ ವರ್ಷ ವಾಡಿಕೆಗಿಂತ ಶೇ.4 ರಷ್ಟು ಮಳೆಯಾಗಿದೆ. ಕೆಲವು ಭಾಗದಲ್ಲಿ ಇದರ ಪ್ರಮಾಣ ಹೆಚ್ಚಿದೆ ಎಂದ ಅವರು, ರೈತರ ಬೆಳೆಸಾಲ ಮನ್ನಾ ಪರಿಶೀಲಿಸಲಾಗವುದು ಎಂದರು.

ಕಳೆದ 2024–25ನೇ ಸಾಲಿನಲ್ಲಿ ಬೆಳೆ ವಿಮೆ ಯೋಜನೆಯಡಿ ದಾಖಲೆ ಪ್ರಮಾಣದಲ್ಲಿ ಕಲಬುರಗಿ ಜಿಲ್ಲೆಗೆ 650 ಕೋಟಿ ರೂ. ಪರಿಹಾರ ಒದಗಿಸಿದೆ. ಈಗ ನಡೆಯುತ್ತಿರುವ ಜಂಟಿ ಸಮೀಕ್ಷೆ ಒಂದು ವಾರದಲ್ಲಿ ಪೂರ್ಣಗೊಳ್ಳಲಿದೆ. ವರದಿ ಸರ್ಕಾರಕ್ಕೆ ಬಂದ ಬಳಿಕ ಬೆಳೆ ಪರಿಹಾರದ ಕುರಿತು ಸೂಕ್ತ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದರು.

ಕಳೆದ ವರ್ಷ ಅತಿವೃಷ್ಟಿ ಹಾನಿಗೆ ಎನ್.ಡಿ.ಆರ್.ಎಫ್ ಮಾರ್ಗಸೂಚಿಯಂತೆ ಪರಿಹಾರ ನೀಡಲು ಕೇಂದ್ರಕ್ಕೆ ಪತ್ರ ಬರೆದು ಸ್ವತ ಖುದ್ದಾಗಿ ಕೇಂದ್ರದ ಗೃಹ ಸಚಿವ ಅಮಿತ ಶಹಾ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮ ಅವರನ್ನು ಕಂಡು ಮನವಿ ಸಲ್ಲಿಸಿದರು ಪರಿಹಾರ ದೊರಕಲಿಲ್ಲ. ಕೊನೆಗೆ ಸುಪ್ರೀಂ ಕೋರ್ಟ್ ಮೆಟ್ಟಿಲೇರಿ ಪರಿಹಾರ ಪಡೆಯಬೇಕಾಯಿತು ಎಂದು ಕೇಂದ್ರ ಸರ್ಕಾರದ ಅಸಹಕಾರದ ಕುರಿತು ಬೇಸರ ವ್ಯಕ್ತಪಡಿಸಿದರು.

ವಿಜಯಪುರ ಜಿಲ್ಲೆಯ ಚಡಚಣ ಬ್ಯಾಂಕ್ ದರೋಡೆ ಪ್ರಕರಣ ಕುರಿತು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಸಿ.ಎಂ. ಅವರು, ಜಿಲ್ಲೆಯ ಎಸ್.ಪಿ. ಅವರೊಂದಿಗೆ ಮಾತನಾಡಿ ಕೂಡಲೆ ಅರೋಪಿಗಳನ್ನು ಪತ್ತೆ ಹಚ್ಚಿ ಬಂಧಿಸುವಂತೆ ಸೂಚನೆ ನೀಡಿದ್ದೇನೆ. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಈ ಬಾರಿ ಕಳೆದ ಬಾರಿಗಿಂತ ಹೆಚ್ಚುವರಿ ಶಿಕ್ಷಕರನ್ನು ಎಣಿಕೆಗೆ ನೇಮಿಸಲಾಗಿದೆ. ಒಟ್ಟಾರೆ 1.75 ಲಕ್ಷ ಶಿಕ್ಷಕರನ್ನು ಈ ಕಾರ್ಯಕ್ಕೆ ನಿಯೋಜಿಸಿದೆ ಎಂದರು.

ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್ ಇದ್ದರು.

# ಮುಖ್ಯಮಂತ್ರಿಗಳಿಂದ 649.47 ಕೋಟಿ ರೂ. ಮೊತ್ತದ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.17: ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ–ಯ ಸಮಾರಂಭದಲ್ಲಿ ಬುಧವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಭಾಗದ ಕೆ.ಕೆ.ಆರ್.ಡಿ.ಬಿ ಮತ್ತು ಇತರೆ ಇಲಾಖೆಯ 570.05 ಕೋಟಿ ರೂ. ಮೊತ್ತದ 133 ಕಾಮಗಾರಿಗಳಿಗೆ ಅಡಿಗಲ್ಲು ಮತ್ತು 79.41 ಕೋಟಿ ರೂ. ಮೊತ್ತದ 26 ಕಾಮಗಾರಿಗಳ ಲೋಕಾರ್ಪಣೆ ಸೇರಿದಂತೆ ಒಟ್ಟಾರೆ 649.47 ಕೋಟಿ ರೂ. ಮೊತ್ತದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು. ಇದರಲ್ಲಿ ಕೆ.ಕೆ.ಆರ್.ಡಿ.ಬಿ. ಅನುದಾನದಡಿಯಲ್ಲಿ 350.05 ಕೋಟಿ ರೂ. ಮೊತ್ತದ 112 ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರೆ 3.35 ಕೋಟಿ ರೂ. ಮೊತ್ತದ

4 ಕಾಮಗಾರಿಗಳನ್ನು ಲೋಕಾರ್ಪಣೆ ಮಾಡಿದರು. ಅದೇ ರೀತಿ ವಿವಿಧ ಇಲಾಖೆಯ 220 ಕೋಟಿ ರೂ. ಮೊತ್ತದ 21 ಕಾಮಗಾರಿಗಳಿಗೆ ಅಡಿಗಲ್ಲು ಮತ್ತು 76.06 ಕೋಟಿ ರೂ. ಮೊತ್ತದ 22 ಕಾಮಗಾರಿಗಳನ್ನು ಉದ್ಘಾಟಿಸಿ ಪ್ರದೇಶಕ್ಕೆ ಸಮರ್ಪಿಸಿದರು.

ಹಾರ್ಟ್ ಲೈನ್ ಯೋಜನೆಗೆ ಚಾಲನೆ: ಪ್ರದೇಶದಲ್ಲಿ ಹೃದ್ರೋಗದಿಂದ ಸಾವನಪ್ಪುವರ ಸಂಖ್ಯೆ ತಗ್ಗಿಸಲು ಮತ್ತು ಗೋಲ್ಡನ್ ಹವರ್‌ನಲ್ಲಿ ಹೃದಯಾಘಾತಕ್ಕೊಳಗಾದವರಿಗೆ ತ್ವರಿತವಾಗಿ ಚಿಕಿತ್ಸೆ ನೀಡುವ ನಿಟ್ಟಿನಲ್ಲಿ ಕೆ.ಕೆ.ಆರ್.ಡಿ.ಬಿ ಮಂಡಳಿಯಿಂದ 9.60 ಕೋಟಿ ರೂ.ಗಳ ಮೊತ್ತದಲ್ಲಿ "ಕೆ.ಕೆ.ಆರ್.ಡಿ.ಬಿ. ಹಾರ್ಟ್ ಲೈನ್" ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದಿಲ್ಲಿ ಚಾಲನೆ ನೀಡಿದ್ದರು. ಈ ಯೋಜನೆಯಡಿ ಕಲಬುರಗಿ ಜಿಲ್ಲೆಗೆ 9, ಬೀದರ–4, ಯಾದಗಿರಿ–2, ರಾಯಚೂರು–5, ಬಳ್ಳಾರಿ–4, ಕೊಪ್ಪಳ–5, ವಿಜಯನಗರ–3 ಸೇರಿದಂತೆ ಒಟ್ಟು ಅತ್ಯಾಧುನಿಕ 32 ಅಂಬುಲೆನ್ಸ್ ವಾಹನಗಳನ್ನು ಹೃದಯಾಘಾತದ ತುರ್ತು ಸಂದರ್ಭದಲ್ಲಿ ಅವಶ್ಯಕವಾಗಿರುವ ಉಪಕರಣಗಳೊಂದಿಗೆ ಆರೋಗ್ಯ ಇಲಾಖೆಗೆ ಹಸ್ತಾಂತರಿಸಲಾಯಿತು. ಕಾರ್ಡಿಯಕ್ ಮಾನಿಟರ್, ಡೆಫಿಬ್ರಿಲೇಟರ್, ಪೋರ್ಟೆಬಲ್ ವೆಂಟಿಲೇಟರ್, ಅಂಬು ಬ್ಯಾಗ್, ಎಮರ್ಜೆನ್ಸಿ ಡ್ರಗ್ಸ್ ಸೇವೆಗಳನ್ನು ಈ ಅಂಬುಲೆನ್ಸ್ ಹೊಂದಿವೆ.

ಈ ಸಂದರ್ಭದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಎಸ್.ಸುಧಾಕರ್, ಗ್ರಾಮೀಣಾಭಿವೃದ್ಧಿ

ಮತ್ತು ಪಂಚಾಯತ್ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ, ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಕರ್ನಾಟಕ ರೇಷ್ಮೆ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷೆ ಕನೀಜ್ ಫಾತಿಮಾ, ಸಂಸದ ರಾಧಾಕೃಷ್ಣ ದೊಡ್ಡಮನಿ, ಶಾಸಕರಾದ ಅಲ್ಲಮಪ್ರಭು ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶಶೀಲ್ ನಮೋಶಿ, ಬಿ.ಜಿ.ಪಾಟೀಲ, ತಿಪ್ಪಣಪ್ಪ ಕಮಕನೂರು, ಜಗದೇವ ಗುತ್ತೇದಾರ, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ

ನಿಗಮದ ಅಧ್ಯಕ್ಷ ದೇವೆಂದ್ರಪ್ಪ ಮರತೂರು, ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ

ಬಾಬುರಾವ ಚಿಂಚನಸೂರು, ಕಲಬುರಗಿ ಮಹಾನಗರ ಪಾಲಿಕೆಯ ಮೇಯರ್ ವರ್ಷಾ ಜಾನೆ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಂ ಖಾನ್, ಗ್ಯಾರಂಟಿ ಯೋಜನೆ ಅನುಷ್ಠಾನಗಳ ಜಿಲ್ಲಾಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



ಹುಮನಾಬಾದ್ : ಮನೋಜ ಬುನ್ನಾ ರವರ ಹುಟ್ಟು ಹಬ್ಬದ ನಿಮಿತ್ಯ ಶ್ರೀ ಮಾಣಿಕ ವಿಹಾರ ಸಮಿತಿಯಿಂದ ಶುಭಾಶಯಗಳನ್ನು ಕೊರಲಾಯಿತು. ಬ್ರಾಹ್ಮಣ ಸಮಾಜ ಜಿಲ್ಲಾ ಅಧ್ಯಕ್ಷ ವೆಂಕಟೇಶ ಕುಲಕರ್ಣಿ,ಗುರಪ್ಪಾ ವಿಭೂತಿ. ಶಂಕರ ಅವಳಿ, ಹಣಮಂತಪ್ಪಾ, ಶ್ರೀಕಾಂತ ದೇವಣಿ, ಜಾಧವ ಸರ್, ವೈಜಿನಾಥ ಪಾಟೀಲ,ಮಲ್ಲಿಕಾರ್ಜುನ ಮಠಪತಿ, ಮಡಿವಾಳಯ್ಯ ಸ್ವಾಮಿ, ಹಣಮಂತ ಕಾಂಬ್ಳೆ, ಬಸವರಾಜ ಮಡಕನಳ್ಳಿ,ಶ್ರೀಕಾಂತ ಕುಲಕರ್ಣಿ ಸೇರಿದಂತೆ ಇತರರಿದ್ದರು

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.